♦ ಮಂಡ್ಯ ♦ ಮೈಸೂರು ♦ ಚಾಮರಾಜನಗರ ♦ ಹಾಸನ ♦ ರಾಮನಗರ ♦ ತುಮಕೂರು ♦ ಬೆಂಗಳೂರು ಗ್ರಾಮಾಂತರ ♦ ಬೆಂಗಳೂರು ನಗರ

E-mail:kayakayogi @gmail.com

website: www.kayakayogi.com

ಕಾಯಕ ಯೋಗಿ

ಸಂಪಾದಕರು:ಅರುಣಜ್ಯೋತಿ ಬಿ.ಕೆ. KAYAKA YOGI - Regional Daily ಪ್ರಾದೇಶಿಕ ದಿನಪತ್ರಿಕೆ

Connecting hearts in the cultural capital

ASK ಮೈಸೂರು

#askmysuru

RNI NO.KARKAN/2018/77805 | POST NO.KA/SK/MND/999/2022-2024 | ಮಂಡ್ಯ Mandya | ಸಂಪುಟ volume 07 | ಸಂಚಿಕೆ Issue 14 | ಗುರುವಾರ Thursday | 18-04-2024 | ಪುಟಗಳು Pages 06 | ಬೆಲೆ Rate 02 | ಸಂಪರ್ಕ 9980605484

ಕಾಂಗ್ರೆಸ್ ಬೆಂಬಲಿಸಿ ದೇಶ ಉಳಿಸಿ : ರಾಹುಲ್

■ ಕಾಯಕಯೋಗಿ ಸುದ್ದಿ

ಮಂಡ್ಯ : ಕೇಂದ್ರದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ದೇಶದ ಎಲ್ಲಾ ರೈತರ ಸಾಲ ಮನ್ನಾ ಮಾಡುತ್ತೇವೆ ಮತ್ತು ರಾಜ್ಯದಲ್ಲಿ ಬಡ ಮಹಿಳೆಯರಿಗೆ ಈಗಾಗಲೇ ನೀಡುತ್ತಿರುವ 24 ಸಾವಿರಕ್ಕೆ 1 ಲಕ್ಷ ರೂ. ಸೇರಿಸಿ 1 ಲಕ್ಷದ 20 ಸಾವಿರ ರೂಪಾಯಿ ನೀಡುತ್ತೇವೆ ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ಬುಧವಾರ ಭರವಸೆ ನೀಡಿದರು.

ಮಂಡ್ಯದ ಪಿಇಎಸ್ ಕಾಲೇಜು ಮೈದಾನದಲ್ಲಿ ನಡೆದ ಕಾಂಗ್ರೆಸ್ ಮಾವೇಶದಲ್ಲಿ ವಾತನಾಡಿದ ರಾಹುಲ್ ಗಾಂಧಿ, ಅಂಗನವಾಡಿ ಹಾಗೂ ಆಶಾ ಕಾರ್ಯಕರ್ತೆಯರ ಸಂಬಳ ಹೆಚ್ಚಿಸುತ್ತೇವೆ. ಸರ್ಕಾರಿ, ಅರೆ ಸರ್ಕಾರಿ ನೌಕರರ ಗುತ್ತಿಗೆ ಪದ್ಧತಿಯನ್ನು ರದ್ದುಗೊಳಿಸುತ್ತೇವೆ. ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಉದ್ಯೋಗ ಭದ್ರತಾ ಯೋಜನೆ ಜಾರಿ ಮಾಡುತ್ತೇವೆ ಎಂದು ಹೇಳಿದರು.

ದೇಶದಲ್ಲಿ ಕಾಂಗ್ರೆಸ್ ಪಕ್ಷದ ಪರ ಜನತೆ ಒಲವು ತೋರಿದ್ದಾರೆ. ಈ ಬಾರಿ ದೇಶದ ಮತದಾರರು ನಿರ್ಣಾಯಕ ಪಾತ್ರ ವಹಿಸಿವ ಮೂಲಕ ಇತಿಹಾಸ ಬದಲಿಸಲಿದ್ದಾರೆ. ಕೈ ಬಲಪಡಿಸುವ ಮೂಲಕ ದೇಶ ಉಳಿಸುವ ಸಂಕಲ್ಪ ತೊಡಬೇಕೆಂದರು.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ನುಡಿದಂತೆ ನಡೆದಿದ್ದೇವೆ. 5 ಗ್ಯಾರಂಟಿ ಯೋಜನೆಗಳಿಂದ ರಾಜ್ಯದ ಬಡವರಿಗೆ, ಮಹಿಳೆಯರಿಗೆ, ಯುವಕರಿಗೆ ಅನುಕೂಲವಾಗಿದೆ. ಮೋದಿ ನೇತೃತ್ವದ ಕೇಂದ್ರ ಸರ್ಕಾರದಿಂದ ರೈತರಿಗೆ ನ್ಯಾಯ ಸಿಕ್ಕಿಲ್ಲ. ಕನ್ಯಾಕುಮಾರಿಯಿಂದ ಕಾಶ್ಮೀರದವರೆಗೆ ಭಾರತ್ ಜೋಡೋ ಯಾತ್ರೆ ಮಾಡಿದ್ದು, ಈ ವೇಳೆ ರೈತರ ಸಂಕಷ್ಟ ನೋಡಿದ್ದೇನೆ ಎಂದರು.

ಈ ಲೋಕಸಭೆ ಚುನಾವಣೆಯು ಎರಡು ಸಿದ್ಧಾಂತಗಳ ನಡುವಿನ ಯುದ್ಧ ಇಂಡಿಯಾ ಬಣ ಒಂದು ಕಡೆ "ಸಂವಿಧಾನಕ್ಕಾಗಿ ಹೋರಾಟ" ನಡೆಸುತ್ತಿದೆ ಮತ್ತು ಇನ್ನೊಂದು ಕಡೆ "ಸಂವಿಧಾನ ಮತ್ತು ಪ್ರಜಾಪ್ರಭುತ್ವವನ್ನು ಹಾಳು ಮಾಡಲು" ಬಿಜೆಪಿ ಹೋರಾಟ ನಡೆಸುತ್ತಿದೆ ಎಂದರು.

ಇಂಡಿಯಾ ಬಣ ಅಧಿಕಾರಕ್ಕೆ ಬಂದರೆ, ಅದು "ಸಾಮಾನ್ಯ ನಾಗರಿಕರು, ರೈತರು, ಕಾರ್ಮಿಕರು ಮತ್ತು ವ್ಯಾಪಾರಿಗಳ ಸರ್ಕಾರವಾಗಿರುತ್ತದೆ" ಎಂದು ರಾಹುಲ್ ಗಾಂಧಿ ಅವರು ಚುನಾವಣೆಗಾಗಿ ತಮ್ಮ ಪಕ್ಷ ಬಿಡುಗಡೆ ಮಾಡಿದ ಪ್ರಣಾಳಿಕೆಯನ್ನು ಎತ್ತಿ ತೋರಿಸಿದರು. " ಬಿಜೆಪಿ ಸರ್ಕಾರ ಕೇವಲ 22 ರಿಂದ 25 ಶ್ರೀಮಂತರಿಗಾಗಿ ಕೆಲಸ ಮಾಡುತ್ತಿದೆ. ಆದರೆ ಕಾಂಗ್ರೆಸ್ ಸಾಮಾನ್ಯ ನಾಗರಿಕರು, ರೈತರು, ಕಾರ್ಮಿಕರು ಮತ್ತು ವ್ಯಾಪಾರಿಗಳಿಗಾಗಿ ಕೆಲಸ ಮಾಡುವ ಸರ್ಕಾರವನ್ನು ನೀಡುತ್ತದೆ ಎಂದು ಹೇಳಿದರು.

ಅಧಿಕಾರಕ್ಕೆ ಬಂದರೆ ರೈತರ ಸಾಲ ಮನ್ನಾ



* ಮಹಿಳೆಯರಿಗೆ 1.20 ಲಕ್ಷ
* ಆಶಾ–ಅಂಗನವಾಡಿ ವೇತನ ಹೆಚ್ಚಳ
* ಗುತ್ತಿಗೆ ನೌಕರರ ಪದ್ಧತಿ ರದ್ದು
* ಸಂವಿಧಾನ ಭದ್ರತೆಗೆ ಬದ್ಧ

ಚುಟುಕು ಸುದ್ದಿ

ಬಿಜೆಪಿ ಸೇರಿದ ಅಖಂಡ ಶ್ರೀನಿವಾಸ ಮೂರ್ತಿ

ಬೆಂಗಳೂರು: ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ಸಮ್ಮುಖದಲ್ಲಿ ಕಾಂಗ್ರೆಸ್ ಮಾಜಿ ಸಂಸದ ಅಖಂಡ ಶ್ರೀನಿವಾಸ ಮೂರ್ತಿ ಅಧಿಕೃತವಾಗಿ ಬಿಜೆಪಿ ಸೇರಿದ್ದಾರೆ. ಟಿಕೆಟ್ ನಿರಾಕರಿಸಿದ್ದಕ್ಕೆ ಅಸಮಾಧಾನಗೊಂಡಿರುವ ಪುಲಿಕೇಶಿ ನಗರ ಜಿಲ್ಲೆಯ ತಮ್ಮ ಬೆಂಬಲಿಗರೊಂದಿಗೆ ಬಿಜೆಪಿಗೆ ಸೇರ್ಪಡೆಯಾದರು. ಯಡಿಯೂರಪ್ಪ ಅವರು ಪಕ್ಷದ ಧ್ವಜ ನೀಡಿ ಶಾಲು ಹೊದಿಸಿ ಪಕ್ಷಕ್ಕೆ ಬರಮಾಡಿಕೊಂಡರು. ಬೆಂಗಳೂರು ಉತ್ತರ ಕ್ಷೇತ್ರದ ಅಭ್ಯರ್ಥಿ ಶೋಭಾ ಕರಂದ್ಲಾಜೆ, ರಾಜ್ಯಸಭೆ ಸದಸ್ಯ ಲೆಹರ್ ಸಿಂಗ್, ಶಾಸಕ ಸುನೀಲ್ ಕುಮಾರ್ ಮತ್ತಿತರರು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಮಾತನಾಡಿದ ಯಡಿಯೂರಪ್ಪ ಅವರು, ಅಖಂಡ ಶ್ರೀನಿವಾಸ ಮೂರ್ತಿ ಬಿಜೆಪಿ ಸೇರಿ ನಮಗೆ ದೊಡ್ಡ ಶಕ್ತಿ ತಂದಿದ್ದಾರೆ. ಅವರು ಎರಡೂವರೆ ಯಿಂದ ಮೂರು ಲಕ್ಷ ಮತಗಳ ಅಂತರದಿಂದ ಗೆಲ್ಲುತ್ತಾರೆ ಎಂಬ ವಿಶ್ವಾಸ ನನಗಿದೆ. ಅಖಂಡ ಚುನಾವಣೆ ಸಮಯದಲ್ಲಿ ಬಂದಿರೋದ್ರಿಂದ ಶೋಭಾ ಅವರು ದೊಡ್ಡ ಅಂತರದಲ್ಲಿ ಗೆಲ್ಲಲು ಅನುಕೂಲ ಆಗಲಿದೆ ಎಂದು ಆಶಯ ವ್ಯಕ್ತಪಡಿಸಿದರು.

ಚಿಲ್ಲರೆ ಹೇಳಿಕೆಗಳಿಗೆ ಪ್ರತಿಕ್ರಿಯಿಸಲ್ಲ: ಹೆಚ್‌ಡಿಡಿ ವಿರುದ್ಧ ಡಿಕೆಶಿ ಕಿಡಿ

ಬೆಂಗಳೂರು: ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ವಿರುದ್ಧ ಡಿಕೆ ಶಿವಕುಮಾರ್ ಕೆಂಡಾಮಂಡಲ ಆಗಿದ್ದು, ಚಿಲ್ಲರೆ ಹೇಳಿಕೆಗಳಿಗೆ ಪ್ರತಿಕ್ರಿಯೆ ನೀಡಲ್ಲ ಎಂದಿದ್ದಾರೆ. 9 ವರ್ಷದ ಹೆಣ್ಣು ಮಗಳನ್ನು ತೆಗೆದುಕೊಂಡು ಹೋಗಿ ಜಮೀನನ್ನು ಬರೆಸಿಕೊಂಡರು ಎಂಬ ಆರೋಪವನ್ನು ಚಿಲ್ಲರೆ ಎಂದ ಡಿಕೆಶಿ, ದಾಖಲೆ ಇದ್ದರೆ ಬಿಡುಗಡೆ ಮಾಡಲಿ, ತಪ್ಪು ಮಾಡಿದರೆ ನಾನು ಯಾವುದೇ ಶಿಕ್ಷೆಗೂ ರೆಡಿ ಇದ್ದೇನೆ ಎಂದು ದೇವೇಗೌಡರಿಗೆ ಸವಾಲು ಹಾಕಿದ್ದಾರೆ. ನಾನು ಏನು ಮೂರ್ಖನಲ್ಲ, ಚಿಲ್ಲರೆ ಹೇಳಿಕೆಗಳಿಗೆ ನಾನು ಪ್ರತಿಕ್ರಿಯೆ ನೀಡಲ್ಲ. ಆದರ ಬಗ್ಗೆ ಇನ್ನೊಂದು ವೇದಿಕೆಯಲ್ಲಿ ಚರ್ಚೆ ಮಾಡೋಣ ಎಂದು ಡಿಕೆಶಿ ಟಾಂಗ್ ಕೊಟ್ಟರು.

ಬಿಜೆಪಿ ಮಹಿಳಾ ಅಭ್ಯರ್ಥಿಯ ಅಧಿಕೃತ ಆಸ್ತಿ 1,400 ಕೋಟಿ ರೂ.

ಪಣಜಿ: ಉದ್ಯಮಿ ಶ್ರೀನಿವಾಸ್ ಡೆಂಪೊ ಅವರ ಪತ್ನಿ ಪಲ್ಲವಿ(49) ಡೆಂಪೊ ದಕ್ಷಿಣ ಗೋವಾ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಿದ್ದು, ಚುನಾವಣಾಧಿಕಾರಿಯ ಮುಂದೆ ಸಲ್ಲಿಸಿದ 119 ಪುಟಗಳ ಅಫಿಡವಿಟ್‌ನಲ್ಲಿ ತಮ್ಮ ಹಾಗೂ ಪತಿ ಶ್ರೀನಿವಾಸ್ ಡೆಂಪೊ ಅವರ ನಿವ್ವಳ ಮೌಲ್ಯ ಸುಮಾರು 1,400 ಕೋಟಿ ರೂಪಾಯಿ ತೋರಿಸಿದ್ದಾರೆ. ಪಲ್ಲವಿ ಅವರು 255.4 ಕೋಟಿ ವೌಲ್ಯದ ಚರಾಸ್ತಿಯನ್ನು ಹೊಂದಿದ್ದು, ಶ್ರೀನಿವಾಸ್ ಒಡೆತನದ ಆಸ್ತಿ ಮೌಲ್ಯ 994.8 ಕೋಟಿ ರೂಪಾಯಿ ಆಗಿದ್ದರೆ. ಪಲ್ಲವಿ ಅವರ ಸ್ಥಿರಾಸ್ತಿಯ ಒಟ್ಟು ಮಾರುಕಟ್ಟೆ ಮೌಲ್ಯ 28.2 ಕೋಟಿ ರೂಪಾಯಿಗಳಾಗಿದೆ.

ಮಂಡ್ಯ ಜಿಲ್ಲೆಗೆ ಎಚ್.ಡಿ.ದೇವೇಗೌಡರ ಕೊಡುಗೆ ಶೂನ್ಯ

■ ಕಾಯಕಯೋಗಿ ಸುದ್ದಿ

ಮಂಡ್ಯ: ಮಂಡ್ಯ ಜಿಲ್ಲೆ ನಮ್ಮ ಭೂಮಿ ಎಂದು ಹೋದಲ್ಲಿ ಬಂದಲ್ಲೆಲ್ಲಾ ಹೇಳಿಕೊಳ್ಳುವ ಮಂಡ್ಯ ಲೋಕಸಭಾ ಕ್ಷೇತ್ರದ ಎನ್‌ಡಿಎ ಅಭ್ಯರ್ಥಿ ಎಚ್.ಡಿ. ಕುಮಾರಸ್ವಾಮಿ ಹಾಗೂ ಅವರ ತಂದೆ ಎಚ್.ಡಿ. ದೇವೇಗೌಡರ ಕೊಡುಗೆ ಶೂನ್ಯ. ಅವರ ಹೆಸರೇಳುವ ಸಾಧನೆಯ ಸಾಕ್ಷಿ ಗುಡ್ಡೆ ಏನೂ ಇಲ್ಲ ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಕಿಡಿಕಾರಿದರು.

ನಗರದ ಮಂಡ್ಯ ವಿಶ್ವವಿದ್ಯಾಲಯದ ಮೈದಾನದಲ್ಲಿ ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಬುಧವಾರ ಏರ್ಪಡಿಸಿದ್ದ ಪ್ರಜಾಧ್ವನಿ–2 ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಎಚ್.ಡಿ. ದೇವೇಗೌಡರು ಮುಖ್ಯಮಂತ್ರಿ, ಪ್ರಧಾನಿಯಾಗಿದ್ದರು. ಅವರ ಮಗ ಎಚ್.ಡಿ. ಕುಮಾರಸ್ವಾಮಿ ಅವರು ಎರಡು ಬಾರಿ ಮುಖ್ಯಮಂತ್ರಿಯಾಗಿದ್ದರು. ಆದರೆ, ಅವರು ಮಂಡ್ಯ ಜಿಲ್ಲೆಗೆ ಗುರುತರವಾದ ಕೊಡುಗೆ ಏನನ್ನೂ ನೀಡಿಲ್ಲ. ಕೇವಲ ಜಿಲ್ಲೆಯ ಜನತೆಗೆ ದ್ರೋಹ ಬಗೆದಿದ್ದಾರೆ ಎಂದು ಕಿಡಿಕಾರಿದರು.

ಜಾತ್ಯತೀತ ಜನತಾದಳ ಬಿಜೆಪಿಯ 'ಬಿ' ಟೀಂ ಎಂದು ಸಿದ್ದರಾಮಯ್ಯ ಅವರು ಹೇಳುತ್ತಿದ್ದರು. ಅಂದು ನಾನು ಆರೀತಿ ಹೇಳಬೇಡಿ ಎಂದು ಹೇಳುತ್ತಿದ್ದೆ. ಈಗ ಅದು 'ಬಿ' ಟೀಂ ಹೋಗಿ 'ಎ 'ಟೀಂ ಆಗಿದೆ ಎಂದು ಲೇವಡಿ ಮಾಡಿದರು.

ರಾಹುಲ್ ಪಾದಯಾತ್ರೆ ನಡೆಸಿದ ಉದ್ದಕ್ಕೂ ಕಾಂಗ್ರೆಸ್ ಗೆದ್ದಿದೆ:

ರಾಹುಲ್ ಗಾಂಧಿ ಅವರು ರಾಜ್ಯದ ಚಾಮರಾಜನಗರದಿಂದ ಆರಂಭಿಸಿದ ಭಾರತ್ ಜೋಡೋ ಯಾತ್ರೆ ಸಂಚರಿಸಿದ ವಿಧಾನಸಭಾ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳು ಗೆದ್ದಿದ್ದಾರೆ. ಅವರ ಕಾಲ್ಗುಣ ಇಂಡ್ಯಾ ಗೆದ್ದಂತೆ ಎಂದು ಮೊದಲು ಮಂಡ್ಯ ನಗರಕ್ಕೇ ಬಂದು ಪ್ರಚಾರ ನಡೆಸಿದ್ದಾರೆ ಎಂದು ಶ್ಲಾಘಿಸಿದರು.

ಮೇಕೆದಾಟು ಯೋಜನೆ ಮಾಡೇ ಮಾಡ್ತೀವಿ:

5 ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಕ್ಕೆ ತರುವ ಮೂಲಕ ನುಡಿದಂತೆ ನಡೆದಿದ್ದೇವೆ. ಈ ಯೋಜನೆಗಳ ಜೊತೆಗೆ ಮೇಕೆದಾಟು ಯೋಜನೆಯನ್ನು ಮಾಡೇ ಮಾಡ್ತೀವಿ. ರಾಜ್ಯ ಮತ್ತು ಕೇಂದ್ರದಲ್ಲಿ ಅಧಿಕಾರದಲ್ಲಿದ್ದ ಡಬಲ್ ಇಂಜಿನ್ ಸರ್ಕಾರ ಇದ್ದರೂ ಈ ಯೋಜನೆಯನ್ನು ಮಾಡಿಲ್ಲ. ಈಗ ಒಪ್ಪಿಗೆಯನ್ನೂ ನೀಡುತ್ತಿಲ್ಲ. ಆದರೆ, ಕಾನೂನಾತ್ಮಕವಾಗಿ ಹೋರಾಡಿ ಮೇಕೆದಾಟು ಯೋಜನೆಯನ್ನು ಪೂರ್ಣಗೊಳಿಸುತ್ತೇವೆ ಎಂದು ಭರವಸೆ ನೀಡಿದರು.

6ನೇ ಪುಟಕ್ಕೆ

ಜೆಡಿಎಸ್ ಸಾಕ್ಷಿಗುಡ್ಡೆ ಏನು ಇಲ್ಲ : ಡಿಕೆಶಿ ಕಿಡಿ



ಬಿಜೆಪಿ ಅಭ್ಯರ್ಥಿ ವಿ.ಸೋಮಣ್ಣ ಭರ್ಜರಿ ರೋಡ್ ಶೋ ಮೇವು ತುಂಬಿದ್ದ ಲಾರಿಗೆ ಬೆಂಕಿ



■ ಕಾಯಕಯೋಗಿ ಸುದ್ದಿ

ಕೊರಟಗೆರೆ: ಒಂದು ವರ್ಷದಲ್ಲಿ ಕೊರಟಗೆರೆ, ಮಧುಗಿರಿ ಮಧ್ಯದಲ್ಲಿ ಕೇಂದ್ರೀಯ ವಿದ್ಯಾಲಯವನ್ನ ಸ್ಥಾಪನೆ ಮಾಡಲು ನನಗೆ ಈ ಭಾರಿ ಆರ್ಶಿವಾದ ಮಾಡಿ ಎಂದು ತುಮಕೂರು ಲೋಕಸಭಾ ಬಿಜೆಪಿ ಅಭ್ಯರ್ಥಿ ವಿ.ಸೋಮಣ್ಣ ಮನವಿ ಮಾಡಿದರು.

ತಾಲೂಕಿನ ಹೊಳವನಹಳ್ಳಿ ಹೋಬಳಿ ಕೇಂದ್ರದಲ್ಲಿ ಚುನಾವಣಾ ಪ್ರಚಾರ ಹಾಗೂ ರೋಡ್ ಶೋ ಸಂದರ್ಭದಲ್ಲಿ ಮತದಾರರನ್ನ ಉದ್ದೇಶಿಸಿ ಮಾತನಾಡಿದರು.

ಈ ದೇಶಕ್ಕೆ ಉತ್ತಮ ಭವಿಷ್ಯ ಇದೆ, ಹಾಗೆ ದೇಶದ ಸುಭದ್ರತೆಗೆ ಮತ್ತೆ ಈ ದೇಶದಲ್ಲಿ ನರೇಂದ್ರ ಮೋದಿಯವರು ಪ್ರಧಾನಮಂತ್ರಿ ಆದ್ರೆ ಮಾತ್ರ ದೇಶ ಅಭಿವೃದ್ಧಿ ಮಾಡಲು ಸಾಧ್ಯ. ಕಾಂಗ್ರೆಸ್ ಪಕ್ಷದಲ್ಲಿ ನರೇಂದ್ರ ಮೋದಿಯವರಿಗೆ ಸರಿಸಾಟಿ ಯಾರು ಇಲ್ಲ ಅದ್ದರಿಂದ ಮತ್ತೆ ತುಮಕೂರು ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಪಕ್ಷಕ್ಕೆ ಮತ ನೀಡುವ ಮೂಲಕ ನರೇಂದ್ರ ಮೋದಿಯವರ ಕೈ ಬಲಪಡಿಸಬೇಕು ಎಂದು ಮನವಿ ಮಾಡಿದರು.

ಈ ಚುನಾವಣೆ ದೇಶದ ಚುನಾವಣೆಯಾಗಿದ್ದು ಬೆಂಗಳೂರಿನ ಗೋವಿಂದರಾಜ ನಗರದಂತೆ ತುಮಕೂರು ಜಿಲ್ಲೆಯ ಎಂಟು ತಾಲೂಕನ್ನ ಅಭಿವೃದ್ಧಿ ಮಾಡಲು ಬಿಜೆಪಿ ಪಕ್ಷಕ್ಕೆ ಮತ ನೀಡಬೇಕು. ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ಅವರು ಈ ರಾಷ್ಟ್ರಕ್ಕೆ ಮೂರನೇ ಬಾರಿ ನರೇಂದ್ರ ಮೋದಿಯವರು ಪ್ರಧಾನಿಯಾದರೆ ದೇಶ ಅಭಿವೃದ್ಧಿ ಮಾಡಲು ಸಾಧ್ಯ ಎಂದು ಈಗಾಗಲೇ ಇಲ್ಲಾ ಕ್ಷೇತ್ರದಲ್ಲಿ ಪ್ರಚಾರ ಮಾಡುತ್ತಿದ್ದಾರೆ ಅದಕ್ಕೆ ಮತ್ತೆ ಈ ದೇಶದಲ್ಲಿ ಕಮಲ ಅರಳಬೇಕು ಎಂದು ತಿಳಿಸಿದರು.

ಮಾಜಿ ಶಾಸಕ ಪಿ.ಆರ್.ಸುಧಾಕರ್ ಲಾಲ್ ಮಾತನಾಡಿ ಈ ರಾಷ್ಟ್ರದಲ್ಲಿ ಮತ್ತೆ ನರೇಂದ್ರ ಮೋದಿಯವರನ್ನ ಪ್ರಧಾನ ಮಂತ್ರಿ ಮಾಡವ ಸಲುವಾಗಿ ಮಾಜಿ ಪ್ರಧಾನಿ ದೇವೇಗೌಡ ಹಾಗೂ ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಅವರು ಕರೆ ಕೊಟ್ಟಿದ್ದಾರೆ. ಇದರ ಜೊತೆಗೆ ನಮ್ಮ ಕ್ಷೇತ್ರದ ಅಭಿವೃದ್ಧಿಗೆ ಸಮರ್ಥ ನಾಯಕ ವಿ.ಸೋಮಣ್ಣ ಅವರಿಗೆ ಮತನೀಡಬೇಡಿ ನಮ್ಮ ಕ್ಷೇತ್ರದಿಂದ ಹೆಚ್ಚು ಮತ ನೀಡಿ ಜಯಶೀಲರನ್ನಾಗಿ ಮಾಡಬೇಕು ಎಂದು ಮನವಿ ಮಾಡಿದರು.



■ ಕಾಯಕಯೋಗಿ ಸುದ್ದಿ

ಹನೂರು: ತಾಲೂಕಿನ ಕುರಟ್ಟಿ ಹೊಸೂರು ಗ್ರಾಮದ ಗೋಶಾಲೆಗೆ ಮೇವು ತುಂಬಿಕೊಂಡು ಹೋಗುತ್ತಿದ್ದ ಲಾರಿಗೆ ಬೆಂಕಿ ಬಿದ್ದು ಮೇವು ಹಾಗೂ ಲಾರಿ ಸುಟ್ಟು ಹೋಗಿರುವ ಘಟನೆ ಬುಧವಾರ ಬೆಳಗ್ಗೆ ಜರುಗಿದೆ.

ಹನೂರು ತಾಲೂಕಿನಲ್ಲಿ ಸಮರ್ಪಕ ಮಳೆಯಾಗದ ಹಿನ್ನೆಲೆ ತಾಲೂಕಿನ ಕೌದಳ್ಳಿ ಮಲ್ಲಯ್ಯನಪುರ, ಕುರಟ್ಟಿ ಹೊಸೂರು ಗ್ರಾಮಗಳಲ್ಲಿ ಗೋಶಾಲೆ ತೆರೆಯಲಾಗಿದೆ.

ಬುಧವಾರ ಹುಬ್ಬಳ್ಳಿಯಿಂದ ಹನೂರು ತಾಲೂಕಿನ ಕುರಟ್ಟಿ ಹೊಸೂರು ಗೋಶಾಲೆಗೆ ಸುಮಾರು ಎಂಟು ಟನ್ ಮೇವು ತುಂಬಿಕೊಂಡು ಹೋಗುತ್ತಿದ್ದ ವೇಳೆ ರಾಮಾಪುರ ಸಮೀಪದ ಕೆಂಪಯ್ಯನ ಹಟ್ಟಿ ಸರ್ಕಾರಿ ಪಿರಿಯ ಪ್ರಾಥಮಿಕ ಶಾಲೆಯ ಮುಂಭಾಗ ಇರುವ ವಿದ್ಯುತ್ ತಂತಿ ತಗುಲಿ ಬೆಂಕಿ ಹತ್ತಿಕೊಂಡಿದೆ. ತಕ್ಷಣ ಜಾಲಕನ ಸಮಯ ಪ್ರಜ್ಞೆಯಿಂದ ಲಾರಿಯನ್ನು ಸಮೀಪದಲ್ಲಿರುವ ಖಾಸಗಿ ಜಮೀನಿನಲ್ಲಿ ನಿಲ್ಲಿಸಿ ಪ್ರಾಣಾಪಯದಿಂದ ಪಾರಾಗಿದ್ದಾನೆ.

6ನೇ ಪುಟಕ್ಕೆ

ರೈತರ ನೋವಿಗೆ ಧನಿಯಾಗಿ ಕೆಲಸ ಮಾಡಲು ಬೆಂಬಲಿಸಿ: ಎಚ್.ಡಿ.ಕುಮಾರಸ್ವಾಮಿ

■ ಕಾಯಕಯೋಗಿ ಸುದ್ದಿ

ಕೃಷ್ಣರಾಜಪೇಟೆ: ರಾಜ್ಯದ ರೈತರ ಸ್ವಾಭಿಮಾನವನ್ನು ಎತ್ತಿಹಿಡಿಯಲು, ರೈತ ವಿರೋಧಿ ಕಾಂಗ್ರೆಸ್ ಸರ್ಕಾರಕ್ಕೆ ತಕ್ಕ ಉತ್ತರ ನೀಡಲು, ರೈತರ ನೋವಿಗೆ ಧನಿಯಾಗಿ ಕೆಲಸ ಮಾಡಲು ನನ್ನನ್ನು ಬೆಂಬಲಿಸಿ ಹರಸಿ ಆಶೀರ್ವದಿಸಿ ಎಂದು ಮಂಡ್ಯ ಲೋಕಸಭಾ ಕ್ಷೇತ್ರದ ಮೈತ್ರಿ ಅಭ್ಯರ್ಥಿ ಮಾಜಿ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ಕೈಮುಗಿದು ಮನವಿ ಮಾಡಿದರು.

ಕೆ.ಆರ್.ಪೇಟೆ ಪಟ್ಟಣದ ಪುರಸಭಾ ಕಛೇರಿಯ ಪಕ್ಕದ ಮೈದಾನದಲ್ಲಿ ನಡೆದ ಜೆಡಿಎಸ್–ಬಿಜೆಪಿ ಕಾರ್ಯಕರ್ತರ ಮೈತ್ರಿ ಪ್ರಚಾರ ಸಭೆಯಲ್ಲಿ ಭಾಗವಹಿಸಿ ಮಾತನಾಡಿ ಮಾತಯಾಚನೆ ಮಾಡಿದರು.

ನನ್ನನ್ನು ಸೋಲಿಸಲೇಬೇಕೆಂದು ನನ್ನ ಮಿತ್ರ ಚಲುವರಾಯಸ್ವಾಮಿ, ಮುಖ್ಯಮಂತ್ರಿ ಸಿದ್ಧರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನನ್ನ ವಿರುದ್ಧ ಕೋಟ್ಯಾಧಿಪತಿಯನ್ನು ಸ್ಪರ್ಧೆಗಿಳಿಸಿ ರಾಹುಲ್‌ಗಾಂಧಿ ಅವರನ್ನು ಮಂಡ್ಯಕ್ಕೆ ಕರೆತಂದು ಪ್ರಚಾರ ಮಾಡಿಸುತ್ತಿದ್ದಾರೆ. ಜಿಲ್ಲೆಯ ಜನರ ಪ್ರೀತಿ ವಿಶ್ವಾಸ ನನ್ನ ಮೇಲಿರುವವರೆಗೆ ನನ್ನನ್ನು ಸೋಲಿಸಲು ಯಾವುದೇ ದುಷ್ಟ ಶಕ್ತಿಗಳಿಂದ ಸಾಧ್ಯವಿಲ್ಲ. ಕುಮಾರಸ್ವಾಮಿಯ ಕೊಡುಗೆ ಮಂಡ್ಯ ಜಿಲ್ಲೆಗೆ ಏನೆಂದು ಪ್ರಶ್ನಿಸುವ ಕಾಂಗ್ರೆಸ್ ನಾಯಕರಿಗೆ ನೈತಿಕತೆಯಿಲ್ಲ ನಾನು ಮುಖ್ಯಮಂತ್ರಿಯಾಗಿದ್ದಾಗ ರಾಜ್ಯಕ್ಕೆ ಕೊಡುಗೆಯಾಗಿ ನೀಡಿರುವ ಶಾಲಾ ಕಾಲೇಜುಗಳಿಂದ 56 ಸಾವಿರ ಕುಟುಂಬಗಳು ಸರ್ಕಾರಿ ಉದ್ಯೋಗ ಪಡೆದುಕೊಂಡು ನೆಮ್ಮದಿಯ ಜೀವನ ನಡೆಸುತ್ತಿವೆ. ರಾಜ್ಯದಲ್ಲಿ ಖಾಲಿ ಬಿದ್ದಿರುವ ಸರ್ಕಾರಿ ಹುದ್ದೆಗಳನ್ನು ತುಂಬಲು ಶಕ್ತಿಯಿಲ್ಲದ ಕಾಂಗ್ರೆಸ್ ಸರ್ಕಾರವು ಗ್ಯಾರಂಟಿಗಳ ಹೆಸರಿನಲ್ಲಿ ಜನತೆಯನ್ನು ದಿಕ್ಕುತಪ್ಪಿಸಿ ಮೋಸ ಮಾಡುತ್ತಿದೆ. ಪೂರ್ವದಲ್ಲಿ ಸೂರ್ಯ ಬೆಳಗ್ಗೆ ಉದಯಿಸುವುದು ಎಷ್ಟು ಸತ್ಯವೋ ನರೇಂದ್ರ ಮೋದಿಜಿ ಅವರು ಮತ್ತೊಮ್ಮೆ ಭಾರತ ದೇಶದ ಪ್ರಧಾನಿಗಳಾಗಿ ಅಧಿಕಾರಕ್ಕೆ ಬರುವುದು ಅಷ್ಟೇ ಸತ್ಯವಾಗಿದೆ. ನನ್ನ ಹಣೆಬರಹ ಬರೆಯುವವರು ಜಿಲ್ಲೆಯ ಪ್ರಜ್ಞಾವಂತ ಮತ

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ-2 | 18-04-2024

ಮಂಡ್ಯ

ಚೆಕ್‌ಪೋಸ್ಟ್‌ಗೆ ಜಿಲ್ಲಾಧಿಕಾರಿ ಭೇಟಿ, ಪರಿಶೀಲನೆ

■ ಕಾಯಕಯೋಗಿ ಸುದ್ದಿ

ಮಂಡ್ಯ : ಜಿಲ್ಲಾಧಿಕಾರಿ ಡಾ: ಕುಮಾರ ಅವರು ಇಂದು ಮದ್ದೂರು ತಾಲ್ಲೂಕಿನ ಮಲ್ಲನಕುಪ್ಪೆ ಚೆಕ್ ಪೋಸ್ಟ್ ಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಚೆಕ್ ಪೋಸ್ಟ್‌ನಲ್ಲಿ ಚಲಿಸುವ ಎಲ್ಲಾ ವಾಹನಗಳ ಪರಿಶೀಲನೆ ನಡೆಸಬೇಕು.

ತಾವು ಮಾಡುವ ಕೆಲಸಗಳನ್ನು ಜಿಲ್ಲಾ ದೂರು ನಿರ್ವಾಹಣಾ ಕೋಶದಿಂದ ವೀಕ್ಷಿಸಲಾಗುತ್ತಿದೆ. ಇದರ ಜೊತೆಗೆ ಸಹಾಯಕ ಚುನಾವಣಾಧಿಕಾರಿಗಳು ಹಾಗೂ ವೀಕ್ಷಕರು ಸಹ ತಮ್ಮ ಕೆಲಸಗಳ ಬಗ್ಗೆ ನಿಗಾ ವಹಿಸುತ್ತಾರೆ. ಜವಾಬ್ದಾರಿಯಿಂದ ಕಾರ್ಯನಿರ್ವಹಿಸಿ ಲೋಪ ಕಂಡುಬಂದರೆ ನೋಟೀಸ್ ಜಾರಿ ಮಾಡಿ ಆರ್.ಪಿಆಕ್ಟ್ ಅಡಿ ಕ್ರಮ ಕೈಗೊಳ್ಳುವುದಾಗಿ ಎಚ್ಚರಿಕೆ ನೀಡಿದರು.

ಇದೇ ಸಂದರ್ಭದಲ್ಲಿ ಜಿ.ಪಂ. ಸಿಇಓ ಶೇಖ್ ತನ್ವೀರ್ ಆಸಿಫ್, ಸಹಾಯಕ ಚುನಾವಣಾಧಿಕಾರಿ ಲೋಕನಾಥ್ ಸೇರಿದಂತೆ ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.



ಏ.23, 24 –25 ರಂದು ಚುನಾವಣಾ ಕರ್ತವ್ಯ ನಿರತ ಪೊಲೀಸ್ ಸಿಬ್ಬಂದಿಗಳಿಗೆ ಮತದಾನ

ಮಂಡ್ಯ : 20 –ಮಂಡ್ಯ ಲೋಕಸಭಾ ಸಾರ್ವತ್ರಿಕ ಚುನಾವಣೆ 2024ರ ಸಂಬಂಧ ಚುನಾವಣಾ ಕರ್ತವ್ಯ ನಿರತ ಪೊಲೀಸ್ ಸಿಬ್ಬಂದಿಗೆ (ಗಿಜಿಂಇ) ಮತದಾನಕ್ಕಾಗಿ 20 – ಮಂಡ್ಯ ಜಿಲ್ಲಾ ಚುನಾವಣಾ ಅಧಿಕಾರಿಗಳ ಕಚೇರಿಯಲ್ಲಿ ಸೌಲಭ್ಯ ಕೇಂದ್ರವನ್ನು ತೆರೆಯಲಾಗುವುದು ಎಂದು ಜಿಲ್ಲಾಧಿಕಾರಿ ಡಾ: ಕುಮಾರ ಅವರು ತಿಳಿಸಿದ್ದಾರೆ.

ಏಪ್ರಿಲ್ 23, 24, 25 ರಂದು 3 ದಿನಗಳ ಕಾಲ ಬೆಳಿಗ್ಗೆ 10 ಗಂಟೆಯಿಂದ ಸಂಜೆ 5.30 ಗಂಟೆಯವರೆಗೆ ಮಂಡ್ಯ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಕೊಠಡಿ ಸಂಖ್ಯೆ 35 ರಲ್ಲಿ ಚುನಾವಣಾ ಕರ್ತವ್ಯ ನಿರತ ಪೊಲೀಸ್ ಸಿಬ್ಬಂದಿಗಳಿಗೆ ಮತದಾನದ ವ್ಯವಸ್ಥೆ ಮಾಡಲಾಗಿದೆ ಎಂದು ಜಿಲ್ಲಾ ಚುನಾವಣಾ ಅಧಿಕಾರಿ ಹಾಗೂ ಜಿಲ್ಲಾಧಿಕಾರಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಂಡ್ಯದಲ್ಲಿ ಎಚ್.ಡಿ.ಕುಮಾರಸ್ವಾಮಿ ಸೋಲಿಸಿ: ಸಿಎಂ ಕರೆ

■ ಕಾಯಕಯೋಗಿ ಸುದ್ದಿ

ಮಂಡ್ಯ: ರಾಮನಗರ ಜಿಲ್ಲೆಯ ಕುಮಾರಸ್ವಾಮಿ ಸೋಲಿನ ಭಯದಿಂದ ಅಲ್ಲಿ ಸ್ಪರ್ಧಿಸದೆ ಮಂಡ್ಯಜಿಲ್ಲೆಯಲ್ಲಿ ಸ್ಪರ್ಧಿಸಿದ್ದಾರೆ. ಇಲ್ಲಿನ ಸ್ವಾಭಿಮಾನಿ ಮತದಾರರು ಅವಕಾಶ ವಾದವನ್ನು ತಿರಸ್ಕರಿಸಿ ಅವರನ್ನು ಸೋಲಿಸಬೇಕೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ನೀಡಿದರು.

ಮಂಡ್ಯ ವಿವಿ ಆವರಣದಲ್ಲಿ ನಡೆದ ಅಭೂತ ಪೂರ್ವ ಪ್ರಜಾಧ್ವನಿ–2 ಕಾರ್ಯ ಕ್ರಮದಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಸ್ಟಾರ್ ಚಿಂದ್ರು ಪರ ಮತಯಾಚನೆ ಮಾಡಿ ನೆರೆದಿದ್ದ ಜನಸಾಗರವನ್ನು ಉದ್ದೇಶಿಸಿ ಮಾತನಾ ಡಿದರು.

ಪೂರ್ವದಲ್ಲಿ ಸೂರ್ಯ ಹುಟ್ಟೋದು ಎಷ್ಟು ಸತ್ಯವೋ, ಮಂಡ್ಯ ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಗೆಲ್ಲುವುದೂ ಅಷ್ಟೇ ಸತ್ಯ. ಈಗಾಗಲೇ ಮಂಡ್ಯದ ಜನತೆ ಕುಮಾರಸ್ವಾಮಿ ಸೋಲಿಸಲು ನಿರ್ಧರಿಸಿದ್ದಾರೆ. ಹೀಗಾಗಿ ಜೆಡಿಸ ಜೆಡಿಎಸ್ ಮೈತ್ರಿಗೆ ಸೋಲು ಕಟ್ಟಿಟ್ಟ ಬುತ್ತಿ ಎಂದು ಸ್ಪಷ್ಟವಾಗಿ ನುಡಿದರು.

ನರೇಂದ್ರ ಮೋದಿಯವರ ಅಚ್ಚೆ ದಿನ್ 10 ವರ್ಷ ಕಳೆದರೂ ಭಾರತೀಯರಿಗೆ ಬಂದಿಲ್ಲ. ರಾಜ್ಯದ ಜನತೆಗೆ ಅಚ್ಚೆ ದಿನ್ ಕಾಣಿಸಿಯೇ ಇಲ್ಲ. ಮೋದಿಯವರ ಕಾರಣದಿಂದ ಏರಿಕೆಯಾಗಿದ್ದ ಡೀಸೆಲ್, ಪೆಟ್ರೋಲ್, ಗ್ಯಾಸ್, ರಸಗೊಬ್ಬರ, ಬೇಳೆ–ಕಾಳು, ಅಡುಗೆ ಎಣ್ಣೆ ಸೇರಿ ಎಲ್ಲದರ ಬೆಲೆ ಏರಿಕೆ ನೀತಿಯಿಂದ ಹೈರಾಣಾಗಿದ್ದ ರಾಜ್ಯದ ಜನರ ಬದುಕಿನ ಕಷ್ಟಗಳಿಗೆ ಸ್ಪಂದಿಸುವ ಉದ್ದೇಶದಿಂದ ನಾವು ಐದು ಗ್ಯಾರಂಟಿಗಳನ್ನು ಜಾರಿ ಮಾಡಿದೆವು. ಇದರಿಂದ ರಾಜ್ಯದ ಪ್ರತಿ ಕುಟುಂಬಗಳಿಗೆ, ಪ್ರತಿ ತಿಂಗಳು 5 ರಿಂದ 6 ಸಾವಿರ ರೂಪಾಯಿ ಒದಗಿ ಬರುವಂಥಾ ನೆರವಿನ ಕಾರ್ಯಕ್ರಮಗಳನ್ನು ನೀಡಿದ್ದೇವೆ ಎಂದರು.

ರಾಜ್ಯದ ಜನರಿಗೆ ಅನ್ಯಭಾಗ್ಯದ ಆಕ್ಕಿ ಕೊಡ ಕೊಡದಂತೆ ಮೋದಿಯವರ ಕೇಂದ್ರ ಸರ್ಕಾರ ತೊಂದರೆ ಕೊಟ್ಟರೂ ಕೂಡ ನಾವು ಅಕ್ಕಿ ಜೊತೆಗೆ ಹಣವನ್ನೂ ನಮ್ಮ ಜನರ ಬದುಕಿಗೆ ಕೊಡುತ್ತಿದ್ದೇವೆ ಎಂದರು.

ಕೊಟ್ಟ ಮಾತಿನಂತೆ ನಡೆದುಕೊಂಡವರು



ಯಾರು ಎನ್ನುವುದನ್ನು ನಿಮ್ಮ ಹೃದಯಕ್ಕೆ ಕೇಳಿ ಕೊಳ್ಳಿ. ಅವರಿಗೆ ಮಾತ್ರ ನಿಮ್ಮ ಮತ ನೀಡಿ. ರಾಜ್ಯದಲ್ಲಿ ಬಿಜೆಪಿಯಿಂದ ಗೆದ್ದ 27 ಸಂಸದರು ರಾಜ್ಯದ ಸಮಸ್ಯೆಗಳ ಬಗ್ಗೆ ಸೊಪ್ಪಕ್ಕೂ ದ್ದನಿ ಎತ್ತದೆ ರಾಜ್ಯದ ಜನರಿಂದ ಪಡೆದ ಮತಕ್ಕೆ ಅವಮಾನ ಮಾಡಿದರು. ಈ ಅವಮಾನಕ್ಕೆ ತಕ್ಕ ಉತ್ತರ ನೀಡಿ ರಾಜ್ಯದ ಜನತೆಯ ಪರವಾಗಿ ಧ್ವನಿ ಎತ್ತುವ ಕಾಂಗ್ರೆಸ್ ಅಭ್ಯರ್ಥಿಗಳನ್ನು ಗೆಲ್ಲಿಸಿ ಮಂಡ್ಯ ಜನತೆಯ ಸ್ವಾಭಿಮಾನಿ ತಾಕತ್ತನ್ನು ತೋರಿಸಿ ಎಂದು ಕರೆ ನೀಡಿದರು. ಎಐಸಿಸಿ ವರಿಷ್ಠ ರಾಹುಲ್ ಗಾಂಧಿ, ಕೆಪಿಸಿಸಿ ಅಧ್ಯಕ್ಷರಾದ ಡಿಸಿಎಂ ಡಿ.ಕೆ.ಶಿವ ಕುಮಾರ್, ಕಾರ್ಯಾಧ್ಯಕ್ಷರಾದ ತನ್ವೀರ್ ಸೇಠ್, ಜಿಲ್ಲಾಉಸ್ತುವಾರಿ ಸಚಿವ ಎಸ್.ಚಲುವ ರಾಯಸ್ವಾಮಿ, ಶಾಸಕರಾದ ರಮೇಶ್‌ಬಾಬು, ರವಿಕುಮಾರ್ ಗಣಿಗ, ಕದಲೂರು ಉದಯ್, ಪಿ.ಎಂ.ನರೇಂದ್ರ ಸ್ವಾಮಿ, ದರ್ಶನ್ ಪುಟ್ಟಣ್ಣಯ್ಯ ಸೇರಿದಂತೆ ಮೈಸೂರು, ಮಂಡ್ಯ ಜಿಲ್ಲೆಯ ಶಾಸಕರುಗಳು, ಮುಖಂಡರು ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಶ್ರೀರಾಮನವಮಿಯ ಶುಭಾಶಯ

ಇದೇ ಸಂದರ್ಭದಲ್ಲಿ ಶ್ರೀರಾಮ ನವಮಿಯ ಶುಭಾಶಯಗಳನ್ನು ಮಂಡ್ಯದ ಜನತೆಗೆ ಮತ್ತು ರಾಜ್ಯದ ಜನತೆಗೆ ಸಿಎಂ ಸಿದ್ದರಾಮಯ್ಯ ಅವರು ಕೋರಿ ಎಲ್ಲರೂ ಭಕ್ತಿ ಶ್ರದ್ಧೆ ಮತ್ತು ಸಂಭ್ರಮದಿಂದ ರಾಮನವಮಿ ಆಚರಿಸುವಂತೆ ಕೋರಿ ದರು.

ಭಾರತೀಯರ ಭಾವನೆಗಳನ್ನು ಭಾವನಾತ್ಮಕವಾಗಿ ಕೆರಳಿಸಿ, ನಮ್ಮ ಬದುಕಿಗೆ ವಂಚಿಸುವವರಿಗೆ ಮಾನ್ಯತೆ ಕೊಡಬೇಡಿ. ಜನರ ಕಷ್ಟಗಳಿಗೆ ಸ್ಪಂದಿಸುವ ನಮಗೆ ಶಕ್ತಿ ಕೊಡಿ. ನೀವು ಕೊಟ್ಟ ಶಕ್ತಿ ನಿಮ್ಮ ಮನೆ ಬಾಗಿಲಿಗೇ ವಾಪಾಸ್ ಉತ್ತಮ ಕಾರ್ಯಕ್ರಮಗಳ ರೂಪದಲ್ಲಿ ವಾಪಸ್ ಬರುತ್ತದೆ ಎಂದು ಘೋಷಿಸಿ ದರು.

ಮಂಡ್ಯ ರಣಕಣದಲ್ಲಿ 'ರಾಹುಲ್ ಗಾಂಧಿ' ಸಂಚಲನ

ಕಾಂಗ್ರೆಸ್ ಸಮಾವೇಶಕ್ಕೆ ಜನವೋ ಜನ

■ ಕಾಯಕಯೋಗಿ ಸುದ್ದಿ

ಮಂಡ್ಯ : ಕಾಂಗ್ರೆಸ್ ಕಾರ್ಯಕರ್ತರಲ್ಲಿ ಹೊಸ ಭರವಸೆ ಮೂಡಿಸುವ ನವಚೈತನ್ಯದ ಮಾತುಗಳನ್ನಾಡಿ ಕೇಂದ್ರದ ಆಡಳಿತ ವೈಖರಿ ಯನ್ನು ಕಟುಶಬ್ದಗಳಿಂದ ಟೀಕಿಸುವ ಮೂಲಕ ನೆರೆದಿದ್ದ ಸಹಸ್ರಾರು ಮಂದಿ ಮತದಾರರ ಚಿತ್ತಾಪೆ ಗೆಟ್ಟಿಸಿದ ಎಐಸಿಸಿ ವರಿಷ್ಠ ರಾಹುಲ್ ಗಾಂಧಿ ಮಂಡ್ಯ ಲೋಕಸಭಾ ಚುನಾವಣಾ ಕಣದಲ್ಲಿ ಸಂಚಲನ ಮೂಡಿಸಿದರು.

ಮಂಡ್ಯ, ಹಾಸನ, ಚಾಮರಾಜನಗರ, ಮೈಸೂರು ಭಾಗದ ಕಾಂಗ್ರೆಸ್ ನಾಯಕರನ್ನ ಬಲ ಪಡಿಸಲು ಮಂಡ್ಯ ವಿವಿ ಆವರಣದಲ್ಲಿ ಆಯೋಜಿಸಲಾಗಿದ್ದ ಬೃಹತ್ ಸಮಾವೇಶದಲ್ಲಿ ಜಮಾಯಿಸಿದ್ದ ಜನಜಾತ್ರೆಯನ್ನುದ್ದೇಶಿಸಿ ಅವರು ಮಾತನಾಡಿದರು.

ಮಹಿಳೆಯರೇ ಹೆಚ್ಚಿನ ಸಂಖ್ಯೆಯಲ್ಲಿ ಜಮಾವಣೆಗೊಂಡಿದ್ದ ಸಮಾವೇಶದಲ್ಲಿ ಮಾನಿಯರ ಪರವಾದ ಯೋಜನೆಗಳನ್ನು ಜಾರಿಗೊಳಿಸುವ ಹಾಗೂ ಸಾಲಮನ್ನಾ ಮಾಡುವ ಯೋಜನೆ ಎಲ್ಲರನ್ನೂ ಆಕರ್ಷಿಸಿತು. ಭಾಷಣದುದ್ದಕ್ಕೂ ಬಡವರಪರ ನಿಲುವಿದ ಪ್ರಧಾನಿ ಮೋದಿ ಎಲೆಕ್ಟೋರಲ್ ಬಾಂಡ್ ಬಗ್ಗೆ ಮಾತನಾಡುವಾಗ ಕೈ ನಡುಗಿಸಿದರು ಎಂದು ಟೀಕಿಸಿ ಜನರಿಂದ ಚಿತ್ತಾಪೆ ಗಿಟ್ಟಿಸಿದರು.

ಕಾಂಗ್ರೆಸ್ ಗೆಲುವನ್ನು ಸವಾಲಾಗಿ ಸ್ವೀಕರಿಸಿರುವ ಹಳೇ ಮೈಸೂರು ಭಾಗದ ಕೈ ನಾಯಕರು ಹೊರ ಜಿಲ್ಲೆಗಳಿಂದಲೂ ಜನರನ್ನು ಕರೆತಂದು ಸಮಾವೇಶದಲ್ಲಿ ಜನರ ಕೊರತೆ ಕಾಣದಂತೆ ಎಚ್ಚರವಹಿಸಿದ್ದರು.

ಎಂ.ಸಿ.ರಸ್ತೆ, ಪಿಇಎಸ್ ಕಾಲೇಜು, ಕೋರ್ಟ್ ರಸ್ತೆ, ಬಸ್‌ನಿಲ್ದಾಣಗಳ ಇಕ್ಕೆಲಗಳಲ್ಲಿ ವಾಹನಗಳನ್ನು ನಿಲ್ಲಿಸಿ ಎರಡು ಕಿ.ಮೀ. ದೂರದಿಂದಲೇ ಸಮಾವೇಶದ ಸ್ಥಳಕ್ಕೆ ಜನಸಾಗರ ಹರಿದು ಬಂದಿದ್ದು ವಿಶೇಷವಾಗಿತ್ತು.

ರೈತರ ಕಷ್ಟ ಅರಿತಿದ್ದೇನೆ :

ನಾವು ಜನರಿಗಾಗಿ, ಸಂವಿಧಾನ ರಕ್ಷಣೆಗಾಗಿ ಚುನಾವಣೆಗೆ ಬಂದಿದ್ದೇವೆ. ಐದು ಗ್ಯಾರಂಟಿಗಳನ್ನ ಜಾರಿ ಮಾಡಿದ ಕೀರ್ತಿ ಕಾಂಗ್ರೆಸ್‌ಗೆ ಸಲ್ಲುತ್ತದೆ. ಗೃಹ ಲಕ್ಷ್ಮಿ ಯೋಜನೆ ಯಿಂದ ಮಹಿಳೆಯರು ನೆಮ್ಮದಿ ಬದುಕು. ಇದೇ ವೇಳೆ ಶಕ್ತಿ ಗೃಹ ಜ್ಯೋತಿ, ಅನ್ನಭಾಗ್ಯ, ಯುವ ನಿಧಿ ಕಾರ್ಯಕ್ರಮಗಳ ಬಗ್ಗೆ ವಿವರಿಸಿದರು. ಎಐಸಿಸಿ ಮೂಲಕವೂ ರಾಷ್ಟ್ರ ಮಟ್ಟದಲ್ಲಿ ಐದು ಗ್ಯಾರಂಟಿಗಳ ಘೋಷಣೆ ಮಾಡಲಾಗಿದೆ. ರೈತರ ಸಂಕಷ್ಟ ಕರ್ನಾಟಕ, ತಲಂಗಾಣಕ್ಕೆ ಅಲ್ಲ ಬಿಜೆಪಿ ಆಡಳಿತರೂಢ ರಾಜ್ಯಗಳಲ್ಲೂ ಇದೆ. ಪಾದಯಾತ್ರೆ ಮಾಡಿ ರೈತರ ಕಷ್ಟವನ್ನ ಅರಿತಿದ್ದೇನೆ ಎಂದು ರಾಹುಲ್‌ಗಾಂಧಿ ಹೇಳಿದರು.

ಇಡೀ ಪಾದಯಾತ್ರೆಯುದ್ದಕ್ಕೂ ರೈತರು ಎರಡು ವಿಷಯಗಳ ಬಗ್ಗೆ ಗಮನ ಸೆಳೆದರು. ರೈತರು ಬೆಳೆದ ಬೆಳೆಗಳಿಗೆ ನ್ಯಾಯಯುತ ಬೆಲೆ ಸಿಗುತ್ತಿಲ್ಲ. ನಮ್ಮ ಸಾಲಮನ್ನಾ ಯಾಕೆ ಆಗುತ್ತಿಲ್ಲ. ಆದರೆ ಶ್ರೀಮಂತರ ಸಾಲಮನ್ನಾ ಆಗಿದೆ ಅಂತ ಕೇಳಿದ್ರು. ಶ್ರೀಮಂತರ ಸಾಲಮನ್ನಾ ಆಗುತ್ತೆ. ರೈತರ ಸಾಲಮನ್ನಾ ಯಾಕೆ ಆಗ್ತಿಲ್ಲ ಎಂದು ಕೇಳಿದರು.

ಮಹಿಳೆ ಮತ್ತು ರೈತರ ಅಭಿವೃದ್ಧಿ

ಜೀವನ್‌ಭೀಮಾ ಯೋಜನೆ ಬಗ್ಗೆ ಕೇಳ್ತಾರೆ. ಬೆಳೆನಷ್ಟಕ್ಕೆ ಬೆಳೆವಿಮೆ ಯಾಕೆ ಕೊಡುತ್ತಿಲ್ಲ. ದೇಶದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದ್ರೆ ಮೂರು ಆಂಶಗಳ ಕಾರ್ಯಕ್ರಮ ರೂಪಿಸಿದ್ದೇವೆ. ನರೇಂದ್ರ ಮೋದಿ ಅವರ ಸ್ನೇಹ ಕೂಟಕ್ಕೆ ಮಾತ್ರ ಸಾಲಮನ್ನಾ ಮಾಡಿದ್ದಾರೆ.

ಆದರೆ ನಾವು ರಾಷ್ಟ್ರದ ಎಲ್ಲಾ ರೈತರ ಸಾಲಮನ್ನಾ ಮಾಡ್ತೇವೆ. ಮಹಿಳೆಯರ ಅಭಿವೃದ್ಧಿಗಾಗಿ ವರ್ಷಕ್ಕೆ ಒಂದು ಲಕ್ಷ ಘೋಷಣೆ ಮಾಡ್ತೀದ್ದೀವಿ ಎಂದು ತಿಳಿಸಿದರು.

ರಾಜ್ಯಾದ್ಯಂತ ಎ.18ರಿಂದ 4 ದಿನ ಮಳೆ ಸಾಧ್ಯತೆ

ಬೆಂಗಳೂರು ಸೇರಿ ಕರ್ನಾಟಕದ 27ಕ್ಕೂ ಹೆಚ್ಚಿನ ಜಿಲ್ಲೆಗಳಲ್ಲಿ ಮುಂದಿನ 4 ದಿನಗಳ ಕಾಲ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಏಪ್ರಿಲ್ 19ರಂದು ಬೆಂಗಳೂರಿನಲ್ಲಿ ಮಳೆಯಾಗಲಿದ್ದು, ಏಪ್ರಿಲ್ 18ರಂದು ಕೊಡಗು, ಮೈಸೂರು, ಚಿಕ್ಕಮಗಳೂರು, ಮಂಡ್ಯ ಸೇರಿದಂತೆ ಕೆಲವೆಡೆ ಮಳೆಯಾಗುತ್ತದೆ.

ಒಟ್ಟಿನಲ್ಲಿ ಮುಂದಿನ 4 ದಿನಗಳ ಕಾಲ ರಾಜ್ಯದ 27ಕ್ಕೂ ಅಧಿಕ ಜಿಲ್ಲೆಗಳಲ್ಲಿ ಮಳೆಯಾಗಲಿದೆ ಎನ್ನುವ ವಾಹಿತಿ ಲಭ್ಯವಾಗಿದೆ. ದೆಹಲಿ ಸೇರಿದಂತೆ ಕೆಲವು ರಾಜ್ಯಗಳಲ್ಲಿ ಕೂಡ ಈಗಾಗಲೇ ಮಳೆ ಶುರುವಾಗಿ ಬಿಸಿಲಿನಿಂದ ಮುಕ್ತಿ ದೊರೆತಿದೆ. ಕರ್ನಾಟಕದಲ್ಲೂ ಜನರು ಬಿಸಿಲ ಬೇಗೆಯಿಂದ ಬಸವಳಿದಿದ್ದಾರೆ. ಮಳೆಯ ಬರುವಿಕೆಗಾಗಿ ಕಾಯುತ್ತಿದ್ದಾರೆ

ಮುನ್ಸೂಚನೆಯಂತೆ ದಕ್ಷಿಣ ಕನ್ನಡ, ಉತ್ತರ ಕನ್ನಡ, ಉಡುಪಿ, ಬಾಗಲಕೋಟೆ, ಬೆಳಗಾವಿ, ಬೀದರ್, ಧಾರವಾಡ, ಗದಗ, ಹಾವೇರಿ, ಕಲಬುರಗಿ,

ಏ.19ರಿಂದ ಅಂಚೆ ಬ್ಯಾಲೆಟ್ ಮುಖಾಂತರ ಮತದಾನ ವ್ಯವಸ್ಥೆ

■ ಕಾಯಕಯೋಗಿ ಸುದ್ದಿ

ಮಂಡ್ಯ : ಅಗತ್ಯ ಸೇವಾ ವಲಯದಡಿ ಬರುವ 1022 ಮತದಾರರಿಗೆ ಏ.19, 20 ಹಾಗೂ 21 ರಂದು ಬೆಳಿಗ್ಗೆ 9 ರಿಂದ ಸಂಜೆ 5 ಗಂಟೆಯವರೆಗೆ ಮಂಡ್ಯ ವಿಶ್ವವಿದ್ಯಾಲಯದ ಕಲಾ ವಿಭಾಗದಲ್ಲಿ ಅಂಚೆ ಬ್ಯಾಲೆಟ್ ಮುಖಾಂತರ ಮತದಾನದ ವ್ಯವಸ್ಥೆ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಡಾ: ಕುಮಾರ ಅವರು ತಿಳಿಸಿದರು.



ಅವರು ಇಂದು ನೋಡಲ್ ಅಧಿಕಾರಿಗಳ ಸಭೆ ನಡೆಸಿ ಮಾತನಾಡಿ, 1022 ಮತದಾರರಲ್ಲಿ ಮಂಡ್ಯ ಲೋಕಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವವರು 502 ಮತದಾರರು ಹಾಗೂ ಮಂಡ್ಯ ಜಿಲ್ಲಾ ಮತದಾರರಾಗಿದ್ದು, ಬೇರೆ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವವರು 521 ಮತದಾರರಿದ್ದಾರೆ. ಇವರಿಗೆ ಈಗಾಗಲೇ ಮತದಾನದ ದಿನಾಂಕ, ಸಮಯ ಹಾಗೂ ಸ್ಥಳದ ವಿವರವನ್ನು ಎಸ್.ಎಂ.ಎಸ್ ಮೂಲಕ ಕಳುಹಿಸಿಕೊಡಲಾಗಿದೆ ಎಂದರು.

ನೋಡಲ್ ಅಧಿಕಾರಿಗಳು ತಮ್ಮ ವ್ಯಾಪ್ತಿಗೆ ಬರುವ ಮತದಾರರಿಗೆ ಪತ್ರ ಮುಖೇನ ಮತದಾನದ ದಿನಾಂಕ, ಸಮಯ ಹಾಗೂ ಸ್ಥಳದ ವಿವರ ತಿಳಿಸುವಂತೆ ಮತ್ತು ಮಾಹಿತಿ ಕೊರತೆಯಿಂದ ಯಾರೂ ಮತದಾನದಿಂದ ವಂಚಿತರಾಗಬಾರದು ಎಂದರು.

ಅಗ್ನಿ ಶಾಮಕ ಇಲಾಖೆಯಿಂದ– 30, ಸಾರಿಗೆ– 573, ಆರೋಗ್ಯ–31, ಮಾಧ್ಯಮ–10, ಪೊಲೀಸ್– 68, ಸಂಚಾರಿ ಪೊಲೀಸ್–218, ರೈಲ್ವೆ–9, ಕಾರಾಗೃಹ– 19, ವಿದ್ಯುತ್ – 26, ಬಿ.ಎಂ.ಆರ್.ಸಿ.ಎಲ್–5 ಹಾಗೂ ಗ್ರಾಮೀಣ ಹಾಗೂ ನಗರ ಕುಡಿಯುವ ನೀರು ಸರಬರಾಜು– 33 ಮತದಾರರಿಗೆ ಮತ ಚಲಾಯಿಸಲು ವ್ಯವಸ್ಥೆ ಮಾಡಲಾಗಿದೆ ಎಂದರು.

ಅಗತ್ಯ ಸೇವಾ ವಲಯದ ವ್ಯಾಪ್ತಿಗೆ ಬರುವ ಇಲಾಖೆಯ ಮುಖ್ಯಸ್ಥರು ಮತದಾರರಿಗೆ ಮತದಾನ ಮಾಡಲು ಅನುಮತಿ ನೀಡಿ ವ್ಯವಸ್ಥೆ ಮಾಡಿಕೊಡಬೇಕು. ಗುರುತಿಸಲಾಗಿರುವ 1022 ಮತದಾರರಿಗೆ ಏಪ್ರಿಲ್ 26 ರಂದು ಇ.ವಿ.ಎಂ. ಮೂಲಕ ಮತದಾನ ಮಾಡಲು ಅವಕಾಶವಿರುವುದಿಲ್ಲ ಎಂದರು.

ಸಭೆಯಲ್ಲಿ ಜಿ.ಪಂ. ಸಿಇಓ ಶೇಖ್ ತನ್ವೀರ್ ಆಸಿಫ್, ಗ್ರಾಮೀಣ ಕುಡಿಯುವ ನೀರು ಇಲಾಖೆಯ ಕಾರ್ಯಪಾಲಕ ಅಭಿಯಂತರ ಶಿವರಾಜು, ನಗರಾಭಿವೃದ್ಧಿ ಕೋಶದ ಪುರಸಭೆ ತಹಶೀಲ್ದಾರ್ ರವಿಕಂಠರ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕಿ ನಿರ್ಮಲ ಸೇರಿದಂತೆ ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.

ಪ್ರತಿಯೊಂದು ಮತವು ದೇಶದ ಅಭಿವೃದ್ಧಿಗೆ ಸಹಕಾರಿ

■ ಕಾಯಕಯೋಗಿ ಸುದ್ದಿ

ಮಂಡ್ಯ : ದೇಶದ ಪ್ರಜಾ ಪ್ರಭುತ್ವಕ್ಕೆ ಮತದಾನ ಅತ್ಯಂತ್ಯ ಪ್ರಮುಖ. ಪ್ರತಿಯೊಂದು ಮತವೂ ದೇಶದ ಅಭಿವೃದ್ಧಿಗೆ ಸಹಕಾರಿಯಾಗುತ್ತದೆ ಮತ ಚಲಾಯಿಸುವ ಮೂಲಕ ಕರ್ತವ್ಯ ನಿರ್ವಹಿಸಿ ಎಂದು ಪಾಂಡವಪುರ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಲೋಕೇಶ್ ಮೂರ್ತಿ ಹೇಳಿದರು.

ಪಾಂಡವಪುರ ತಾಲೂಕಿನ ಟಿ.ಎಸ್ ಛತ್ರ ಗ್ರಾಮ ಪಂಚಾಯತ್ ವ್ಯಾಪ್ತಿಯ ಪಟ್ಟಣಗೆರೆ ಗ್ರಾಮದ ನರೇಗಾ ಯೋಜನೆಯಡಿ ಅಭಿವೃದ್ಧಿ ಮಾಡುತ್ತಿರುವ ಕುಂಬಾರ ಕಟ್ಟೆ ಕಾಮಗಾರಿ ಸ್ಥಳದಲ್ಲಿ ಸ್ವೀಪ್ ಚಟುವಟಿಕೆ ಕಾರ್ಯಕ್ರಮ ಕುರಿತು ಮಾತನಾಡಿದ ಅವರು ನರೇಗಾ ಯೋಜನೆಯಡಿ ಕೆಲಸ ನಿರ್ವಹಿಸುತ್ತಿರುವ ಕೂಲಿಕಾರರು ಏ.26 ರಂದು ತಪ್ಪದೇ ಮತದಾನ ಮಾಡಬೇಕು. ನರೇಗಾ ಯೋಜನೆಯಡಿ ಕೂಲಿಕಾರರಿಗೂ ಮತದಾನದ ಕುರಿತು ಅರಿವು ಮೂಡಿಸಲಾಗುತ್ತಿದೆ ಎಂದರು.

ಮತದಾನ ದಿವಸ ಎಲ್ಲಾ ಕೆಲಸವನ್ನು ಬದಿಗಿಟ್ಟು ಮತದಾನ ಮಾಡಬೇಕು. ಯಾವುದೇ ಆಸೆ ಆಮಿಷಗಳಿಗೆ ಒಳಗಾಗದೇ ತಪ್ಪದೆ ಮತ ಚಲಾಯಿಸಿ ಎಲ್ಲರೂ ಕಡ್ಡಾಯವಾಗಿ ಮತದಾನ ಮಾಡಬೇಕು ಎಂದರು.



ನನ್ನ ಮತ ನನ್ನ ಹಕ್ಕು ಎಂಬ ಘೋಷವಾಕ್ಯದೊಡನೆ ಯುವಕ ಯುವತಿಯರು ಮತದಾನ ಮಾಡುವುದರ ಮೂಲಕ ದೇಶದ ಅಭಿವೃದ್ಧಿಗೆ ಸ್ಪಂದಿಸುವಂತೆ ಅಭ್ಯರ್ಥಿಗಳಿಗೆ ಮತ ಚಲಾಯಿಸಬೇಕು. ಗ್ರಾಮೀಣ ಭಾಗದ ಜನರು ಮತದಾನ ಪ್ರಕ್ರಿಯೆಯಲ್ಲಿ ನಗರ ಪ್ರದೇಶಕ್ಕಿಂದ ಹೆಚ್ಚಾಗಿ ಭಾಗವಹಿಸುತ್ತಾರೆ. ಇದು ಉತ್ತಮ ಬೆಳವಣಿಗೆ

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ–3 | 18–04–2024

ಮೈಸೂರು

ಬಿಜೆಪಿ ಸೋಲಿಸಲು ಪ.ಜಾತಿ, ಪ.ವರ್ಗ ಒಂದಾಗಿದೆ: ಗೋಪಾಲ್

ಮಂಡ್ಯ: ಸಂವಿಧಾನ ವಿರೋಧಿ ನಡೆ ಅನುಸರಿಸುತ್ತಿರುವ ಬಿಜೆಪಿಯನ್ನು ಸೋಲಿಸಲು ಪ.ಜಾತಿ ಮತ್ತು ಪ.ವರ್ಗಗಳು ಒಂದಾಗಿದ್ದು, ಈ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿಯನ್ನು ಅಧಿಕಾರದಿಂದ ಕೆಳಗಿಳಿಸಲು ಹೋರಾಟ ನಡೆಸಲಿದ್ದೇವೆಂದು ಕೆಪಿಸಿಸಿ ಉಪಾಧ್ಯಕ್ಷ ಬಿ.ಗೋಪಾಲ್ ತಿಳಿಸಿದರು.

ನಗರದ ಕನಕಸಮುದಾಯಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಿಜೆಪಿಯು ಮೀಸಲಾತಿ ವ್ಯವಸ್ಥೆಯನ್ನು ಮುಕ್ತ ಮಾಡಿದೆ. ನರೇಂದ್ರ ಮೋದಿ ಸಂವಿಧಾನ ವಿರೋಧಿ ನಡೆ ಅನುಸರಿಸುತ್ತಿದ್ದು, ಮೇಲ್ವರ್ಗದ ಜನತೆಗೆ ಶೇ.10ರಷ್ಟು ಮೀಸಲಾತಿ ಕಲ್ಪಿಸುವ ಮಸೂದೆಯನ್ನು ಪ್ರತಿಪಕ್ಷಗಳನ್ನು ಸಂಸತ್ತಿನಿಂದ ಹೊಗಿಟಟು ಮಂಡನೆ ಮಾಡಿ ರಾತ್ರೋರಾತ್ರಿ ರಾಷ್ಟ್ರಪತಿಗಳಿಂದ ಅಂಗೀಕಾರ ಪಡೆದಿದ್ದಾರೆ ಎಂದು ದೂರಿದರು.

ಜಾರ್ಖಂಡ್ ಮುಖ್ಯಮಂತ್ರಿ ಆಗಿದ್ದ ಹೇಮಂತ್ ಸೋರೆನ್ ಮತ್ತು ದೆಹಲಿ ಮುಖ್ಯಮಂತ್ರಿ ಅರವಿಂದ್ ಕ್ರೇಜಿವಾಲ್‌ರನ್ನು ರಾಜಕೀಯ ವಿರೋಧಿ ಎಂಬ ಕಾರಣಕ್ಕೆ ಭ್ರಷ್ಟಾಚಾರದ ಆರೋಪದ ಅಡಿ ಬಂಧಿಸಲಾಗಿದೆ. ಕಾಂಗ್ರೆಸ್ ಸಂಸದ ಡಿ.ಕೆ.ಸುರೇಶ್‌ರನ್ನು ಯಾವ ನ್ಯಾಯಾಲಯವು ದೇಶದ್ರೋಹಿ ಎಂದು ತೀರ್ಮಾನ ನೀಡಿಲ್ಲ. ಆದರೂ ಸಹ ಪ್ರಧಾನಿ ನರೇಂದ್ರಮೋದಿ ದೇಶದ್ರೋಹಿ ಎಂದು ಘೋಷಿಸಿರುವುದು ಅವರ ಘನತೆಗೆ ತಕ್ಕುದಲ್ಲ ಎಂದರು.

ರೈಲ್ವೆ ಇಲಾಖೆಯಲ್ಲಿ ಖಾಸಗೀಕರಣ ಪದ್ಧತಿ ಜಾರಿ ಮಾಡಿ ಸುಮಾರು ನಾಲ್ಕು ಲಕ್ಷ ಬ್ಯಾಕ್ ಲಾಕ್ ಉದ್ಯೋಗ ಕಡಿತ ಮಾಡಲಾಗಿದೆ. ರಾಜಧಾನಿ ದೆಹಲಿಯ ಗಡಿ ಭಾಗದಲ್ಲಿ ವರ್ಷಗಟ್ಟಲೆ ಹೋರಾಟ ಮಾಡಿದ ರೈತರಲ್ಲಿ 136 ರೈತರು ಸಾವನ್ನಪ್ಪಿದ್ದಾರೆ. ಆದರೆ ಇವರಿಗೆ ಕಂಬನಿ ಮಿಡಿಯದ ನರೇಂದ್ರ ಮೋದಿ ಅಪಘಾತದಲ್ಲಿ ಮಡಿದವರಿಗೆ ತಮ್ಮ ಪರಿಚಿತರಿಗೆ ಸಾಂತ್ವನ ಹೇಳಿದ್ದಾರೆ ಎಂದರು.ಈ ಸಂದರ್ಭದಲ್ಲಿ ಅಂಬಣ್ಣ ಶ್ರೀನಿವಾಸ್, ಅಪ್ಪಣ್ಣ ಇತರರಿದ್ದರು.

ಕುಡಿಯುವ ನೀರಿನ ಸಮಸ್ಯೆ: ಕಂಟ್ರೋಲ್ ರೂಂ ಸ್ಥಾಪನೆ

ಮೈಸೂರು: ತೊಂದರೆ ಉಂಟಾದ ಸಂದರ್ಭದಲ್ಲಿ ಸಾರ್ವಜನಿಕರು ಕಂಟ್ರೋಲ್ ರೂಂ ನಂ:08222–251029, ದೂ.ಸಂ:7996875651 ಅಥವಾ 9980016833 ನ್ನು ಸಂಪರ್ಕಿಸಿ ದೂರನ್ನು ಸಲ್ಲಿಸಬಹುದು ಎಂದು ಹುಣಸೂರು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಏ. 23ರಂದು ಬಿಳಿಗಿರಿರಂಗನಾಥಸ್ವಾಮಿ ಬ್ರಹ್ಮರಥೋತ್ಸವ

ಅಗತ್ಯ ಪೂರ್ವಸಿದ್ಧತೆ ಕೈಗೊಳ್ಳಿ–ಜಿಲ್ಲಾಧಿಕಾರಿ ಶಿಲ್ಪಾ ನಾಗ್

■ ಕಾಯಕಯೋಗಿ ಸುದ್ದಿ

ಯಳಂದೂರು: ತಾಲೂಕಿನ ಇತಿಹಾಸ ಪ್ರಸಿದ್ಧ ಬಿಳಿಗಿರಿರಂಗನಾಥಸ್ವಾಮಿ ಬ್ರಹ್ಮರಥೋತ್ಸವ ಇದೇ ತಿಂಗಳ ಏಪ್ರಿಲ್ 23ರಂದು ನಡೆಯಲಿದ್ದು, ಈ ಸಂಬಂಧ ಅಗತ್ಯ ಪೂರ್ವ ಸಿದ್ಧತೆಗಳನ್ನು ಅಚ್ಚುಕಟ್ಟಾಗಿ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಶ್ರೀ ಬಿಳಿಗಿರಿರಂಗನಾಥ ಸ್ವಾಮಿಯ ವರ ಬ್ರಹ್ಮರಥೋತ್ಸವಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತಾದಿಗಳು ಆಗಮಿಸುವ ನಿಟ್ಟಿನಲ್ಲಿ ಕೈಗೊಳ್ಳಬೇಕಿರುವ ಸಿದ್ಧತಾ ಕ್ರಮಗಳ ಬಗ್ಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ರಥೋತ್ಸವ ಅಂಗವಾಗಿ ದೇವಾಲಯದ ಆವರಣ, ರಥದ ಬೀದಿ, ಕಲ್ಯಾಣಿ ಕೊಳದ ಬಳಿ, ಕಮರಿ ಆವರಣ ಹಾಗೂ ದಾಸೋಹ ಆವರಣ ಹಾಗೂ ಪಾರ್ಕಿಂಗ್ ವ್ಯವಸ್ಥೆ ಮತ್ತಿತ್ತರ ಜನಸಿಬಿಡ ಸ್ಥಳಗಳಲ್ಲಿ ವಹಿಸಲಾಗುವ ಬಂದೋಬಸ್ತ್ ಕ್ರಮಗಳು ಸಮರ್ಪಕವಾಗಿರಬೇಕು. ರಥೋತ್ಸವ ಸಿದ್ಧತೆಗಳ ವ್ಯವಸ್ಥೆಯಲ್ಲಿ ಯಾವುದೇ ಲೋಪಗಳಿಗೆ ಆಸ್ಪದವಾಗದಂತೆ ಎಚ್ಚರ ವಹಿಸಬೇಕು. ಸಾರ್ವಜನಿಕರಿಂದ ಯಾವುದೇ ದೂರುಗಳು ಬರದಂತೆ ಅಧಿಕಾರಿಗಳು ಕ್ರಮವಹಿಸಬೇಕು ಎಂದು ತಿಳಿಸಿದರು.

ಮಾದರಿ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ಪಾರ್ಕಿಂಗ್ ಸ್ಥಳ ಸೇರಿದಂತೆ ಇತರೆಡೆ ರಾಜಕೀಯ ಪ್ರೇರಿತವಾದ ಯಾವುದೇ ಬ್ಯಾನರ್, ಭಿತ್ತಿಪತ್ರಗಳ ಅಳವಡಿಕೆಗೆ ಅವಕಾಶ ನೀಡಬಾರದು. ಪ್ರವಾಸಿ ಮಂದಿರದಲ್ಲಿಯೂ ಸಹ ಯಾವುದೇ ರಾಜಕೀಯ ವ್ಯಕ್ತಿಗಳಿಗೆ ಪ್ರವೇಶಕ್ಕೆ ಅವಕಾಶವಿಲ್ಲ. ರಥೋತ್ಸವ ಸಂದರ್ಭದಲ್ಲಿ ಭಕ್ತಾದಿಗಳಿಗೆ ವಿತರಿಸುವ ಪಾನಕ, ಪ್ರಸಾದ ಹಂಚಿಕೆ ಹಾಗೂ ಅರವಟ್ಟಿಗೆ ವಿತರಣೆಗೆ ಸಂಬಂಧಪಟ್ಟ ಸಹಾಯಕ ಚುನಾವಣಾಧಿಕಾರಿ ಗಳಿಂದ ಲಿಖಿತ ಅನುಮತಿ ಪತ್ರ ಪಡೆಯುವುದು ಕಡ್ಡಾಯ ವಾಗಿದೆ. ಇದಕ್ಕಾಗಿ ಕೊಳ್ಳೇಗಾಲ ವಿಧಾನಸಭಾ ಕ್ಷೇತ್ರದ ಸಹಾಯಕ ಚುನಾವಣಾಧಿಕಾರಿಗಳ ಕಚೇರಿ ಹಾಗೂ ಉಪವಿಭಾಗಾಧಿಕಾರಿಗಳ ಕಚೇರಿ, (ಮೊ. ಸಂಖ್ಯೆ: 8884504666) ಕೊಳ್ಳೇಗಾಲ ಮತ್ತು ಇ-ಮೇಲ್ ackolleg ala@gmail.com ಇವರನ್ನು ಸಂಪರ್ಕಿಸಬಹುದು ಎಂದರು.

ಬ್ರಹ್ಮರಥೋತ್ಸವ ಹಿನ್ನೆಲೆಯಲ್ಲಿ ಏಪ್ರಿಲ್ 21ರಿಂದ 25ರವರೆಗೆ ಭಕ್ತಾದಿಗಳು ಕ್ಷೇತ್ರಕ್ಕೆ ಹೋಗಿಬರಲು ಹೆಚ್ಚು ಸಂಖ್ಯೆಯಲ್ಲಿ ಕೆ.ಎಸ್.ಆರ್.ಟಿಸಿ ಬಸ್ಸುಗಳ ನಿಯೋಜನೆ ಮಾಡಬೇಕು. ವಿದ್ಯುತ್ ವ್ಯತ್ಯಯವಾಗದಂತೆ ನೋಡಿಕೊಳ್ಳಬೇಕು. ಸ್ವಚ್ಛತಾ ಕಾರ್ಯಗಳಿಗೆ ವಿಶೇಷ ಗಮನ ಹರಿಸಬೇಕು. ಹಳ್ಳಗಳಿಂದ ಕೂಡಿದ ರಸ್ತೆಗಳನ್ನು ಗ್ರಾವೆಲ್ ತುಂಬಿಸಿ ವಾಹನಗಳ ಸುಗಮ ಸಂಚಾರಕ್ಕೆ ಅವಕಾಶ ಮಾಡಿಕೊಡಬೇಕು. ಯಾವುದೇ ಪ್ಲಾಸ್ಟಿಕ್ ಉಪಯೋಗಕ್ಕೆ ಅವಕಾಶ ನೀಡಬಾರದು ಎಂದು ಜಿಲ್ಲಾಧಿಕಾರಿಯವರು ಸೂಚಿಸಿದರು.

ಪ್ರಸ್ತುತ ಬೇಸಿಗೆ ಬಿಸಲು ಅಧಿಕವಾಗಿರುವುದರಿಂದ ಕ್ಷೇತ್ರಕ್ಕೆ ಆಗಮಿಸುವ ಭಕ್ತರಿಗೆ ತೊಂದರೆಯಾಗದಂತೆ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಕೈಗೊಳ್ಳಬೇಕು. ಕುಡಿಯುವ ನೀರಿನ ಪರಿಶುದ್ಧತೆ ತಪಾಸಣೆ ಕೈಗೊಂಡು ಜಾತ್ರೆಗೆ ಒಂದು ದಿನ ಮೊದಲೆ ನೀರಿನ ಮಾದರಿಯನ್ನು ಪರೀಕ್ಷೆಗೆ ಕಳುಹಿಸಬೇಕು. ಲಭ್ಯವಿರುವ ಬೋರ್‌ವೆಲ್‌ಗಳನ್ನು ಸುಸ್ಥಿತಿಯಲ್ಲಿಟ್ಟುಕೊಳ್ಳಬೇಕು. ಭಕ್ತಾದಿಗಳಿಗೆ ವಿತರಿಸುವ ಮಜ್ಜಿಗೆ ಹಾಗೂ ಪಾನಕಕ್ಕೆ ಶುದ್ಧ ನೀರು ಬಳಸುವಂತೆ ತಿಳಿಹೇಳಬೇಕು ಎಂದು ಜಿಲ್ಲಾಧಿಕಾರಿಯವರು ತಿಳಿಸಿದರು.

ಆರೋಗ್ಯ ಇಲಾಖೆ ವತಿಯಿಂದ ಏಪ್ರಿಲ್ 21ರಿಂದ 25ರವರೆಗೆ ತಾತ್ಕಾಲಿಕ ಆರೋಗ್ಯ ಕೇಂದ್ರ ತೆರೆದು ವೈದ್ಯರು ಸಿಬ್ಬಂದಿ ತುರ್ತು ವಾಹನ ನಿಯೋಜಿಸಬೇಕು. ಕ್ಷೇತ್ರದಲ್ಲಿ ಪ್ಲಾಸ್ಟಿಕ್ ಬಳಕೆ ನಿಷೇಧವಿರುವುದರಿಂದ ಪ್ಲಾಸ್ಟಿಕ್‌ಗೆ ಪರ್ಯಾಯವಾಗಿ ಪರಿಸರ ಸ್ನೇಹಿ ವಸ್ತುಗಳ ಬಳಕೆ ಮಾಡಬೇಕು. ಅರಣ್ಯ ಇಲಾಖೆ ಅಧಿಕಾರಿಗಳು ಈ ಬಗ್ಗೆ ವಿಶೇಷ ಕಾಳಜಿ ವಹಿಸಬೇಕು. ರಥೋತ್ಸವದಂದು ದ್ವಿಚಕ್ರ ವಾಹನವನ್ನು ಬಿಳಿಗಿರಿರಂಗನ ಬೆಟ್ಟಕ್ಕೆ ನಿಷೇಧಿಸಬೇಕು. ದ್ವಿಚಕ್ರ ವಾಹನ ಸವಾರರು ಅರಣ್ಯ ಇಲಾಖೆಯ ಚೆಕ್‌ಪೋಸ್ಟ್ ಬಳಿ ದ್ವಿಚಕ್ರ ವಾಹನ ನಿಲುಗಡೆ ಮಾಡಿ ಅಲ್ಲಿಂದ ಕೆಎಸ್.ಆರ್.ಟಿಸಿ ಬಸ್ಸುಗಳಲ್ಲಿ ಬೆಟ್ಟಕ್ಕೆ ತೆರಳುವಂತೆ ತಿಳಿಸಲು ಸಭೆಯಲ್ಲಿ ನಿರ್ಧರಿಸಲಾಯಿತು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಆನಂದ್ ಪ್ರಕಾಶ್ ಮೀನಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹು, ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉದೇಶ, ಉಪವಿಭಾಗಾಧಿಕಾರಿ ಶಿವಮೂರ್ತಿ, ತಹಶೀಲ್ದಾರ್ ನಿಸರ್ಗಪ್ರಿಯ, ಜಿಲ್ಲಾ ಆರೋಗ್ಯಾಧಿಕಾರಿ ಡಾ. ಚಿದಂಬರ, ಪ್ರಾದೇಶಿಕ ಸಾರಿಗೆ ಅಧಿಕಾರಿ ನಾಯಕ್ತಿ ವಲಯ ಅರಣ್ಯ ಅಧಿಕಾರಿ ನಾಗೇಂದ್ರ ನಾಯಕ್, ದೇವಾಲಯದ ಅರ್ಚಕರಾದ ರವಿಕುಮಾರ್, ದೇವಾಲಯದ ಕಾರ್ಯನಿರ್ವಾಹಕ ಅಧಿಕಾರಿ ಮೋಹನ್ ಕುಮಾರ್, ಕೆ.ಎಸ್.ಆರ್.ಟಿಸಿ, ಅಗ್ನಿಶಾಮಕ ಇಲಾಖೆ ಅಧಿಕಾರಿಗಳು, ಇತರರು ಸಭೆಯಲ್ಲಿ ಉಪಸ್ಥಿತರಿದ್ದರು.

ರೈತರಿಗೆ ಮೂರು ದಿನಗಳ ಆನ್‌ಲೈನ್ ತರಬೇತಿ ಕಾರ್ಯಕ್ರಮ

ಮೈಸೂರು: ನಾಗನಹಳ್ಳಿ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ವತಿಯಿಂದ ರೈತ ಹಾಗೂ ರೈತಮಹಿಳೆಯರಿಗೆ ಮೂರು ದಿನಗಳ ಆನ್‌ಲೈನ್ ತರಬೇತಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಏ.23 ರಂದು ಮಧ್ಯಾಹ್ನ 3 ಗೆ ಮಾವು: ನೇರ ಮಾರುಕಟ್ಟೆಗಿರುವ ಅವಕಾಶಗಳು ಎಂಬ ವಿಷಯದ ಮೇಲೆ, ಏ.30 ರಂದು ಮಧ್ಯಾಹ್ನ 3 ಗೆ ಮಾಗಿ ಉಳುಮೆಯಿಂದಾಗುವ ಪ್ರಯೋಜನಗಳು ಎಂದ ವಿಷಯದ ಮೇಲೆ ಹಾಗೂ ಮೇ.3 ರಂದು ಮಧ್ಯಾಹ್ನ 3 ಗಂಟೆಗೆ ಮಣ್ಣು ಪರೀಕ್ಷೆ ಮಹತ್ವ & ವಿಶ್ಲೇಷಣಾ ಆಧಾರಿತ ರಸಗೊಬ್ಬರಗಳ ಬಳಕೆ ಬಗ್ಗೆ ಎಂಬ ವಿಷಯದ ಮೇಲೆ ಮೂರು ದಿನಗಳೂ ಆನ್‌ಲೈನ್ ಮೂಲಕ ತರಬೇತಿ ನೀಡಲಾಗುತ್ತದೆ.

ಆಸಕ್ತ ರೈತ ಅಥವಾ ರೈತ ಮಹಿಳೆಯರು www.kmw-kvob-sypಗೂಗಲ್ ಮೀಟ್ ಲಿಂಕ್‌ನ ಮೂಲಕ ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗೆ ನಾಗನಹಳ್ಳಿ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ಕೃಷಿ ನಿರ್ದೇಶಕರ ದೂ.ಸಂ: 8277933157 ಸಂಪರ್ಕಿಸಿ ತಮ್ಮ ಹೆಸರುಗಳನ್ನು ನೋಂದಾಯಿಸಿಕೊಳ್ಳಬೇಕು ಎಂದು ನಾಗನಹಳ್ಳಿ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಉಪ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅರ್ಜಿ ಆಹ್ವಾನ

ಮೈಸೂರು: ನಂಜನಗೂಡು ಅಂಚೆ ವಿಭಾಗದ ವ್ಯಾಪ್ತಿಯಲ್ಲಿ ಅಂಚೆ ಜೀವವಿಮೆ ಹಾಗೂ ಗ್ರಾಮೀಣ ಅಂಚೆ ಜೀವವಿಮೆಯ ಪ್ರತಿನಿಧಿಗಳಾಗಿ ಕಾರ್ಯ ನಿರ್ವಹಿಸಲು ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತಿಯುಳ್ಳ ಕನಿಷ್ಠ 18 ವಯೋಮಿತಿಯ ಎಸ್.ಎಸ್.ಎಲ್.ಸಿ ಪೂರ್ಣಗೊಳಿಸಿರುವ ಅಭ್ಯರ್ಥಿಗಳು ತಮ್ಮ ಸಂಪೂರ್ಣ ವಿವರ ಹಾಗೂ ದಾಖಲೆಗಳೊಂದಿಗೆ ನಂಜನಗೂಡಿನ ಪ್ರಧಾನ ಅಂಚೆ ಕಛೇರಿಯ ಅಂಚೆ ಅಧೀಕ್ಷಕರ ಕಛೇರಿಯಲ್ಲಿ ಮೇ.7 ರಂದು ಬೆಳಿಗ್ಗೆ 11 ಗಂಟೆಗೆ ನೇರ ಸಂದರ್ಶನಕ್ಕೆ ಹಾಜರಾಗಬಹುದು.

ಹೆಚ್ಚಿನ ಮಾಹಿತಿಗಾಗಿ ಅಂಚೆ ಜೀವ ವಿಮೆ ಅಭಿವೃದ್ಧಿ ಅಧಿಕಾರಿಯಾದ ಮಹದೇವಪ್ಪ ಅವರ ದೂ.ಸಂ: 9448291050 ಅನ್ನು ಸಂಪರ್ಕಿಸಬಹುದು ಎಂದು ನಂಜನಗೂಡು ವಿಭಾಗದ ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿದ್ಯುತ್ ವ್ಯತ್ಯಯ

ಮೈಸೂರು: ಹೂಟಗಳ್ಳಿ ಉಪವಿಭಾಗ ವ್ಯಾಪ್ತಿಯ ಬೋಗಾದಿ ವಿದ್ಯುತ್ ವಿತರಣಾ ಕೇಂದ್ರದ ಹೂಟಗಳ್ಳಿ ಬೋಗಾದಿ ಮಾರ್ಗದ ಸಿ.ಟಿ ಬದಲಾವಣೆ ಮಾಡುವ ಕಾರ್ಯವನ್ನು ಕೈಗೊಂಡಿರುವುದರಿಂದ ಏ.19 ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 4 ಗಂಟೆಯವರೆಗೆ ಹಳ್ಳಿ ಬೋಗಾದಿ, ಬೋಗಾದಿ ರಿಂಗ್ ರಸ್ತೆ, ಜವರೇಗೌಡ ಲೇಔಟ್, ಬ್ರೀಗೇಡ್ ಅಪಾರ್ಟ್‌ಮೆಂಟ್, ಟ್ರಿಡ್ಜ್, ಮಂಚಿಕ್ಯಾತನ ಹಳ್ಳಿ, ಎಸ್.ಬಿ.ಎಂ ಬಡಾವಣೆ, ಬೋಗಾದಿ ಪಟ್ಟಣ ಪಂಚಾಯಿತಿ ಕಛೇರಿ, ಸುವರ್ಣ ನಗರ ಸುತ್ತಮುತ್ತಲಿನ ಪ್ರದೇಶಗಳು, ವಿಜಯನಗರ 3ನೇ ಹಂತ, ಬೋಗಾದಿ 2ನೇ ಹಂತ, (ಉತ್ತರ–ದಕ್ಷಿಣ) ಹಾಗೂ ಸುತ್ತಮುತ್ತಲಿನ ಪ್ರದೇಶಗಳಿಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗುವುದರಿಂದ ಸಾರ್ವಜನಿಕರು ಸಹಕರಿಸಬೇಕೆಂದು ಪಿ.ವಿ ಮೊಹಲ್ಲಾ ವಿಭಾಗದ, ಕಾರ್ಯನಿರ್ವಾಹಕ ಇಂಜಿನಿಯರ್(ಪಿ), ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪ್ರತಿ ಮನೆಗೂ ಮತದಾರರ ಮಾಹಿತಿ ಚೀಟಿಯ ಹಂಚಿಕೆ: ಡಾ.ರಾಜೇಂದ್ರ

■ ಕಾಯಕಯೋಗಿ ಸುದ್ದಿ

ಮೈಸೂರು: ಮತದಾನದ ಪ್ರಮಾಣವನ್ನು ಹೆಚ್ಚಿಸಲು ಹಾಗೂ ಮತದಾರರು ಮತದಾನ ಮಾಡಲು ಮುಂದೆ ಬರುವಂತೆ ಮಾಡಲು ಇಂದಿನಿಂದ ಮತದಾರರ ಮಾಹಿತಿ ಚೀಟಿಯನ್ನು ಹಂಚಲಾಗುವುದು. ಇದರಿಂದ ಮತದಾರರು ಆ ಚೀಟಿಯ ಹಿಂಭಾಗದಲ್ಲಿರುವ ಕ್ಯೂ ಆರ್ ಕೋಡನ್ನು ಸ್ಕ್ಯಾನ್ ಮಾಡುವ ಮೂಲಕ ತಮ್ಮ ಪೋಲಿಂಗ್ ಸ್ಟೇಷನ್ನ ಮಾಹಿತಿಯನ್ನು ಪಡೆಯಬಹುದು ಎಂದು ಜಿಲ್ಲಾ ಚುನಾವಣಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳಾದ ಡಾ ಕೆ.ವಿ ರಾಜೇಂದ್ರ ಅವರು ಮಾಹಿತಿ ನೀಡಿದರು.

ಇಂದು ಚಿಸ್ಕಾಂ ಹಾಗೂ ಜಿಲ್ಲಾ ಸ್ವೀಪ್ ಸಮಿತಿಯ ವತಿಯಿಂದ ಅರಮನೆಯ ಕೋಟೆ ಆಂಜನೇಯ ಸ್ವಾಮಿ ದೇವಸ್ಥಾನದ ಮುಂಭಾಗ ಆಯೋಜಿಸಲಾಗಿದ್ದ ಬಲೂನ್ ಅನಾವರಣ ಹಾಗೂ ಜಾಥಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಬೂತ್ ಮಟ್ಟದ ಅಧಿಕಾರಿಗಳಿಂದ ಪ್ರತಿ ಮನೆಗೂ ಮತದಾರರ ಮಾಹಿತಿ ಚೀಟಿಯನ್ನು ತಲುಪುವಂತೆ ಮಾಡಬೇಕು. ಆಗ ಮಾತ್ರವೇ ನಮ್ಮ ಉದ್ದೇಶ ಸಫಲವಾಗುವುದು ಎಂದರು.



ಜಿಲ್ಲಾ ಸ್ವೀಪ್ ಸಮಿತಿಯು ಚುನಾವಣೆಯನ್ನು ಯಶಸ್ವಿಯಾಗಿಸಲು ಗ್ರಾಮ, ತಾಲೂಕು ಹಾಗೂ ಪಾಲಿಕೆಯ ವ್ಯಾಪ್ತಿಯಲ್ಲಿ ವಿವಿಧ ರೀತಿಯ ವಿಶೇಷ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಮತದಾರರಲ್ಲಿ ನೈತಿಕ ಮತದಾನ ಮಾಡಲು ಪ್ರೇರೇಪಿಸುತ್ತಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಚಿಸ್ಕಾಂ ವ್ಯವಸ್ಥಾಪಕ ನಿರ್ದೇಶಕರಾದ ಜಿ. ಶೀಲಾ ಅವರು ಮಾತನಾಡಿ, ಹಿಂದೆಂದೂ ಆಗಿರದಷ್ಟು ಮತದಾನವನ್ನು ಈ ಬಾರಿಯ ಚುನಾವಣೆಯಲ್ಲಿ ಆಗುವಂತೆ ಮಾಡಬೇಕು. ವಿಭಿನ್ನವಾಗಿ ಜನರ ಮುಂದೆ ಮತದಾನದ ಬಗ್ಗೆ ತಿಳಿಸುವ ಕಾರ್ಯಕ್ರಮಗಳು ನಡೆಯುತ್ತಿದ್ದರೆ ಅವರಿಗೂ ಮತದಾನ ಮಾಡಲೇಬೇಕೆಂಬ ಮನೋಭಾವ ಉಂಟಾಗುತ್ತದೆ. ಇದರಿಂದ ಮತದಾನ ಹೆಚ್ಚಳದ ಉದ್ದೇಶ ಸಫಲವಾಗುತ್ತದೆ ಎಂದರು.

ಕನ್ನಡದ ಚಲನಚಿತ್ರ ನಟರಾದ ಜಿಮ್ ರವಿ ನವರು ಮಾತನಾಡಿ, ಮತದಾನ ಎಂಬುದು ಒಂದು ಹುಬ್ಬದ ಹಾಗೆ ಇದರಲ್ಲಿ ಎಲ್ಲರೂ ನೈತಿಕವಾಗಿ ಭಾಗವಹಿಸಬೇಕು. ಸದೃಢ ದೇಹಬೇಕೆಂದರೆ ಪ್ರತಿನಿತ್ಯವು ವ್ಯಾಯಾಮ ಮಾಡಬೇಕು ಅದೇ ರೀತಿಯಾಗಿ ದೇಶವನ್ನು ಅಭಿವೃದ್ಧಿಗೊಳಿಸಲು ಉತ್ತಮ ನಾಯಕನ ಆಯ್ಕೆ ಮಾಡಲು ಕಡ್ಡಾಯವಾಗಿ ಮತದಾನ ಮಾಡಬೇಕು. ಇತ್ತೀಚಿನ ದಿನಗಳಲ್ಲಿ ಬಹಳಷ್ಟು ಜನ ಚುನಾವಣೆಯ ದಿನದಂದು ರಜಾ ದಿನ ಎಂದು ಭಾವಿಸುತ್ತಾರೆ ಆದರೆ ಅದು ತಪ್ಪು ಮತದಾನ ನಮ್ಮೆಲ್ಲರ ಹಕ್ಕು ಆ ದಿನದಂದು ಪ್ರತಿಯೊಬ್ಬರು ತಮ್ಮ ಮತ ಚಲಾಯಿಸಬೇಕು ಎಂದರು.

ಮತದಾರರು ಯಾವುದೇ ಆಸೆ ಅಮಿಷಗಳಿಗೆ ಒಳಗಾಗದೆ ನೈತಿಕವಾಗಿ ನಿಮ್ಮ ಮತವನ್ನು ಚಲಾಯಿಸುವ ಮೂಲಕ ಈ ಬಾರಿ ಮೈಸೂರಿನಲ್ಲಿ ಶೇಕಡ ನೂರಕ್ಕೆ ನೂರರಷ್ಟು ಮತದಾನ ಮಾಡುವುದಕ್ಕೆ ನಾವೆಲ್ಲರೂ ಶ್ರಮಿಸೋಣ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ನಗರ ಪೊಲೀಸ್ ಆಯುಕ್ತರಾದ ರಮೇಶ್ ಬಾನೋತ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಜಿಲ್ಲಾ ಸ್ವೀಪ್ ಸಮಿತಿಯ ಅಧ್ಯಕ್ಷರಾದ ಕೆಎಂ ಗಾಯತ್ರಿ, ಮಹಾನಗರ ಪಾಲಿಕೆಯ ಆಯುಕ್ತರಾದ ಎನ್ ಎನ್ ಮಥು ಸೇರಿದಂತೆ ಇನ್ನಿತರ ಜಿಲ್ಲಾ ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

ಬೇಸಿಗೆ ಶಿಬಿರದಲ್ಲಿ ಚಿಣ್ಣರೊಂದಿಗೆ ನಲಿದ ಪೋಷಕರು

ತುಮಕೂರಿನ ಆರ್ಟ್ ಯುನಿವರ್ಸ್, ಸೈ ಆಡ್, ಪ್ರೆಸ್ ಕ್ಲಬ್ ತುಮಕೂರು ಇವರ ಸಂಯುಕ್ತಾಶ್ರಯದಲ್ಲಿ ನಗರದ ಅಲದಮರ ಪಾರ್ಕ್‌ನಲ್ಲಿ ಆಯೋಜಿಸಿರುವ ಚಿಣ್ಣರ ಬೇಸಿಗೆ ಶಿಬಿರದ 2 ಎರಡನ್ನು 3ನೇ ದಿ

website: www.kayakayogi.com
ಕಾಯಕಯೋಗಿ
KAYAKA YOGI - Regional Daily
ಪುಟ-4
18-04-2024
ತುಮಕೂರು-ಚಾಮರಾಜನಗರ

ಸಂತೆಮರಳ್ಳಿ ತಾಲೂಕು ಸ್ವೀಪ್ ಸಮಿತಿಯಿಂದ ಮತದಾನ ಜಾಗೃತಿ

■ ಕಾಯಕಯೋಗಿ ಸುದ್ದಿ

ಚಾಮರಾಜನಗರ: ಚಾಮರಾಜನಗರ ತಾಲ್ಲೂಕು ಪಂಚಾಯಿತಿ ಮತ್ತು ತಾಲ್ಲೂಕು ಸ್ವೀಪ್ ಸಮಿತಿ ಹಾಗೂ ಸಂತೆಮರಳ್ಳ ಯೋಜ ವ್ಯಾಪ್ತಿಯ ವಿವಿಧ ಪಂಚಾಯಿತಿಗಳ ವತಿಯಿಂದ ಸಂತೆಮರಹಳ್ಳಿಯಲ್ಲಿ ಚುನಾವಣಾ ಪರ್ವ-ದೇಶದ ಗರ್ವ ಎಂಬ ಘೋಷವಾಕ್ಯದೊಂದಿಗೆ ಆಯೋಜಿಸಿದ ಮತದಾನ ಜಾಗೃತಿ ಜಾಥಾ ಆಯೋಜಿಸಲಾಗಿತ್ತು.

ಜಾಗೃತಿ ಜಾಥಾಕ್ಕೆ ತಾಲ್ಲೂಕು ಪಂಚಾಯಿತಿ ಕಾರ್ಯ ನಿರ್ವಾಹಕ ಅಧಿಕಾರಿಗಳಾದ ಕೃಷ್ಣಪ್ಪ ಅವರು ಚಾಲನೆ ನೀಡಿ ಪ್ರತಿಜ್ಞಾ ವಿಧಿ ಬೋಧಿಸಿದರು. ಬಳಿಕ ಸಂತೆಮರಳ್ಳ ವೃತ್ತದಲ್ಲಿ ಮತದಾನ ಜಾಗೃತಿಗಾಗಿ ಮಾನವ ಸರಪಳಿ ನಿರ್ಮಿಸಿ ಚುನಾವಣಾ ಪರ್ವ-ದೇಶದ ಗರ್ವ ಎಂಬ ಘೋಷವಾಕ್ಯ ಮೊಳಗಿಸಿ ಮತದಾನದ ಅರಿವು ಮೂಡಿಸಲಾಯಿತು. ಜಾಥಾದಲ್ಲಿ ಅಲಂಕರಿಸಿದ ಎತ್ತಿನ ಗಾಡಿಗಳು ಪಾಲ್ಗೊಂಡಿದ್ದವು. ಅಲ್ಲದೆ ಸಂತೆಮರಳ್ಳಿಯ



ಗ್ರಾಮೀಣ ಸಂತೆಯಲ್ಲಿ ಅಕ್ಕಿಕ್ಷುದ ಹಳ್ಳಿಯ ಜನರು, ರೈತರು ಬೆಳೆದಂತಹ ಪದಾರ್ಥಗಳನ್ನು ಹಾಗೂ ಬೀದಿ ಬೀದಿ ವ್ಯಾಪಾರಿಗಳು ತರಕಾರಿ ಮಾರುವವರು ಮತ್ತು ಎಲ್ಲಾ ರೈತ ಬಾಂಧವರಿಗೂ ಮತದಾನದ ಮಮತೆಯ ಕರೆ ಓಲೆಯ ಆಮಂತ್ರಣ ಪತ್ರ ವಿತರಿಸಿ, ಕಡ್ಡಾಯವಾಗಿ ಮತದಾನ ಮಾಡಬೇಕೆಂದು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿದರು.

ಗುತ್ತಿಗೆದಾರನ ನಿರ್ಲಕ್ಷ್ಯಕ್ಕೆ ಕಾರ್ಮಿಕ ಬಲಿ: ಮುನ್ನೆಚ್ಚರಿಕ ಕ್ರಮ ವಹಿಸದ ಇಲಾಖೆ..!

■ ಕಾಯಕಯೋಗಿ ಸುದ್ದಿ

ಕೊರಟಗೆರೆ: ರಾಜ್ಯದ ಪ್ರಮುಖ ಧಾರ್ಮಿಕ ಕ್ಷೇತ್ರದಲ್ಲಿ ಒಂದಾದ ಗೊರವನಹಳ್ಳಿ ಶ್ರೀ ಮಹಾಲಕ್ಷ್ಮಿ ದೇವಾಲಯಕ್ಕೆ ಸಂಪರ್ಕ ಕಲ್ಪಿಸುವ ಸೇತುವೆ ಕಾಮಗಾರಿ ಪ್ರಗತಿಯಲ್ಲಿರುವ ಸೇತುವೆ ಎರಡು ಬದಿಯಲ್ಲಿ ಯಾವುದೇ ಸೂಚನೆ ಫಲಕ ಅಥವಾ ಮುನ್ನೆಚ್ಚರಿಕೆ ಕ್ರಮ ವಹಿಸದ ಕಾರಣ ರಾತ್ರಿ ವೇಳೆ ದ್ವಿಚಕ್ರ ವಾಹನ ಸವಾರ ಏಕಾಏಕಿ ಸೇತುವೆ ಕೆಲಸ ನಡೆಯುತ್ತಿದ್ದ ಸೇತುವೆಯ ಕಂದರಕ್ಕೆ ಬಿದ್ದು ಕಬ್ಬಿಣದ ರಾಡುಗಳು ಚುಚ್ಚಿಕೊಂಡು ಭಯಾನಕ ರೀತಿಯಲ್ಲಿ ಸಾವಿಗೀಡಾದ ದುರ್ಘಟನೆ ಕೊರಟಗೆರೆ ತಾಲೂಕಿನ ಕೋಳಾಲ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಜರುಗಿದೆ.

ರಾಜ್ಯದ ಪ್ರಮುಖ ಧಾರ್ಮಿಕ ಕ್ಷೇತ್ರದಲ್ಲೂ ಒಂದಾದ ಗೊರವನಹಳ್ಳಿ ಶ್ರೀ ಮಹಾಲಕ್ಷ್ಮಿ ದೇವಸ್ಥಾನಕ್ಕೆ ಸಂಪರ್ಕ ಕಲ್ಪಿಸುವ ತೀರ್ಥ ಹಾಗೂ ಗೊರವನಹಳ್ಳಿ ನಡುವಿನ ಹೊಸದಾಗಿ ನಿರ್ಮಾಣಗೊಳ್ಳುತ್ತಿರುವ ಸೇತುವೆಯ ಬಳಿ ಭಾನುವಾರ ರಾತ್ರಿ 8ಗಂಟೆ ಸಂದರ್ಭದಲ್ಲಿ ಈ ದುರ್ಘಟನೆ ಜರುಗಿದ್ದು, ದುರ್ಘಟನೆಯಲ್ಲಿ ಬಿಹಾರ ಮೂಲದ ಜೋಟು ಅಲಿಯಾಸ್ ಚೌಧರಿ ಎಂಬ 32 ವರ್ಷದ ಯುವಕ ರಸ್ತೆ ಅಪಘಾತದಲ್ಲಿ ಮೃತಪಟ್ಟ ದುರ್ದೈವಿಯಾಗಿದ್ದಾನೆ.





ಮೃತ ಜೋಟು ಅಲಿಯಾಸ್ ಚೌಧರಿ ಕಳೆದ 4-5 ವರ್ಷಗಳಿಂದಲೂ ಇಬ್ಬರು ಸಹೋದರರು ಬಿಹಾರ ರಾಜ್ಯದಿಂದ ಕೆಲಸ ಅರಸಿ ಕರ್ನಾಟಕಕ್ಕೆ ಬಂದು ತೀರ್ಥಾ ಗ್ರಾಮದಲ್ಲಿ ಮನೆಗಳಿಗೆ ಟೈಲ್ಸ್ ಹಾಗೂ ಗ್ರಾನೈಟ್ ಹಾಕುವ ಕೆಲಸ ಮಾಡಿಕೊಂಡು ಜೀವನ ನಡೆಸುತ್ತಿದ್ದ. ಕೆಲಸಗಳನ್ನು ಸಹ ಈ ಯುವಕರು ಮಾಡುತ್ತಿದ್ದರೂ ಎನ್ನಲಾಗಿದ್ದು ಮೃತ್ಯು ಭಾನುವಾರ ರಾತ್ರಿ ಸೇತುವೆಯ ಬಳಿ ಹಂತದಲ್ಲಿರುವ ಕಾಮಗಾರಿಯ ನಿರ್ವಹಣೆ ಹಾಗೂ ಮುನ್ನೆಚ್ಚರಿಕೆ ಕ್ರಮ ಸಮರ್ಪಕವಾಗಿ ನಿರ್ವಹಣೆ ಮಾಡದ ಕಾರಣ ಈ ಅವಘಡಕ್ಕೆ ಕಾರಣವಾಗಿದೆ. ಒಬ್ಬ ಯುವಕನ ಪ್ರಾಣ ಗುತ್ತಿಗೆದಾರರ ಬೇಜವಾಬ್ದಾರಿತನ ಹಾಗೂ ಪಿಡಬ್ಲ್ಯೂಡಿ ಅಧಿಕಾರಿಗಳ ನಿರ್ಲಕ್ಷ್ಯ ಕಾರಣ ವಾಗಿದೆ ಯಾರು ಜವಾಬ್ದಾರಿ, ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳು ಹಾಗೂ ಗುತ್ತಿಗೆದಾರ ಇಬ್ಬರು ಇದರ ನೇರ ಹೊಣೆಗಾರರಾಗುತ್ತಿದ್ದಾರೆ ಎನ್ನಲಾಗಿದೆ.

ಪಿಡಬ್ಲ್ಯೂಡಿ -ಗುತ್ತಿಗೆದಾರನ ವಿರುದ್ಧ ಸಾರ್ವಜನಿಕರು ಆಕ್ರೋಶ

ಸ್ಥಳೀಯ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಮುರುಳಿ ಕೊರಟಗೆರೆ ಪಿಡಬ್ಲ್ಯೂಡಿ ಅಧಿಕಾರಿಗಳ ನಿರ್ಲಕ್ಷ ಹಾಗೂ ಗುತ್ತಿಗೆದಾರನ ಬೇಜವಾಬ್ದಾರಿ ವಿರುದ್ಧ ಬೇಸರ ವ್ಯಕ್ತಪಡಿಸಿ, ಕಾಮಗಾರಿ ನಡೆಯುವ ಸ್ಥಳಕ್ಕೆ ಲೋಕಪಯೋಗಿ ಇಲಾಖೆಯ ಅಧಿಕಾರಿಗಳು ಮಿಡಿದು ನಿಂತು ಕಾಮಗಾರಿಗಳನ್ನ ಸಮರ್ಪಕವಾಗಿ ನಿರ್ವಹಣೆ ಮಾಡದಿರುವುದು, ಅಧಿಕಾರಿಗಳು ಗುತ್ತಿಗೆದಾರರಿಂದ ಪ್ರಗತಿ ಪರಿಶೀಲನೆ ಮಾಡದಿರುವುದು ಕೆಲಸ ಅರಸಿ ಕರ್ನಾಟಕಕ್ಕೆ ಬಂದು ತೀರ್ಥಾ ಗ್ರಾಮದಲ್ಲಿ ಮನೆಗಳಿಗೆ ಟೈಲ್ಸ್ ಹಾಗೂ ಗ್ರಾನೈಟ್ ಹಾಕುವ ಕೆಲಸ ಮಾಡಿಕೊಂಡು ಜೀವನ ನಡೆಸುತ್ತಿದ್ದ ಕೆಲಸಗಳನ್ನು ಸಹ ಈ ಯುವಕರು ಮಾಡುತ್ತಿದ್ದರೂ ಎನ್ನಲಾಗಿದ್ದು ಮೃತ್ಯು ಭಾನುವಾರ ರಾತ್ರಿ ಸೇತುವೆಯ ಬಳಿ ಹಂತದಲ್ಲಿರುವ ಕಾಮಗಾರಿಯ ನಿರ್ವಹಣೆ ಹಾಗೂ ಮುನ್ನೆಚ್ಚರಿಕೆ ಕ್ರಮ ಸಮರ್ಪಕವಾಗಿ ನಿರ್ವಹಣೆ ಮಾಡದ ಕಾರಣ ಈ ಅವಘಡಕ್ಕೆ ಕಾರಣವಾಗಿದೆ. ಒಬ್ಬ ಯುವಕನ ಪ್ರಾಣ ಗುತ್ತಿಗೆದಾರರ ಬೇಜವಾಬ್ದಾರಿತನ ಹಾಗೂ ಪಿಡಬ್ಲ್ಯೂಡಿ ಅಧಿಕಾರಿಗಳ ನಿರ್ಲಕ್ಷ ಕಾರಣ ವಾಗಿದೆ ಯಾರು ಜವಾಬ್ದಾರಿ, ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳು ಹಾಗೂ ಗುತ್ತಿಗೆದಾರ ಇಬ್ಬರು ಇದರ ನೇರ ಹೊಣೆಗಾರರಾಗುತ್ತಿದ್ದಾರೆ ಎನ್ನಲಾಗಿದೆ.

ಬಡಪಾಯಿ ಕೂಲಿ ಕಾರ್ಮಿಕ ಬಿಹಾರ ರಾಜ್ಯದಿಂದ ಕರ್ನಾಟಕಕ್ಕೆ ಕೆಲಸ ಹರಸಿ ಬಂದ ಜೀವ ಗುತ್ತಿಗೆದಾರನಾ ನಿರ್ಲಕ್ಷ್ಯ ದಿಂದ ಕಾಮಗಾರಿ ನಡೆಯುವ ಸ್ಥಳದಲ್ಲಿ ಪ್ರಗತಿಯಲ್ಲಿರುವ ಕಾಮಗಾರಿ ಅದರಲ್ಲೂ ಕಬ್ಬಿಣದ ರಾಡುಗಳನ್ನ ಕಟ್ಟಿ ರಸ್ತೆಯ ಪಕ್ಕದಲ್ಲಿ ಯಾವುದೇ ರೀತಿಯ ಅಪಾಯ ನಡೆಯದ ರೀತಿಯಲ್ಲಿ ಮುನ್ನೆಚ್ಚರಿಕೆ ಕ್ರಮ ವಹಿಸದೆ ಇರುವ ಕಾರಣ ಕೂಲಿ ಕಾರ್ಮಿಕ ಜೋಟು ಅಲಿಯಾಸ್ ಚೌಧರಿ ದ್ವಿಚಕ್ರ ವಾಹನದಲ್ಲಿ ರಾತ್ರಿ ವೇಳೆ ಬರುವ ಸಂದರ್ಭದಲ್ಲಿ ಏಕಾಏಕಿ ಸೇತುವೆಯ ಪಕ್ಕದಲ್ಲಿ ಯಾವುದೇ ಮಣ್ಣಿನ ಗೋಡೆ ಅಥವಾ ಮಣ್ಣಿನ ದಿಬ್ಬೆ ಇಲ್ಲದ ಕಾರಣ ನೇರವಾಗಿ ದ್ವಿಚಕ್ರ ವಾಹನ ರಾತ್ರಿಯ ವೇಳೆ ಕಾಮಗಾರಿ ನಡೆಯುತ್ತಿರುವ ಸೇತುವೆ ಕಂದರಕ್ಕೆ ಬಿದ್ದು ಕಬ್ಬಿಣದ ರಾಡುಗಳು ಚುಚ್ಚಿಕೊಂಡು ದ್ವಿಚಕ್ರವಾಹನ ಸವಾರರನ ಚೀರಾಟದಿಂದ ಸಾರ್ವಜನಿಕರು ಕಂಡುಕೊಂಡು ರಾತ್ರಿ ವೇಳೆ ಬೆಂಗಳೂರಿನ ನಿಮಾನ್ಸ್ ಆಸ್ಪತ್ರೆಗೆ ಸೇರಿಸಿದರೂ ಯಾವುದೇ ಪ್ರಯೋಜನ ವಾಗದೆ ಚಿಕಿತ್ಸೆ ಫಲಕಾರಿಯಾಗದೆ ಕೊನೆ ಉಸಿರಲ್ಲಿದ್ದಾನೆ ಎನ್ನಲಾಗಿದೆ.

ಹೆಳಯೋಯ್ದು ಕಾಮಗಾರಿ ನಡೆಯುತ್ತಿರುವ ಸೇತುವೆಯಿಂದ ಕೆಳಗುರುಳಿ ಕಬ್ಬಿಣದ ರಾಡುಗಳ ಮೇಲೆ ಬಿದ್ದು ತೀವ್ರ ಪೆಟ್ಟಾಗಿ ಬೆಂಗಳೂರ್ ನಿಮಾನ್ಸ್ ಆಸ್ಪತ್ರೆಯಲ್ಲಿ ಕೊನೆ ಉಸಿರಲ್ಲಿದ್ದಾನೆ ಎನ್ನಲಾಗಿದೆ.



ಚಾಮರಾಜನಗರ : ಪಟ್ಟಣದ ರಾಮಸಮುದ್ರ ಬಡಾವಣೆಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ನಗರಸಭೆ, ಹಾಗೂ ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಮತದಾರರಿಗೆ ಜಾಗೃತಿ ಮೂಡಿಸಲು ಮುಂಬತ್ತಿ ಮೆರವಣಿಗೆ ಮೂಲಕ ಜಾಗೃತಿ ಜಾಥಾವನ್ನು ಹಮ್ಮಿಕೊಳ್ಳಲಾಗಿತ್ತು.
ಜಾಗೃತಿ ಜಾಥಾಕ್ಕೆ ನಗರಸಭೆ ಪೌರಾಯುಕ್ತ ರಾಮದಾಸ್ ಅವರು ಚಾಲನೆ ನೀಡಿದರು. ನಗರಸಭೆಯ ಅಧಿಕಾರಿಗಳು ಜಾಥಾದಲ್ಲಿ ಪಾಲ್ಗೊಂಡಿದ್ದರು.

ಬರ ನಿರ್ವಹಣೆ ಹಿನ್ನೆಲೆಯಲ್ಲಿ ಜಾನುವಾರುಗಳಿಗೆ ಕುಡಿಯುವ ನೀರಿನ ವ್ಯವಸ್ಥೆ ಮಾಡಲು ಸೂಚನೆ

ಚಾಮರಾಜನಗರ:- ಜಿಲ್ಲೆಯಲ್ಲಿ ಬರ ನಿರ್ವಹಣೆ ಹಿನ್ನೆಲೆ ಜಾನುವಾರುಗಳಿಗೆ ಕುಡಿಯುವ ನೀರಿನ ಕೊರತೆ ಉಂಟಾಗಿದ್ದು, ಈ ಸಂಬಂಧ ಜಾನುವಾರುಗಳಿಗೆ ನೀರಿನ ಕೊರತೆ ಇರುವ ಗ್ರಾಮಗಳಲ್ಲಿ ಆಯಾ ತಾಲೂಕು ತಹಶೀಲ್ದಾರರು ಹಾಗೂ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು ಪಶುಪಾಲನಾ ಇಲಾಖೆಯ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಜಾನುವಾರುಗಳಿಗೆ ನೀರು ಕುಡಿಯುವ ನೀರಿನ ವ್ಯವಸ್ಥೆ ಮಾಡುವಂತೆ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ತಿಳಿಸಿದ್ದಾರೆ.

ಕುಡಿಯುವ ನೀರಿನ ಕೊರತೆ ಇರುವ ಗ್ರಾಮಗಳಲ್ಲಿ ಜಾನುವಾರುಗಳಿಗೆ ನೀರು ಕುಡಿಯಲು ನಿರ್ಮಿಸಿರುವ ನೀರಿನ ತೊಟ್ಟಿಗಳನ್ನು ಪರಿಶೀಲಿಸಿ ಸ್ವಚ್ಛತೆಗೊಳಿಸಬೇಕು. ತೊಟ್ಟಿಗಳು ದುರಸ್ಥಿಯಲ್ಲಿದ್ದರೆ ಸರಿಪಡಿಸಬೇಕು. ನೀರಿನ ಯಾವುದೇ ಬೇರೆ ಮೂಲಗಳು ಇಲ್ಲದಿದ್ದಲ್ಲಿ ಜಾನುವಾರುಗಳಿಗೆ ಕುಡಿಯುವ ನೀರನ್ನು ಟ್ಯಾಂಕರ್ ಮೂಲಕ ಜಾನುವಾರು ತೊಟ್ಟಿಗಳಿಗೆ ನೀರನ್ನು ಸರಬರಾಜು ಮಾಡಿ ಯಾವುದೇ ಜಾನುವಾರುಗಳ ಪ್ರಾಣ ಹಾನಿಯಾಗದಂತೆ ಅಗತ್ಯ ಕ್ರಮವಹಿಸಬೇಕು. ತಪ್ಪದ್ದಲ್ಲಿ ಜಿಲ್ಲಾ ವಿಪತ್ತು ನಿರ್ವಹಣಾ ಕಾಯ್ದೆ ಅನ್ವಯಂ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರಾದ ಶಿಲ್ಪಾ ನಾಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಚಾಮರಾಜನಗರ ಲೋಕಸಭಾ ಕ್ಷೇತ್ರ: ಕೈ-ಕಮಲ ನಡುವೆ ಫೈಟ್

■ ಕಾಯಕಯೋಗಿ ಸುದ್ದಿ
ಮಹಾದೇಶ್ ಎಂ.ಗೌಡ ಹನೂರು

ಚಾಮರಾಜನಗರ: ಲೋಕಸಭೆ ಚುನಾವಣೆಗೆ ಕೆಲವು ದಿನಗಳು ಮಾತ್ರ ಬಾಕಿಯಿದೆ. ಮತದಾನಕ್ಕೆ ದಿನ ಸಮೀಪಿಸುತ್ತಿರುವಂತೆ ಚಾಮರಾಜನಗರ ಲೋಕಸಭಾ ಕ್ಷೇತ್ರದಲ್ಲಿ ಅಭ್ಯರ್ಥಿಗಳು ಬಿರುಸಿನ ಪ್ರಚಾರ ನಡೆಸುತ್ತಿದ್ದಾರೆ. ಹಳೇ ಮೈಸೂರು ಭಾಗದ ಜಾನಪದ ಕಲೆಗಳ ತವರೂರು, ಮಲೆ ಮಹದೇಶ್ವರ, ಬಿಳಿಗಿರಿರಂಗನಾಥ, ಹಿವಮವದ್ ಗೋಪಾಲಸ್ವಾಮಿ ಪುಣ್ಯ ಕ್ಷೇತ್ರಗಳ ಜೊತೆಗೆ ನಾಡು-ನುಡಿಗಾಗಿ ಹೋರಾಡುವ ನೆಲ ಎನ್ನುವ ಕೀರ್ತಿವೂ ಚಾಮರಾಜನಗರಕ್ಕಿದೆ. ಮೋದಿ ಅಲೆ- ಸಿದ್ದರಾಮಯ್ಯ ಹವಾ ಎರಡರ ನಡುವೆ ಜಂಗಿಕುಸ್ತಿ ನಡೆಯುವುದರಿಂದ ಹೈವೋಲ್ಟೇಜ್ ಕ್ಷೇತ್ರಗಳಲ್ಲಿ ಒಂದಾಗಿದೆ.

ಚಾಮರಾಜನಗರ ಲೋಕಸಭಾ ಕ್ಷೇತ್ರದಲ್ಲಿ ಇರುವ ಜಾತಿ ಲೆಕ್ಕಾಚಾರ ಏನು.? ಒಟ್ಟು ಕ್ಷೇತ್ರಗಳ ವಿವರ ಹಾಗೂ ಒಟ್ಟು ಮತದಾರರ ಸಂಪೂರ್ಣ ಮಾಹಿತಿ ಇಲ್ಲಿದೆ ನೋಡಿ.



ಚಾಮರಾಜನಗರ ಲೋಕಸಭಾ ಕ್ಷೇತ್ರದಲ್ಲಿ ಮಾಜಿ ಶಾಸಕ ಎಸ್.ಬಾಲರಾಜು ಬಿಜೆಪಿ ಹಾಗೂ ಜಾತ್ಯತೀತ ಜನತಾದಳ ಮೈತ್ರಿ ಅಭ್ಯರ್ಥಿಯಾಗಿದ್ದು, ಕಾಂಗ್ರೆಸ್ಸಿಂದ ಸಚಿವ ಎಚ್.ಸಿ.ಮಹಾದೇವಪ್ಪ ಪುತ್ರ ಸುನಿಲ್ ಬೋಸ್ ಕಣಕ್ಕಿಳಿದಿದ್ದಾರೆ. ಚಾಮರಾಜನಗರ ಲೋಕಸಭಾ ಕ್ಷೇತ್ರ ಪರಿಶಿಷ್ಟ ಜಾತಿಗೆ ಮೀಸಲಾದ ಕ್ಷೇತ್ರವಾಗಿದೆ. ಕ್ಷೇತ್ರದಲ್ಲಿ ಬಿಜೆಪಿ ಓರ್ವ ಶಾಸಕನೂ ಇಲ್ಲದಿರುವುದು, ಸಿದ್ದರಾಮಯ್ಯ ವರುಣ ಕೂಡ ಕ್ಷೇತ್ರಕ್ಕೆ ಒಳಪಡುವುದು ಹಾಗೂ ಗ್ಯಾರಂಟಿಗಳ ಮಹಿಮೆಯಿಂದ ಕಾಂಗ್ರೆಸ್ ಗೆಲ್ಲಲಿದೆ ಎಂಬುದು ಕೈ ಪಕ್ಷದ ವಿಶ್ವಾಸವಾದರೇ

ಲೋಕಸಭಾ ವ್ಯಾಪ್ತಿಯಲ್ಲಿ 7 ಮಂದಿ ಕಾಂಗ್ರೆಸ್ ಶಾಸಕರಿರುವುದು
ಬಿಎಸ್ಪಿ ಸಂಘಟನೆಯಲ್ಲಿ ಹಿಂದೆ ಬಿದ್ದಿರುವುದರಿಂದ ಅದರ ಮತಗಳು ಕೈಗೆ ಬರುವ ನಿರೀಕ್ಷೆ
(ಕಳೆದ ಚುನಾವಣೆಯಲ್ಲಿ 87 ಸಾವಿರ ಮತ ಪಡೆದಿದ್ದ ಬಿಎಸ್ಪಿ ಅಭ್ಯರ್ಥಿ)

ಚಾಮರಾಜನಗರ ಲೋಕಸಭಾ ಕ್ಷೇತ್ರದ ಒಟ್ಟು 8 ಕ್ಷೇತ್ರಗಳು

ಚಾಮರಾಜನಗರ ಜಿಲ್ಲೆಯ 4 ವಿಧಾನಸಭಾ ಕ್ಷೇತ್ರಗಳು ಹಾಗೂ ಮೈಸೂರು ಜಿಲ್ಲೆಯ 4 ವಿಧಾನಸಭಾ ಕ್ಷೇತ್ರಗಳು ಸೇರಿ ಒಟ್ಟು 8 ವಿಧಾನಸಭಾ ಕ್ಷೇತ್ರಗಳು ಚಾಮರಾಜನಗರ ಲೋಕಸಭಾ ಕ್ಷೇತ್ರಕ್ಕೆ ಒಳಪಡಲಿದೆ.

ಚಾಮರಾಜನಗರ ಜಿಲ್ಲೆ ಕ್ಷೇತ್ರಗಳು	ಮೈಸೂರು ಜಿಲ್ಲೆಯ ವಿಧಾನಸಭಾ ಕ್ಷೇತ್ರಗಳು
1. ಚಾಮರಾಜನಗರ	1. ವರುಣ
2. ಗುಂಡ್ಲುಪೇಟೆ	2. ನಂಜನಗೂಡು
3. ಕೊಳ್ಳೇಗಾಲ	3. ಟಿ.ನರಸೀಪುರ
4. ಹನೂರು	4. ಎಚ್.ಡಿ.ಕೋಟೆ

ಮೋದಿ ನಾಮಬಲ ಹಾಗೂ ಬಾಲರಾಜು ಸಜ್ಜನ ರಾಜಕಾರಣಿ ಎಂಬ ದಿಸೆಯಲ್ಲಿ ಮತಗಳು ಸಿಕ್ಕು ಕಮಲ ಅರಳುವ ಲೆಕ್ಕಾಚಾರದಲ್ಲಿ ಬಿಜೆಪಿ ಪ್ರಚಾರದಲ್ಲಿ ತೊಡಗಿದೆ.

ಎರಡು ಪಕ್ಷಗಳಲ್ಲೂ ಲೆಕ್ಕಾಚಾರ:
2019 ರ ಚುನಾವಣೆಯಲ್ಲಿ ಮೊದಲ ಬಾರಿಗೆ ಚಾಮರಾಜನಗರದಲ್ಲಿ ಕಮಲ ಅರಳಿತ್ತು. ಆ ಮೂಲಕ ಕಾಂಗ್ರೆಸ್ ಭದ್ರಕೋಟೆ ಅಂತಲೇ ಕರೆಯುತ್ತಿದ್ದ ಚಾಮರಾಜನಗರ ಲೋಕಸಭಾ ಕ್ಷೇತ್ರದಲ್ಲಿ ಬಿಜೆಪಿ ನಗು ಬೀರಿತ್ತು. ಈಗ ಎರಡನೇ ಬಾರಿಗೆ ಕಮಲ ಅರಳಿಸುವ ಜೊತೆಗೆ ಸಿಎಂ ಸಿದ್ದರಾಮಯ್ಯ ಕ್ಷೇತ್ರದಲ್ಲಿ ಬಿಜೆಪಿ ಗೆಲ್ಲಿಸಬೇಕೆಂದು ಕಮಲಕಲಿಗಳು ಪಣ ತೊಟ್ಟಿದ್ದಾರೆ.

ಮತ್ತೊಂದೆಡೆ ಸಿದ್ದರಾಮಯ್ಯ ಆಪ್ತ ಹಾಗೂ ಪ್ರಭಾವಿ ಸಚಿವ ಎಚ್.ಸಿ.ಮಹಾದೇವಪ್ಪ ತಮ್ಮ ಪುತ್ರನಿಗೆ ಟಿಕೆಟ್ ಕೊಡಿಸಿದ್ದಾರೆ. ಕ್ಷೇತ್ರದಲ್ಲಿ ಸಿಎಂ ಸಿದ್ದರಾಮಯ್ಯ ಅವರ ವರ್ಚಸ್ಸು, ಸರ್ಕಾರದ ಗ್ಯಾರಂಟಿ ಯೋಜನೆಗಳ ಅನುಷ್ಠಾನದಿಂದಾಗಿ ಎಲ್ಲ ಸಮುದಾಯದ ಜನರು ಬೆಂಬಲ ನೀಡುವ ನಿರೀಕ್ಷೆ ಕಾಂಗ್ರೆಸ್ ಪಕ್ಷಕ್ಕಿದೆ.



ಈ ಚುನಾವಣೆಯು ಬಿಜೆಪಿ ಮತ್ತು ಕಾಂಗ್ರೆಸ್ ನಡುವೆ ನೇರ ಹಣಾಹಣಿ ಇದ್ದರೂ ಬಿಎಸ್ಪಿ ಗೆ ಈ ಬಾರಿ ತನ್ನ ಶಕ್ತಿ ತೋರಬೇಕಾದ ಚುನಾವಣೆ ಇದಾಗಿದೆ. ಕಳೆದ ಬಾರಿ ಎಸ್. ಮಹೇಶ್ ಬಿಎಸ್ಪಿ ಅಲ್ಲಿದ್ದರು ಈಗ ಬಿಜೆಪಿಯಲ್ಲಿದ್ದಾರೆ. ವಿಧಾನಸಭಾ ಚುನಾವಣೆ ಸೋಲನ್ನು ಲೋಕಸಭಾ ಚುನಾವಣೆ ಗೆಲುವಿನ ಮೂಲಕ ತಮ್ಮ ಪ್ರಭಾವಳಿಯ ಲೆಕ್ಕಾಚಾರದಲ್ಲಿದ್ದಾರೆ ಕಾಂಗ್ರೆಸ್ ಗೆ ಮತ್ತೇ ತನ್ನ ಭದ್ರಕೋಟೆಯನ್ನು ಉಳಿಸಿಕೊಳ್ಳುವ ಹಾಗೂ ಮುಖ್ಯಮಂತ್ರಿಗೆ ಪ್ರತಿಷ್ಠೆಯ ಚುನಾವಣೆ ಇದಾಗಿದೆ.

ಅಭ್ಯರ್ಥಿಗಳ ಪ್ಲಸ್ ಅಂಡ್ ಮೈನಸ್

ಕಾಂಗ್ರೆಸ್ ಸುನಿಲ್ ಬೋಸ್ ಮೈನಸ್
ಕ್ಷೇತ್ರದ ಜನರಿಗೆ ಅಷ್ಟಾಗಿ ಪರಿಚಯ ಇಲ್ಲ.
ಮೈತ್ರಿ ಅಭ್ಯರ್ಥಿಯ ಅನುಭವಿ ರಾಜಕಾರಣಿ ಹಾಗೂ ಸಜ್ಜನಿಕೆ ರಾಜಕಾರಣಿ ಎಂಬ ಜನರ ಅಭಿಮತ
ಕ್ಷೇತ್ರದಲ್ಲಿ ಸ್ಥಿರ ವರ್ಚಸ್ಸು ಕಡಿಮೆ
ಹಿಂದುತ್ವ, ಮೋದಿ ಅಲೆ ನಡುವೆ ಸೆಣಸಬೇಕಾದ ಅನಿವಾರ್ಯತೆ
ಸಚಿವರ ಪುತ್ರ ಎಂಬುದಷ್ಟೇ ಪರಿಚಯ

ಪ್ಲಸ್
ಸಿಎಂ ಸಿದ್ದರಾಮಯ್ಯ ತವರಿನ ಕ್ಷೇತ್ರವಾದ ಹಿನ್ನೆಲೆ ಗೆಲ್ಲಿಸಲೇಬೇಕೆಂದು ಮುಖ್ಯಮಂತ್ರಿ ಪಣ
ಕಾಂಗ್ರೆಸ್ ಗ್ಯಾರಂಟಿ ಯೋಜನೆ ಕೈ ಹಿಡಿಯೋ ಸಾಧ್ಯತೆ.
ಶಾಸಕರಿಗೆ ಚಾಸ್ಟ್ ಕೊಟ್ಟು ಗೆಲ್ಲಿಸಿಕೊಡಬೇಕೆಂದು ಸಿದ್ದರಾಮಯ್ಯ ತಾಕೀತು ಮಾಡಿರುವುದು
ಕಾಂಗ್ರೆಸ್ ಪಕ್ಷ ಅಧಿಕಾರದಲ್ಲಿರುವುದು ಸಿಎಂ ತವರು ಕ್ಷೇತ್ರ.

ಎಸ್.ಬಾಲರಾಜು- ಮೈನಸ್
ಕ್ಷೇತ್ರದಲ್ಲಿ ಓರ್ವನೂ ಬಿಜೆಪಿ ಶಾಸಕನಿಲ್ಲದಿರುವುದು
ಪಕ್ಷದಲ್ಲೇ ಕೆಲ ವ್ಯಕ್ತಿಗಳಿಂದ ಒಂದಷ್ಟು ಮುನಿಸು.
ಮಾದಿಗ ಮತಗಳು ಈ ಬಾರಿ ಕಾಂಗ್ರೆಸ್ ಗೆ ಹೋಗುವ ಭೀತಿ
ಹಾಲಿ ಬಿಜೆಪಿ ಸಂಸದ ಶ್ರೀನಿವಾಸಪ್ರಸಾದ್ ಬೆಂಬಲಿಗರು ಕಾಂಗ್ರೆಸ್ ಗೆ ಹೋಗಿರುವುದು

ಎಸ್ ಬಾಲರಾಜು -ಪ್ಲಸ್
ಸಜ್ಜನ ರಾಜಕಾರಣಿ, ಅನುಭವಿ, ಶಾಸಕ

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ-5 | 18-04-2024

ಹಾಸನ-ರಾಮನಗರ

ಶ್ರೀರಾಮನವಮಿ: ಭಕ್ತರಿಗೆ ಪಾನಕ, ಮಜ್ಜಿಗೆ ಕೋಸಂಬರಿ ವಿತರಣೆ

■ ಕಾಯಕಯೋಗಿ ಸುದ್ದಿ

ಕನಕಪುರ: ಶ್ರೀರಾಮ ನವಮಿ ಹಬ್ಬದ ಪ್ರಯುಕ್ತ ನಗರದ ತಾಲ್ಲೂಕು ಕಛೇರಿ ಮುಂಬಾಗ ಶ್ರೀರಾಮನ ಭಾವ ಚಿತ್ರಕ್ಕೆ ರಾಮನಗರ ಜಿಲ್ಲಾ ಶ್ರೀರಾಮ ಸೇನಾ ಅಧ್ಯಕ್ಷ ನಾಗಾರ್ಜುನ್ ಗೌಡ ಪೂಜೆ ಸಲ್ಲಿಸಿದರು.

ಪೂಜಾ ಕಾರ್ಯಕ್ರಮದಲ್ಲಿ ಶ್ರೀರಾಮನ ಭಕ್ತರು ಆಗಮಿಸಿ ಬೇಲದ ಹಣ್ಣಿನ ಪಾನಕ,ಮಜ್ಜಿಗೆ,ಕೋಸಂಬರಿ ಪ್ರಸಾದವನ್ನು ಸ್ವೀಕರಿಸಿದರು. ಪೂಜಾ ಕಾರ್ಯಕ್ರಮದಲ್ಲಿ ಶ್ರೀರಾಮ ಸೇನಾ ಸಂಘಟನೆಯ ಕಾರ್ಯಕರ್ತರುಗಳಾದ ಜಿಲ್ಲಾ ಪ್ರಮುಖ ಕಾರ್ಯದರ್ಶಿ ರಾಜೇಶ್ ಡಿ ಎಂ, ನವೀನ್ ಕೆಎನ್, ಪವನ್ ಕುಮಾರ್ ತಾಲೂಕು ಅಧ್ಯಕ್ಷ ರಾಜಗೋಪಾಲ್ , ಶರತ್ ಸಿಎಸ್, ಕುಮಾರ್ ಚೀರಣಕುಪ್ಪೆ ದರ್ಶನ್, ವಕೀಲರಾದ ವಿನೋದ್ ಕುಮಾರ್ ಉದಾರಹಳ್ಳಿ ಅರುಣ್ ಕುಮಾರ್ ಹಾಗೂ ಕಾರ್ಯಕರ್ತರುಗಳು ಹಾಜರಿದ್ದರು.



ನಾನು ಸತ್ತೂ ಇದೇ ರಸ್ತೆಯಲ್ಲಿ ಹೋಗೋದು, ಬದುಕಿದ್ರೂ ಇಲ್ಲೇ ಓಡಾಡೋದು

■ ಕಾಯಕಯೋಗಿ ಸುದ್ದಿ

ಹಾರೋಹಳ್ಳಿ:ಮುಂದಿನ ದಿನಗಳಲ್ಲಿ ಹಾರೋಹಳ್ಳಿ ಸುಂದರ ಪಟ್ಟಣವಾಗಿ ನಿರ್ಮಾಣ ಆಗುತ್ತೆ, ನಾನು ಸತ್ತೂ ಇದೇ ರಸ್ತೆಯಲ್ಲಿ ಹೋಗೋದು, ಬದುಕಿದ್ರೂ ಇಲ್ಲೇ ಓಡಾಡೋದು ಎಂದು ಸಂಸದ ಹಾಗೂ ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಡಿ.ಕೆ.ಸುರೇಶ್ ಹೇಳಿದರು.

ಹಾರೋಹಳ್ಳಿ ಪಟ್ಟಣದ ಮುಖ್ಯ ಸರ್ಕಲ್ ಬಳಿ ಕಾರ್ಯಕರ್ತರನ್ನುದ್ದೇಶಿಸಿ ಮಾತನಾಡಿ, ಬೆಂಗಳೂರು ಗ್ರಾಮಾಂತರದಲ್ಲಿ ನಾನು ಸಾಕಷ್ಟು ಓಡಾಡಿದ್ದೇನೆ. ಪ್ರತಿ ಗ್ರಾಮ ಪಂಚಾಯಿತಿ ಮಟ್ಟದಲ್ಲೂ ಜನರ ಕಷ್ಟಸುಖ ಕೇಳಿದ್ದೇನೆ. 25 ವರ್ಷ ಆಡಳಿತ ಮಾಡಿದವರಿಗೆ ಹಾರೋಹಳ್ಳಿ ಮೇಲೆ ಪ್ರೀತಿ ಇಲ್ಲ. ಮಾಜಿ ಪ್ರಧಾನಿ ಆಗಿದ್ರು, ಮಾಜಿ ಸಿಎಂ ಆಗಿದ್ರೂ ಇಲ್ಲಿ ಅಭಿವೃದ್ಧಿ ಆಗಿರಲಿಲ್ಲ. ಅವರಿಗೆ ಅವರ ಕುಟುಂಬಕ್ಕೆ ಒಳ್ಳೆಯದಾದ್ರೆ ಸಾಕಾಗಿತ್ತು ಜನರಿಗೆ ಒಳ್ಳೆಯದು ಮಾಡಬೇಕು ಅಂತ ಅವರಿಗೆ ಭಾವನೆ ಇಲ್ಲ. ನಾನು ಸತ್ತೂ ಇದೇ ರಸ್ತೆಯಲ್ಲಿ ಹೋಗೋದು, ಬದುಕಿದ್ರೂ ಇಲ್ಲೇ ಓಡಾಡೋದು. ಬೇರೆಯವರ ರೀತಿ ಇಲ್ಲಿ ಒಂದು ಕಣ್ಣು ರಾಮನಗರ ಹಾಗೂ ಒಂದು ಕಣ್ಣು ಚನ್ನಪಟ್ಟಣ ಅಂದು ಬಿಟ್ಟು ಮಂಡ್ಯಕ್ಕೆ ಹೋಗೋದಲ್ಲ. ಇದನ್ನು ಜನ ಗಮನದಲ್ಲಿಟ್ಟುಕೊಳ್ಳಬೇಕು. ಹಾರೋಹಳ್ಳಿ ತಾಲೂಕಿನ ಸಮಗ್ರ ಅಭಿವೃದ್ಧಿಗಾಗಿ ಕಾಂಗ್ರೆಸ್ ಬೆಂಬಲಿಸಿ ಎಂದು ದಳಪತಿಗಳ ವಿರುದ್ಧ ಡಿ.ಕೆ. ಸುರೇಶ್ ವಾಗ್ದಾಳಿ ನಡೆಸಿದ್ದಾರೆ.



ರಾಜ್ಯದಲ್ಲಿ ಅಭಿವೃದ್ಧಿ ಪರವಾಗಿ ಸರ್ಕಾರ ಕೆಲಸ ಮಾಡ್ತಿದೆ. ಹೊಸ ಹಾರೋಹಳ್ಳಿ ತಾಲೂಕ್ ಕಚೇರಿಗೆ ಈಗಾಗಲೇ 3 ಎಕರೆ ಜಾಗವನ್ನು ಮಂಜೂರಾತಿ ಮಾಡಿಸಿ, ಸುಮಾರು 17 ಕೋಟಿ ಅನುದಾನ ನೀಡಲಾಗಿದೆ.ಪಟ್ಟಣ ಪಂಚಾಯಿತಿ ಕಟ್ಟಡಕ್ಕೆ ಜಾಗ ಇರಲಿಲ್ಲ ಪಟ್ಟಣದ ಸಮೀಪದಲ್ಲಿ ಒಂದೂವರೆ ಎಕರೆ ಜಾಗ ಗುರುತಿಸಲಾಗಿದೆ.

ಹಾರೋಹಳ್ಳಿ ದೊಡ್ಡಕೆರೆ ಅಭಿವೃದ್ಧಿಗೆ 10 ಕೋಟಿ ಅನುದಾನ ಹಾಗೆಯೇ ಪಟ್ಟಣದ ಒಳ ಚರಂಡಿಗಳ ಅಭಿವೃದ್ಧಿಪಡಿಸಲು 33 ಕೋಟಿ ಅನುದಾನ ನೀಡಲಾಗಿದೆ.ಹಾರೋಹಳ್ಳಿ ತಾಲೂಕಿನ ಗ್ರಾಮಗಳಿಗೆ ಕಾವೇರಿ ನೀರು ಕೊಡಲು ಸುಮಾರು 300 ಕೋಟಿ ಅನುದಾನ ಮೀಸಲಿಡಲಾಗಿದೆ.

ಹಾರೋಹಳ್ಳಿ ನಗರದಲ್ಲಿ ಬಡವರು ನಿವೇಶನಗಳಲ್ಲಿದ್ದಲೆ ಬಹಳ ಕಷ್ಟ ಪಡುತ್ತಿದ್ದು ಈಗಾಗಲೇ ಸುಮಾರು 50 ಎಕರೆ ಜಮೀನನ್ನು ವಶಕ್ಕೆ ಪಡೆದು ಪಟ್ಟಣದ ಬಡವರಿಗೆ ಕೂಲಿ ಕಾರ್ಮಿಕರಿಗೆ ಒಂದು ವರ್ಷದೊಳಗೆ 4–5 ಸಾವಿರ ನಿವೇಶನ ಹಂಚಲಾಗುವುದು.

ಕಳೆದ 25 ವರ್ಷಗಳಿಂದ ಇಲ್ಲಿ ಆಡಳಿತ ನಡೆಸಿದವರು ಈಗ ರಾಮನಗರ, ಮಂಡ್ಯದ ಕಡೆ ಮುಖ ಮಾಡಿದ್ದಾರೆ.ಹಾಸನದಿಂದ ಜನಗಳನ್ನು ಕರೆಸಿ ಇಲ್ಲಿನ ಜನರನು ಕೂಲಿಯಳು ಗಳನ್ನಾಗಿ ಮಾಡುತ್ತಾ ಜನರ ಮೇಲೆ ಗೂಬೆ ಕೂರಿಸುವ ಪ್ರಯತ್ನ ನಡೆಸಿದ್ದಾರೆ. ಇದಕ್ಕೆಲ್ಲ ತಕ್ಕ ಪಾಠ ಕಲಿಸುವ ಕಾಲ ಬಂದಿದ್ದು, ಈ ಚುನಾವಣೆಯಲ್ಲಿ ನೀವೆಲ್ಲರೂ ಕಾಂಗ್ರೆಸ್ ಪಕ್ಷವನ್ನು ಗೆಲ್ಲಿಸಬೇಕೆಂದು ಮನವಿ ಮಾಡಿದರು.

ಇದೇ ವೇಳೆ ಶಾಸಕ ಇಕ್ಬಾಲ್ ಹುಸೇನ್ ಮಾತನಾಡಿ, ಹಾರೋಹಳ್ಳಿ ನೂತನವಾಗಿ ತಾಲೂಕಾಗಿದ್ದು,ಬಹಳಷ್ಟು ಅಭಿವೃದ್ಧಿ ಕಾರ್ಯಗಳು ನಡೆಯಬೇಕಾಗಿದೆ.ಡಿಕೆಶಿರವರ ರವರ ಇದಕ್ಕಾಗಿ ಬಹಳಷ್ಟು ಚಿಂತನೆ ನಡೆಸಿದ್ದಾರೆ.ಅಭಿವೃದ್ಧಿಪಡಿಸಲು ಬಹಳಷ್ಟು ಯೋಜನೆಗಳನ್ನು ಕಾರ್ಯರೂಪಕ್ಕೆ ತರಬೇಕಾಗಿದೆ. ಆ ಒಂದು ನಿಟ್ಟಿನಲ್ಲಿ ತಾಲೂಕಿನಲ್ಲಿ ಸರ್ಕಾರಿ ಕಚೇರಿಗಳು, ರಸ್ತೆ ಅಭಿವೃದ್ಧಿ, ಒಳಚರಂಡಿ ಅಭಿವೃದ್ಧಿ, ತಾಲೂಕಿನಾದ್ಯಂತ ಕೆರೆಗಳ ಅಭಿವೃದ್ಧಿಗಳು ಆಗಬೇಕಿದೆ. ಪಟ್ಟಣದಲ್ಲಿ ಬಡವರಿಗೆ ಉಚಿತ ನಿವೇಶನಗಳ ಹಂಚಿಕೆಯಾಗಬೇಕಾಗಿದ್ದು ವಿದ್ಯಾರ್ಥಿಗಳಿಗೆ ಒಳ್ಳೆಯ ವಿದ್ಯಾಭ್ಯಾಸ ಒದಗಿಸಲು ಸುಸಜ್ಜಿತ ಶಾಲೆಗಳು, ಯುವಕರಿಗೆ ಕಾಲೇಜುಗಳ ಅವಶ್ಯಕತೆ ಇದೆ. ಇನ್ನು ಬೆಂಗಳೂರು ಹತ್ತಿರದಲ್ಲೇ ಇರುವುದರಿಂದ ಮೇಟ್ರೋ ಕೂಡ ತರುವ ಯೋಜನೆಯನ್ನು ಸರ್ಕಾರ ಚಿಂತಿಸುತ್ತಿದೆ. ಕಾಂಗ್ರೆಸ್ ಸರ್ಕಾರ ಈಗಾಗಲೇ ಐದು ಗ್ಯಾರಂಟಿಗಳನ್ನು ಪ್ರತಿ ಮನೆಗಳಿಗೂ ತಲುಪಿಸಿ ತಮ್ಮ ವಚನವನ್ನು ನಿಭಾಯಿಸಿದ್ದು. ಹಾಗೆಯೇ ಮುಂದೆಯೂ ಅಭಿವೃದ್ಧಿ ಕೆಲಸಗಳ ಮುಂದುವರೆಯಲು ಪಟ್ಟಣದ ಅಭಿವೃದ್ಧಿಗಾಗಿ ಡಿ.ಕೆಸುರೇಶ ಅವರನ್ನು ಈ ಚುನಾವಣೆಯಲ್ಲಿ ಬಹುಮತದಿಂದ ಗೆಲ್ಲಿಸುವ ಕಾರ್ಯ ಆಗಬೇಕಾಗಿದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಬಮೂಲ್ ನಿರ್ದೇಶಕ ಹರೀಶ್ ಕುಮಾರ್, ಜೆಸಿಬಿ ಅಶೋಕ್, ಈಶ್ವರ್, ಕೇಬಲ್ ರವಿ, ರಾಮಕೃಷ್ಣಮುಂತಾದವರು ಹಾಜರಿದ್ದರು.

ನ್ಯಾಯ ಕೇಳಿದ್ದಕ್ಕೆ ದೇಶದ್ರೋಹಿಪಟ್ಟ ಕಟ್ಟುತ್ತಿದ್ದಾರೆ

ಕೇವಲ ಭಾಷಣ ಮಾಡಿದ್ರೆ ಏನೂ ಆಗಲ್ಲ. ನ್ಯಾಯ ಕೇಳಿದ್ದಕ್ಕೆ ದೇಶದ್ರೋಹಿ ಪಟ್ಟ ಕಟ್ಟುತ್ತಿದ್ದಾರೆ. ಆದರೆ, ನಾನು ನನ್ನ ಹೋರಾಟ ಮುಂದುವರೆಸುತ್ತೇನೆ. ಮೋದಿ 2008ರಲ್ಲಿ ಸಿಎಂ ಆದಾಗ ಏನು ಮಾತನಾಡಿದ್ರೂ ಒಮ್ಮೆ ನೆನಪು ಮಾಡೋಳ್ಳಿ. ಅವರು ಮಾತನಾಡಿದ್ದು ದೇಶ ಪ್ರೇಮವಾ ಅಥವಾ ದೇಶದ್ರೋಹವಾ? ಎಂದು ಪ್ರಧಾನಿ ಮೋದಿ ವಿರುದ್ಧ ವಾಗ್ಬಾಣ ನಡೆಸಿದ್ದಾರೆ.

ದ್ವಾರಕೀಶ್ ಅವರ ನಿಧನದ ಬಗ್ಗೆ ಕೇಳಿದಾಗ, "ಕರ್ನಾಟಕ ಚಿತ್ರರಂಗದ ಖ್ಯಾತ ನಿರ್ಮಾಪಕರು, ನಟರಾದ ದ್ವಾರಕೀಶ್ ಅವರ ನಿಧನದ ಸುದ್ದಿ ಕೇಳಿ ಬೇಸರವಾಗಿದೆ. ಒಂದು ಕಾಲದಲ್ಲಿ ಅವರಿಲ್ಲದೆ ಸಿನಿಮಾಗಳೇ ನಡೆಯುತ್ತಿರಲಿಲ್ಲ. ಅವರು ಬಹಳ ಉತ್ತಮ ಸಿನಿಮಾಗಳನ್ನು ಚಿತ್ರರಂಗಕ್ಕೆ ನೀಡಿದ್ದಾರೆ. ಅವರ ಆತ್ಮಕ್ಕೆ ಭಗವಂತ ಚಿರಶಾಂತಿ ನೀಡಲಿ. ಈ ನೋವನ್ನು ಭರಿಸುವ ಶಕ್ತಿಯನ್ನು ಅವರ ಕುಟುಂಬದವರಿಗೆ ಸಿಗಲಿ ಎಂದು ಪ್ರಾರ್ಥಿಸುತ್ತೇನೆ. ಅವರ ಚಿತ್ರಗಳಲ್ಲಿ ದ್ವಾರಕೀಶ್ ಅವರನ್ನು ನಾವು ಮೆಲುಕು ಹಾಕೋಣ. ಆ ವ್ಯಕ್ತಿ ಚಿಕ್ಕದಾಗಿದ್ದರೆ ಅವರ ಕೀರ್ತಿ ದೊಡ್ಡದಾಗಿತ್ತು, ಕನ್ನಡ ಚಿತ್ರರಂಗಕ್ಕೆ ಮತ್ತೆ ಇಂತಹ ವ್ಯಕ್ತಿ ಸಿಗುವುದು ಕಷ್ಟ" ಎಂದರು.

ಅವರದ್ದು ಕಳ್ಳತನದ ಸರ್ಕಾರ ಆಗಿತ್ತಲ್ವಾ?

ಪಿಕ್ ಪಾಕೆಟ್ ಸರ್ಕಾರ ಎಂಬ ಹೆಚ್.ಡಿ.ಕುಮಾರಸ್ವಾಮಿ ಹೇಳಿಕೆಗೆ ಸಂಸದ ಹಾಗೂ ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಡಿ.ಕೆ. ಸುರೇಶ್ ತಿರುಗೇಟು ನೀಡಿದ್ದಾರೆ.

ಹಾರೋಹಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಅವರು ಸರ್ಕಾರ ನಡೆಸಿದ್ದವರು. ಅವರು ಪಿಕ್ ಪಾಕೆಟ್ ಮಾಡಿದ್ರಾ, ಕಳ್ತನ ಮಾಡಿದ್ರಾ ಎಲ್ಲಾ ಗೊತ್ತು. ಅವರದ್ದು ಕಳ್ತನದ ಸರ್ಕಾರ ಆಗಿತ್ತಲ್ವಾ? ಎಂದು ಕುಟುಕಿದ್ದಾರೆ.

ಪ್ರಧಾನಿ ಮೋದಿ ಎಲ್ಲಾ ಕಡೆ ನನ್ನ ಹೆಸರನ್ನ ಉಲ್ಲೇಖಿಸಿ ಭಾಷಣ ಮಾಡ್ತಿದ್ದಾರೆ. ಯಾಕಂದ್ರೆ ನಾನು ಕನ್ನಡಿಗರ ತೆರಿಗೆ ಹಣದ ಬಗ್ಗೆ ಪ್ರಸ್ತಾಪ ಮಾಡಿದ್ದೇನೆ. ರಾಜ್ಯಕ್ಕೆ ಆದ ಅನ್ಯಾಯದ ಬಗ್ಗೆ ಧ್ವನಿ ಎತ್ತಿದ್ದೇನೆ. ಇದು ಅವರಿಗೆ ಸಹಿಸಲು ಆಗ್ತಿಲ್ಲ. ನಮ್ಮ ತೆರಿಗೆ ಹಣವನ್ನ ಗುಜರಾತ್, ಉತ್ತರ ಪ್ರದೇಶಕ್ಕೆ ನೀಡ್ತಿದ್ದಾರೆ ಎಂದು ಚಾಟಿ ಬೀಸಿದ್ದಾರೆ.

ವಿಕಲಚೇತನರ ಮತದಾರರು ಮತದಾನ ಮಾಡಲು ವಿವಿಧ ಸೌಲಭ್ಯ: ಜಿಲ್ಲಾ ಚುನಾವಣಾಧಿಕಾರಿ

ರಾಮನಗರ: ಲೋಕಸಭಾ ಚುನಾವಣೆ–2024ಕ್ಕೆ ಸಂಬಂಧಿಸಿದಂತೆ ಏ. 26 ರಂದು ವಿಕಲಚೇತನರ ಮತದಾರರು ಮತದಾನ ಮಾಡಲು ಅನುವಾಗುವಂತೆ ವೀಲ್‌ಚೇರ್, ರ‍್ಯಾಂಪ್ (Wheel Chair, Ramp) ಸೌಲಭ್ಯಗಳನ್ನು ಕಲ್ಪಿಸಲಾಗಿದೆ. ದೃಷ್ಟಿದೋಷವುಳ್ಳ ವಿಕಲಚೇತನರಿಗೆ ಮ್ಯಾಗ್ನಿಫೈಯಿಂಗ್ ಗ್ಲಾಸ್ ಸೌಲಭ್ಯ ಹಾಗೂ ಬ್ರೈಲ್ ಲಿಪಿಯಲ್ಲಿ ಚುನಾವಣೆಯಲ್ಲಿ ಸ್ಪರ್ಧಿಸುತ್ತಿರುವ ಅಭ್ಯರ್ಥಿಗಳ ಮಾಹಿತಿ ಹಾಗೂ ಮತದಾನ ಮಾಡಿದ ನಂತರ ಮತದಾನ ಮಾಡಿರುವ ಬಗ್ಗೆ ಖಚಿತ ಪಡಿಸಿಕೊಳ್ಳಲು ವಿವಿ ಪ್ಯಾಟ್ ಮೆಷಿನ್‌ಗಳಲ್ಲಿ ಪ್ರತಿ ಮತಗಟ್ಟೆಯಲ್ಲಿ ಒಂದಿಗಿಸಲಾಗುವುದು.

ಚುನಾವಣೆ ನೀತಿ ಸಂಹಿತೆ 1961ರ ನಿಯಮ 49ಎನ್ ರನ್ವಯ ದೃಷ್ಟಿದೋಷವುಳ್ಳ ವಿಕಲಚೇತನರು ಮತದಾನ ಮಾಡಲು ಮತಗಟ್ಟೆಗೆ ಜೊತೆಗಾರರನ್ನು ಕರೆದುಕೊಂಡು ಬರಲು ಅವಕಾಶ ಕಲ್ಪಿಸಲಾಗಿದೆ. ಗ್ರಾಮೀಣ ಪುನರ್ವಸತಿ ಕಾರ್ಯಕರ್ತರಿಂದ ಸಹಾಯ ಮನ್ನು ಪಡೆಯಿ ಮತ ಚಲಾಯಿಸಬಹುದಾಗಿದೆ ಹಾಗೂ ವಿಕಲಚೇತನರ ಮತದಾರರು ಈ ಸೌಲಭ್ಯಗಳನ್ನು ಬಳಸಿಕೊಳ್ಳುವಂತೆ ಮತ್ತು ಯಾರೊಬ್ಬರು ಮತದಾನದಿಂದ ದೂರ ಉಳಿಯದಂತೆ ತಪ್ಪದೇ ಮತದಾನ ಮಾಡುವಂತೆ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ದೇಶದಲ್ಲೆಡೆ ಶ್ರೀರಾಮನ ಜಪದಲ್ಲಿ ಮಿಂದೆದ್ದ ಭಕ್ತಸಾಗರ
ಶ್ರೀ ಗುಂಡಾಂಜನೇಯ ಸ್ವಾಮಿ ದೇವಸ್ಥಾನದಲ್ಲಿ ಶ್ರೀರಾಮನಿಗೆ ವಿಶೇಷ ಪೂಜೆ

■ ಕಾಯಕಯೋಗಿ ಸುದ್ದಿ

ಕೊರಟಗೆರೆ : ಪಟ್ಟಣದ ಇತಿಹಾಸ ಪ್ರಸಿದ್ಧ ಶ್ರೀ ಗುಂಡಾಂಜನೇಯ ಸ್ವಾಮಿ ದೇವಸ್ಥಾನದಲ್ಲಿ ಶ್ರೀರಾಮನಿಗೆ ವಿಶೇಷ ಪೂಜೆ ಸಲ್ಲಿಸಿ ಭಕ್ತಾದಿಗಳಿಗೆ ಪಾನಕ ಮಜ್ಜಿಗೆ ಕೋಸಂಬರಿ ಹಾಗೂ ವಿಶೇಷ ಪ್ರಸಾದವನ್ನ ವಿತರಿಸಿದ ಶ್ರೀ ರಾಮನ ಭಕ್ತರು.

ಶ್ರೀ ರಾಮನವಮಿಯ ಅಂಗವಾಗಿ ಎಲ್ಲಿ ನೋಡಿದರೂ ಯಾವ ದೇವಸ್ಥಾನದಲ್ಲಿ ನೋಡಿದರೂ ಶ್ರೀರಾಮನಿಗೆ ವಿಶೇಷ ಹೂವಿನ ಅಲಂಕಾರದೊಂದಿಗೆ ಪೂಜೆ ಪುನಸ್ಕಾರಗಳನ್ನ ಸುರಕ್ಷಾ ಚಾರಿಟಬಲ್ ಟ್ರಸ್ಟ್ (ರಿ) ಇವರ ವತಿಯಿಂದ ಸುಮಾರು 40 ವರ್ಷದಿಂದ ಪ್ರತಿ ವರ್ಷದಂತೆ ಈ ವರ್ಷವೂ ಕೂಡ ವಿಶೇಷ ಪೂಜೆ ಪುನಸ್ಕಾರಗಳನ್ನ ಸಲ್ಲಿಸಿ ನಂತರ ಮಾತನಾಡಿದ ಟ್ರಸ್ಟ್ ಅಧ್ಯಕ್ಷರಾದ ಶಿವಶಂಕರ್ ದೇವಸ್ಥಾನದ ಹುಂಡಿಗಳ ಹಣ ತೆಗೆದುಕೊಂಡು ಹೋಗುವ ಮುಜರಾಯಿ ಇಲಾಖೆಯ ಅಧಿಕಾರಿಗಳು ದೇವಸ್ಥಾನಕ್ಕೆ ಬೇಕಾಗಿರುವ ಅಭಿವೃದ್ಧಿ ಕಾರ್ಯಗಳನ್ನು ಮಾಡುವುದಿರಲಿ ಏನು ಸ್ವಚ್ಛತೆಯನ್ನು ಕಾಪಾಡುವುದಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.



ದೇವಸ್ಥಾನಕ್ಕೆ ಬಂದಿದ್ದ ಭಕ್ತ ರಮೇಶ್ ಮಾತನಾಡಿ ಶ್ರೀರಾಮನನ್ನು ನೆನೆದ ಭಕ್ತರೇ ಇಲ್ಲ ನಮ್ಮ ದೇಶ ನಮ್ಮ ನೆಲ ಸಂಸ್ಕೃತಿಯ ಆಚರಣೆ ದೈವಿಕದ ಕಳೆ ಇರುವ ನಮ್ಮ ನಾಡು ಇತಿಹಾಸಗಳ ಪುಟ ಸೇರಿದೆ ಇತಿಹಾಸ ಪುಟದಲ್ಲಿರುವ ದೇವನು ದೇವತೆಗಳು ನಮ್ಮ ನಾಡಿನ ಪ್ರತಿ ಗ್ರಾಮದ ದೇವಾಲಯಗಳಲ್ಲಿ ನೆಲೆಯೂರಿರುವುದು ನಮ್ಮೆಲ್ಲರ ಪುಣ್ಯವೇ ಸರಿ ಇತ್ತೀಚಿಗಷ್ಟೇ ಪ್ರತಿಷ್ಠಾಪನೆಗೊಂಡ ಅಯೋಧ್ಯ ಶ್ರೀರಾಮ ಮಂದಿರವು ನಮ್ಮ ಪೂರ್ವಿಕರು ನಾವು ಮಾಡಿದ ಪುಣ್ಯವೇ ಸರಿ ನಾವು ಇಂದು ಶ್ರೀರಾಮನ ಕಣ್ತುಂಬಿಕೊಂಡಿದ್ದೇವೆ ಇಂದು ಶ್ರೀ ರಾಮನವಮಿ ಎಲ್ಲಾ ಕಡೆ ಶ್ರೀರಾಮನ ಜಪ ಮಾಡುತ್ತಿರುವ ಭಕ್ತಾದಿಗಳು ದೇಶದಲ್ಲಿ ಉತ್ತಮ ಮಳೆ ಬೆಳೆಯಾಗಿ ರೈತರು ಬೆಳೆಯುವ ಬೆಳೆಗಳು ಸಮೃದ್ಧಿಯಾಗಿ ಬೆಳೆಯಿ ರೈತರ ಮನೆ ಸೇರಲಿ ಅವರ ಮನೆಯಲ್ಲಿ ದಾಸ ಧಾನ್ಯಗಳು ತುಂಬಿದ್ದರೆ ನಮ್ಮ ದೇಶವೇ ಸುಭಿಕ್ಷವಾಗಿರುತ್ತದೆ ದೇವರ ಅನುಗ್ರಹದಿಂದ ಈ ಬಾರಿ ಉತ್ತಮ ಮಳೆ ಆಗಲಿ ಜನ ಜಾನುವಾರುಗಳಿಗೆ ಕುಡಿಯಲು ನೀರಿನ ಅವಶ್ಯಕತೆ ತುಂಬಾ ಇದೆ ಅದ್ದರಿಂದ ಇಂದು ಶ್ರೀರಾಮನಿಗೆ ಪೂಜೆ ಸಲ್ಲಿಸಿ ಬೇಡಿಕೊಂಡಿದ್ದೇವೆ ಎಂದು ತಿಳಿಸಿದರು.

ಸುರಕ್ಷಾ ಚಾರಿಟೇಬಲ್ ಟ್ರಸ್ಟ್ ನ ಉಪಾಧ್ಯಕ್ಷ ರಾಘವೇಂದ್ರ ಮಾತನಾಡಿ ದೇಶದಲ್ಲೆಡೆ ಇಂದು ಶ್ರೀ ರಾಮನವಮಿಯ ಹಬ್ಬ ಆಚರಣೆ ಮಾಡುತ್ತಿದ್ದಾರೆ ಭಕ್ತಾದಿಗಳು ಎಲ್ಲಿ ನೋಡಿದರೂ ಯಾವ ದೇವಸ್ಥಾನ ನೋಡಿದರೂ ಸಡಗರ ಸಂಭ್ರಮದಿಂದ ಭಕ್ತಾದಿಗಳು ಮರ್ಯಾದೆ ಪುರುಷೋತ್ತಮನ ಸ್ಮರಣೆ ಮಾಡುತ್ತಿದ್ದಾರೆ.

ಆಂಜನೇಯ ದೇವಸ್ಥಾನ ಶ್ರೀ ರಾಮನ ದೇವಸ್ಥಾನ ಸೇರದಂತೆ ಗ್ರಾಮಗಳ ಎಲ್ಲ ದೇವಸ್ಥಾನಗಳಲ್ಲಿ ಶ್ರೀ ರಾಮನ ಭಾವಚಿತ್ರವನ್ನು ಇಟ್ಟು ಪೂಜೆ ಸಲ್ಲಿಸಿ ಭಕ್ತಾದಿಗಳಿಗೆ ಪ್ರಸಾದ ನೀಡುತ್ತಿದ್ದಾರೆ.ವಿಪರ್ಯಾಸ ಇರಪ್ಪ ಎಂದರೆ ಹಿಂದೂ ದೇವಾಲಯಗಳಿಗೆ ಅಭಿವೃದ್ಧಿಯೇ ಮರೀಚಿಕೆಯಾಗಿ ಬಿಟ್ಟಿದೆ ದೇವಾಲಯಗಳಲ್ಲಿ ಸಾಕಷ್ಟು ಭಕ್ತಾದಿಗಳು ಕಾಣಿಕೆ ರೂಪದಲ್ಲಿ ಕೊಡುವ ಹುಂಡಿಯ ಹಣವನ್ನು ತೆಗೆದುಕೊಂಡು ಹೋಗುವ ಮುಜರಾಯಿ ಇಲಾಖೆ ಕಣ್ಣುಚ್ಚಿ ಕುಳಿತುಬಿಟ್ಟಿದೆ ಇತಿಹಾಸ ಪ್ರಸಿದ್ಧ ದೇವಸ್ಥಾನಗಳು ಕಣ್ಮರೆಯಾಗುತ್ತಿವೆ ಮುಜರಾಯಿ ಇಲಾಖೆಯ ವಶದಿಂದ ದೇವಸ್ಥಾನಗಳನ್ನ ಆಯಾ ದೇವಸ್ಥಾನಗಳ ಅಭಿವೃದ್ಧಿ ಪಡಿಸುವ ಸಂಘ ಸಂಸ್ಥೆಗಳಿಗೆ ನೀಡಿದರೆ ದೇವಸ್ಥಾನಗಳು ಇನ್ನಷ್ಟು ಅಭಿವೃದ್ಧಿ ಹೊಂದುತ್ತವೆ ಮಾನ್ಯ ಸರ್ಕಾರದ ಮುಖ್ಯಮಂತ್ರಿಗಳು ಇತ್ತ ಗಮನ ಹರಿಸಬೇಕಿದೆ ಎಂದು ತಿಳಿಸಿದರು..

ಆಗಬೇಕು ಎಂದು ಕೇಳುವ ಸೌಜನ್ಯವು ಅವರಿಗೆ ಇಲ್ಲ ಇಡೀ ರಾಜ್ಯದಲ್ಲಿ ಹಿಂದೂ ದೇವಾಲಯಗಳ ಅಭಿವೃದ್ಧಿ ಮರೀಚಿಕೆ ಇತಿಹಾಸ ಪ್ರಸಿದ್ಧ ಹಿಂದೂ ದೇವಾಲಯಗಳು ಕಣ್ಮರೆಯಾಗುತ್ತಿವೆ ಇದಕ್ಕೆಲ್ಲ ಕಾರಣ ಮುಜರಾಯಿ ಇಲಾಖೆಯ ನಿರ್ಲಕ್ಷ ಎಂದು ಬೇಸರ ವ್ಯಕ್ತಪಡಿಸಿದರು.

ಇದೇ ಸಂದರ್ಭದಲ್ಲಿ ಸುರಕ್ಷಾ ಚಾರಿಟೇಬಲ್ ಟ್ರಸ್ಟ್ ನ ಅಧ್ಯಕ್ಷರಾದ ಎ ಶಿವಶಂಕರ್,ಉಪಾಧ್ಯಕ್ಷರಾದ ರಾಘವೇಂದ್ರ ,ಖಜಾಂಚಿ ಮಧುಸೂದನ್,ಹರೀಶ್ ಕುಮಾರ್, ಹನುಮತರಾಯಪ್ಪ ಎನ್, ಕೆ ಎಸ್ ಹನುಮತರಾಯಪ್ಪ, ಸತೀಶ್, ಭೀಮಾರಾಜು,ರಮೇಶ್, ಧನುಷ್, ಗಗನ್, ಗಿರಿಜಮ್ಮ ಮಧುಸೂದನ್ ಸೇರಿದಂತೆ ಎಲ್ಲ ಪದಾಧಿಕಾರಿಗಳು ಮತ್ತು ಭಕ್ತಾದಿಗಳು ಹಾಜರಿದ್ದರು..

ಚುನಾವಣೆಯನ್ನು ಸುಸೂತ್ರವಾಗಿ ನಡೆಸಲು ಅಗತ್ಯ ಪೂರ್ವಸಿದ್ಧತೆಗಳನ್ನು ಶೀಘ್ರ ಕೈಗೊಳ್ಳಿ

ಚುನಾವಣಾ ಪೂರ್ವಸಿದ್ಧತೆ ಸಭೆಯಲ್ಲಿ ಅಧಿಕಾರಿಗಳಿಗೆ ವೀಕ್ಷಕ ಪಾರ್ಥ ಗುಪ್ತ ಸೂಚನೆ

■ ಕಾಯಕಯೋಗಿ ಸುದ್ದಿ

ಚಾಮರಾಜನಗರ:– ಲೋಕಸಭಾ ಸಾರ್ವತ್ರಿಕ ಚುನಾವಣೆ–2024ರ ಸಂಬಂಧ ಏಪ್ರಿಲ್ 26ರಂದು ಮತದಾನ ನಡೆಯಲಿದ್ದು, ಚುನ

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ-6 | 18-04-2024

ಬೆಂಗಳೂರು


ಭಕ್ತಾದಿಗಳಿಗೆ ಪಾನಕ, ಮಜ್ಜಿಗೆ, ಕೊಸಂಬರಿ ವಿತರಣೆ

ದೇವನಹಳ್ಳಿ ವಿವಿಧೆಡೆ ರಾಮ ನವಮಿ ಆಚರಣೆ

ದೇವನಹಳ್ಳಿ: ರಾಮಜಯಂತಿ ಪ್ರಯುಕ್ತ ತಾಲ್ಲೂಕಿನಾದ್ಯಂತ ಶ್ರೀ ಆಂಜನೇಯಸ್ವಾಮಿ ಹಾಗೂ ಶ್ರೀ ರಾಮ ದೇಗುಲಗಳಲ್ಲಿ ವಿಶೇಷ ಪೂಜೆ, ಅಲಂಕಾರ, ಹೋಮ ಹವನಾದಿಗಳು ಹಮ್ಮಿಕೊಳ್ಳಲಾಗಿತ್ತು. ಭಕ್ತಾದಿಗಳಿಗೆ ಪ್ರಸಾದ ವಿನಿಯೋಗ, ಅನ್ನದಾನ ನಡೆಯಿತು. ದಿನಪೂರ್ತಿ ದೇಗುಲಗಳಿಗೆ ಭಕ್ತರು ಭೇಟಿ ನೀಡಿ ದೇವರ ದರ್ಶನ ಪಡೆಯುತ್ತಿದ್ದ ದೃಶ್ಯಗಳು ಸಾಮಾನ್ಯವಾಗಿತ್ತು.

ಪಟ್ಟಣದ ಚಿಕ್ಕೆರೆ ತ್ರೀ ಆಂಜನೇಯಸ್ವಾಮಿ ದೇಗುಲದಲ್ಲಿ ಹಾಲು, ಮೊಸರು, ಒಣ ಹಣ್ಣು ಸೇರಿದಂತೆ ತುಪ್ಪದಿಂದ ದೇವರಿಗೆ ವಿಶೇಷ ಅಭಿಷೇಕ ಮಾಡಿ, ವಜ್ರಾಂಗಿ ಅಲಂಕಾರ ಭಕ್ತರ ಕಣ್ಮನ ಸೆಳೆಯಿತು.

ಕೊಯಿರಾದ ಶ್ರೀ ಆಂಜನೇಯಸ್ವಾಮಿಗೆ ಫಲಪಂಚಾಮೃತ ಅಭಿಷೇಕ ಮಾಡಿ, ವಿವಿಧ ಹೂವುಗಳ ಸಮೇತವಾಗಿ ವಸ್ತ್ರಾಲಂಕಾರ ಮಾಡಿ, ಶ್ರೀ ರಾಮ ಸಮೇತ ಓಂಕಾರವಿರುವ 108 ಬೆಳ್ಳಿ ನಾಣ್ಯಗಳ ಹಾರವನ್ನು ದೇವರಿಗೆ ಅರ್ಪಿಸಲಾಗಿತ್ತು. ಉದ್ದಿನ ವಡೆಯ ಮೂಲಕ ಹನುಮಂತನಿಗೆ ಸೇವೆ ಸಲ್ಲಿಸಿ ಭಕ್ತರು, ಗ್ರಾಮದ ಕೋತಿಗಳಿಗೆ ಬಾಳೆ ಹಣ್ಣು ವಿತರಿಸಿದರು.



ಪಟ್ಟಣದ ಪಾರಿವಾಟ ಗುಟ್ಟ ತಾಲ್ಲೂಕಿ ಕುರಿ , ಆವತಿ ತಿಮ್ಮರಾಯಸ್ವಾಮಿ , ಬಂಡೆಕೆರೆ, ಮಾರ್ಕೆಟ್ ಆಂಜನೇಯ, ಕೋಟೆ ರಾಘವೇಂದ್ರ ಸ್ವಾಮಿ ಮಂದಿರಲ್ಲಿನ ಶ್ರೀ ವೀರಾಂಜನೇಯ, ಸರೋವರ ಬೀದಿ ಆಂಜನೇಯಸ್ವಾಮಿ, ಲಕ್ಷ್ಮಿಪುರ, ವಿಶ್ವನಾಥಪುರ, ಬನ್ನಿ ಮಂಗಲ, ಆಂಜನೇಯಸ್ವಾಮಿ ದೇವಾಲಯಗಳಲ್ಲಿ ವಿಶೇಷ ಅಲಂಕಾರ ಹಾಗೂ ನಗರದ ಚೌಕ ಆಂಜನೇಯ ಸ್ವಾಮಿಗೆ ಮಾಡಿರುವ ಅಲಂಕಾರವನ್ನು ಭಕ್ತಾದಿಗಳು ಕಣ್ತುಂಬಿಕೊಂಡರು.

ತಾಲ್ಲೂಕಿನ ಕಾರಹಳ್ಳಿ ಗ್ರಾಮದಲ್ಲಿರುವ ಶ್ರೀ ಆಂಜನೇಯ ಸ್ವಾಮಿ ದೇವಾಲಯದಲ್ಲಿ ರಾಮ ಜಯಂತಿ ಅಂಗವಾಗಿ ದೇವತಾ ಪ್ರಾರ್ಥನೆ ಗಣಪತಿ ಪೂಜಾ, ಸ್ವಸ್ತಿ ಪುಣ್ಯಾಹ ವಾಚನ, ಗಣಪತಿ ಹೋಮ, ಪವಮಾನ ಹೋಮ, ಶ್ರೀರಾಮತಾರಕ ಹೋಮ, ಆಂಜನೇಯ ಸ್ವಾಮಿಯವರಿಗೆ ಪಂಚಾಮೃತ ಹಾಗೂ ವಿಶೇಷ ಅಲಂಕಾರ ಹಿಗೆ ಹಲವಾರು ಪೂಜಾಕಾರ್ಯ ನಡೆಯಿತು.

ಎಲ್ಲಾ ದೇವಾಲಯಗಳಲ್ಲಿ ವಿಶೇಷ ಅಲಂಕಾರ ಪೂಜೆ, ಪಾನಕ, ಮಜ್ಜಿಗೆ, ಕೊಸಂಬರಿ ವಿತರಣೆ ಪ್ರಸಾದ ವಿನಿಯೋಗ ನಡೆಯಿತು ಭಕ್ತರು ಶ್ರೀರಾಮ ನಾಮ ಸ್ಮರಣೆಯಲ್ಲಿ ಮಿಂದೆದ್ದರು.

ತಿಗಳ ಸಮುದಾಯದಿಂದ ನಾಡಿಗೆ ವಿಶಿಷ್ಟ ಕೊಡುಗೆ ದೊರೆತಿದೆ

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರರಿಂದ ರೋಡ್ ಶೋ

■ ಕಾಯಕಯೋಗಿ ಸುದ್ದಿ


ದೇವನಹಳ್ಳಿ/ದೊಡ್ಡಬಳ್ಳಾಪುರ ಪ್ರಭು ಶ್ರೀ ರಾಮನ 500 ವರ್ಷಗಳ ವನವಾಸಕ್ಕೆ ಮುಕ್ತಿ ಸಿಕ್ಕಿದ್ದು, ಇದೇ ಮೊದಲ ಬಾರಿಗೆ ಅಯೋಧ್ಯೆಯಲ್ಲಿ ರಾಮನವಮಿ ವಿಜೃಂಭಣೆಯಿಂದ ಆಚರಣೆಯಾಗಿದೆ. ಇದಕ್ಕೆ ಪೂರಕವಾಗಿ ರಾಮರಾಜ್ಯ ನಿರ್ಮಿಸಲು ಪ್ರಧಾನಿ ನರೇಂದ್ರ ಮೋದಿ ಶ್ರಮಿಸುತ್ತಿದ್ದಾರೆ. ವಿಶಿಷ್ಟ ಭಾರತದ ಸಂಕಲ್ಪವೇ ಈ ಪ್ರಯತ್ನದ ಹೆಜ್ಜೆ ಎಂದು ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಎನ್‌ಡಿಎ ಅಭ್ಯರ್ಥಿ ಡಾ.ಕೆ.ಸುಧಾಕರ್ ಹೇಳಿದರು.

ಮರ್ಯಾದಾ ಪುರುಷೋತ್ತಮ, ಆದರ್ಶ ಪ್ರಜಾಪಾಲಕ ಪ್ರಭು ಶ್ರೀರಾಮಚಂದ್ರನು ಅವತರಿಸಿದ ಪವಿತ್ರ ದಿನವೇ ಶ್ರೀರಾಮ ನವಮಿ. 500 ವರ್ಷಗಳ ವನವಾಸದ ನಂತರ ಪ್ರಭು ಶ್ರೀರಾಮಚಂದ್ರ ಈಗ ತನ್ನ ಜನ್ಮಭೂಮಿ ಅಯೋಧ್ಯೆಯಲ್ಲಿ, ತನ್ನ ಭವ್ಯ ಮಂದಿರದಲ್ಲಿ ನೆಲೆಸಿದ್ದಾನೆ. ಈ ವರ್ಷದ ಶ್ರೀ ರಾಮ ನವಮಿ ಎಲ್ಲ ಭಾರತೀಯರಿಗೂ ಅತ್ಯಂತ ವಿಶೇಷ ದಿನ ಎಂದರು.

ಧರ್ಮ ವಿರೋಧಿಗಳ ಕುತಂತ್ರದಿಂದ ಪ್ರಭು ಶ್ರೀರಾಮ 500 ವರ್ಷಗಳ ಕಾಲ ಒಂದು ಸಣ್ಣ ಟೆಂಟ್‌ನಲ್ಲಿ ವನವಾಸ ಅನುಭವಿಸ ಬೇಕಾಯಿತು ಆದರೆ ಪ್ರಧಾನಿ ನರೇಂದ್ರ ಮೋದಿ ಅವರ ಪ್ರಯತ್ನದಿಂದ ಶ್ರೀರಾಮನ ಜನ್ಮಭೂಮಿಯಲ್ಲಿ ಭವ್ಯ ರಾಮ ಮಂದಿರ ನಿರ್ಮಾಣವಾಗಿರುವುದು ಐನೂರು ವರ್ಷಗಳ ಹೋರಾಟದ ಫಲ. ಬಹುಶಃ ಇಡೀ ಜಗತ್ತಿನ ಇತಿಹಾಸದಲ್ಲಿ ಒಂದು ಧಾರ್ಮಿಕ ಕ್ಷೇತ್ರಕ್ಕೆ ಈ ಮಟ್ಟದ ನಿರಂತರ ವಿರೋಧ, ಹೋರಾಟ, ತ್ಯಾಗ, ಬಲಿದಾನ ಎಲ್ಲಿಯೂ ನಡೆದಿಲ್ಲ ಎಂದು.

ಪ್ರಧಾನಿ ಮೋದಿ ಅವರು ಕಳೆದ ಹತ್ತು ವರ್ಷಗಳಲ್ಲಿ ಕೋಟ್ಯಂತರ ಬಡವರನ್ನು ಬಡತನದಿಂದ ಮೇಲೆಕ್ಕೆತ್ತಿದ್ದಾರೆ. ಜೊತೆಗೆ ಹಿಂದೂ ಪುಣ್ಯಕ್ಷೇತ್ರಗಳ ಅಭಿವೃದ್ಧಿ ಮಾಡಿದ್ದಾರೆ. ಮೋದಿ ಅವರದು ಭಾರತ ನಿರ್ಮಿಸುವ ಸಂಕಲ್ಪದೊಂದಿಗೆ ಮುನ್ನಡೆದಿದ್ದಾರೆ. ಇದು ರಾಮರಾಜ್ಯದ ಪರಿಕಲ್ಪನೆ ಸಾಕಾರಗೊಳಿಸುವ ಹೆಜ್ಜೆ. ಶ್ರೀರಾಮನ ಆಡಳಿತದ ಆದರ್ಶಗಳನ್ನೇ ಪ್ರಧಾನಿ ಮೋದಿ ತಮ್ಮ ಆಡಳಿತದ ಮಾದರಿಯಾಗಿ ಇಟ್ಟುಕೊಂಡಿದ್ದಾರೆ. ಇದೇ ಕಾರಣಕ್ಕೆ ಕಳೆದ ಹತ್ತು ವರ್ಷಗಳಲ್ಲಿ ಭಾರತ ಅಚ್ಚರಿ ಎನಿಸುವ ಮಟ್ಟಿಗೆ ಅಭಿವೃದ್ಧಿಯ ಪಥದಲ್ಲಿ ಸಾಗುತ್ತಿದೆ. ಧರ್ಮರಕ್ಷಕ, ಸಕಲ ಸದ್ಗುಣ ಸಂಪನ್ನನಾದ ಪ್ರಭು ಶ್ರೀರಾಮಚಂದ್ರನ ಜೀವನವೇ ನಮಗೂ ರಾಮ ಮಾರ್ಗ ಎಂದು ಹೇಳಿದರು.

ರೋಡ್ ಶೋ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಅಭ್ಯರ್ಥಿ ಡಾ.ಕೆ.ಸುಧಾಕರ್ ಪರ ಮತ ಯಾಚಿಸಲು ರೋಡ್ ಶೋ ನಡೆಸಿದರು. ದೊಡ್ಡಬಳ್ಳಾಪುರದ ಮುಖ್ಯರಸ್ತೆ ದೇವಸ್ಥಾನದಿಂದ ಆರಂಭವಾಗಿ ಸೌಂದರ್ಯ ಮಹಲ್‌ವರೆಗೆ ನಡೆದ ರೋಡ್ ಶೋನಲ್ಲಿ ಕಾರ್ಯಕರ್ತರು, ಮುಖಂಡರು ಹಾಗೂ ಸಾರ್ವಜನಿಕರು ಅಧಿಕ ಸಂಖ್ಯೆಯಲ್ಲಿ ಪಾಲ್ಗೊಂಡು ಆಪಾರ ಬೆಂಬಲ ತೋರಿದರು. ಮೂರನೇ ಬಾರಿಗೆ ನರೇಂದ್ರ ಮೋದಿಯವರನ್ನು ಪ್ರಧಾನಿಯಾಗಿಸುವ ಹಾಗೂ ಕ್ಷೇತ್ರದಲ್ಲಿ ಕಮಲ ಅರಳಿಸುವ ಘೋಷಣೆ ಕೇಳಿಬಂತು. ಅಭ್ಯರ್ಥಿ ಡಾ.ಕೆ.ಸುಧಾಕರ್ ಜೊತೆ ಶಾಸಕ ಧೀರಜ್ ಮುನಿರಾಜು ಹಾಜರಿದ್ದರು.



ಉನ್ನತಶ್ರೇಣಿಯಲ್ಲಿ ದೀಪಿಕಾ ಉತ್ತೀರ್ಣ



ಬೆಂಗಳೂರು : ಜೈ ಕರ್ನಾಟಕ ಸಾರಥಿ ಸೇನೆ ಟ್ರಸ್ಟ್ ಅಧ್ಯಕ್ಷೆ ಪ್ರತಿಮಾ ರಾಜಪ್ಪ ಅವರ ಪುತ್ರಿ ದೀಪಿಕಾ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಉನ್ನತಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದಾರೆ. ಬೆಂಗಳೂರಿನ ಸೆಂಟ್‌ಆಥೋಣಿ ಪಿಯು ಕಾಲೇಜಿನಲ್ಲಿ ಅಧ್ಯಯನ ಮಾಡುತ್ತಿದ್ದ ಆರ್. ದೀಪಿಕಾ ಅವರು ಕನ್ನಡ-98, ಇಂಗ್ಲೀಷ್-88, ಇತಿಹಾಸ-87, ಅರ್ಥಶಾಸ್ತ್ರ-96, ಭೂಗೋಳ-100, ಸಮಾಜ-87 ಅಂಕಗಳಿಸಿದು ಉತ್ತೀರ್ಣರಾಗಿದ್ದಾರೆ. ಶುಭಶಯ : ಉನ್ನತಶ್ರೇಣಿಯಲ್ಲಿ ಉತ್ತೀರ್ಣರಾಗಿರುವ ಪ್ರತಿಭಾನ್ವಿತೆ ವಿದ್ಯಾರ್ಥಿನಿ ದೀಪಕಾ ಅವರಿಗೆ ಕಾಯಕಯೋಗಿ ಫೌಂಡೇಶನ್ ಅಧ್ಯಕ್ಷ ಎಂ.ತಿವಕುಮಾರ್ ಶುಭಕೋರಿದ್ದಾರೆ.

ನೂರಾರು ಮಂದಿ ಕಾರ್ಯಕರ್ತರು ಕಾಂಗ್ರೆಸ್ ಸೇರ್ಪಡೆ

ಮಂಡ್ಯ : ಜಿಲ್ಲಾ ಪಂಚಾಯತ್ ಮಾಜಿ ಅಧ್ಯಕ್ಷ ತಗ್ಗಹಳ್ಳಿ ವೆಂಕಟೇಶ್ ಅವರ ಹಿತೈಷಿಗಳು ಹಾಗೂ ಬೆಂಬಲಿಗರು ನೂರಾರು ಮಂದಿ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ, ಶಾಸಕ ರಮೇಶ್ ಬಂಡಿಸಿದ್ದೇಗೌಡ ಅವರ ನೇತೃತ್ವದಲ್ಲಿ ನಗರದ ಕರ್ನಾಟಕ ಸಂಘದಲ್ಲಿ ಕಾಂಗ್ರೆಸ್ ಪಕ್ಷ ಸೇರ್ಪಡೆಯಾದರು.

ಜೆಡಿಎಸ್ ಪರಿಸ್ಥಿತಿ ಯಾರಿಗೂ ಗೊತ್ತಿಲ್ಲ ಹೆಚ್.ಡಿ.ದೇವೇಗೌಡ ಹಾಗೂ ಹೆಚ್.ಡಿ.ಕುಮಾರಸ್ವಾಮಿ ಅವರ ಹತ್ತಿರ ಹೋದವರಿಗೆ ಮಾತ್ರ ಪೆಟ್ಟು ತಿನ್ನುವುದು ಗೊತ್ತಾಗುತ್ತದೆ ಎಂದರು.

ಎರಡು ಬಾರಿ ಮುಖ್ಯಮಂತ್ರಿ ಆಗಿದ್ದಾಗಲೇ ಕಾವೇರಿ ವಿಚಾರ ಹಾಗೂ ಮೇಕೆದಾಟು ಯೋಜನೆ ಮಾಡಲು ಆಗಲಿಲ್ಲ ಲೋಕಸಭಾ ಸದಸ್ಯರಾದರೆ ಮಾಡಲು ಆಗುತ್ತದೆಯ ಎಂದು ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ಹೇಳಿದರು.

ಯಾರು ಎಷ್ಟೇ ದೊಡ್ಡವರಾದರೂ ನಮ್ಮದು ಎನ್ನುವ ಭಾವನೆ ಬರಲು ಬೇರೆಯವರು ಮಾತನಾಡುತ್ತಾರೆ, ಜಿಲ್ಲೆಯ ಅಭಿವೃದ್ಧಿಗೆ ಶ್ರಮಿಸಲು ಆಗಲ್ಲ ಆದರಿಂದ ಜಿಲ್ಲೆಯವರೇ ಆಗುವುದನ್ನು ಅರ್ಥ ಮಾಡಿಕೊಳ್ಳಬೇಕು ಎಂದು ಹೇಳಿದರು.

ಮಾಜಿ ಶಾಸಕ ಎಂ.ಶ್ರೀನಿವಾಸ್ ನಾಯಕತ್ವದಲ್ಲಿ ತಗ್ಗಹಳ್ಳಿ ವೆಂಕಟೇಶ್, ಯೋಗೇಶ್ ಸೇರಿದಂತೆ ನೂರಾರು ಜನರ ಕಾಂಗ್ರೆಸ್ ಪಕ್ಷ ಸೇರ್ಪಡೆಯಿಂದ ಜಿಲ್ಲೆಗೆ ಒಳ್ಳೆಯ ಕೆಲಸ ಮಾಡಲು ಪ್ರಯತ್ನ ಮಾಡುತ್ತೇವೆ ಎಂದರು.

ಜೆಡಿಎಸ್ ಅಧಿಕಾರ ಸಿಕ್ಕಾಗ ಮಂಡ್ಯ ಜಿಲ್ಲೆಯ ಒಬ್ಬ ರೈತನನ್ನು ಎಂಎಲ್ಸಿ ಮಾಡಲಿಲ್ಲ ದುಡ್ಡಿರುವ ಶರವಣ ಅಂತಹವರನ್ನು ಮಾಡಿದ್ದಾರೆ ಆದ್ದರಿಂದ ಜಿಲ್ಲೆಯವರನ್ನೇ ಸಂಸದರಾಗಿ ಆಯ್ಕೆ ಮಾಡೋಣ ಬೇರೆಯವರನ್ನು ಮಾಡುವುದು ಬೇಡ ಎಂದು ಹೇಳಿದರು.

ಜಿಪಂ ಮಾಜಿ ಅಧ್ಯಕ್ಷ ತಗ್ಗಹಳ್ಳಿ ವೆಂಕಟೇಶ್ ಮಾತನಾಡಿ, ಜೆಡಿಎಸ್ ನಾಯಕರ ಧೋರಣೆಯಿಂದ ಬೇಸತ್ತು ಕಾಂಗ್ರೆಸ್ ಪಕ್ಷ ಸೇರ್ಪಡೆಯಾಗಿದ್ದೇನೆ ಎಂದು ಹೇಳಿದರು. ನಾನು ಮಂಡ್ಯ ಜಿಲ್ಲಾ ಪಂಚಾಯತ್ ಅಧ್ಯಕ್ಷರಾಗಲು ಚಲುವರಾಯಸ್ವಾಮಿ ಅವರೇ ಕಾರಣ 2018 ರ ಚುನಾವಣೆಯಲ್ಲಿ ಅವರ ಜೊತೆ ಉಳಿಯಲು ಆಗಲಿಲ್ಲ ಆದ್ದರಿಂದ ವಿನಮ್ರತೆಯಿಂದ ನನ್ನ ತಪ್ಪನ್ನು ಕ್ಷಮಿಸಿ ಎಂದು ಕೋರಿದರು.

ಕಾಂಗ್ರೆಸ್ ಸರ್ಕಾರ ಗಟ್ಟಿಗೊಳಿಸಲು ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಯ ಗೆಲುವಿಗೆ ಸಹಕರಿಸಿ ಎಂದು ಹೇಳಿದರು.

ಈ ಸಂದರ್ಭದಲ್ಲಿ ಶಾಸಕ ಪಿ.ರವಿಕುಮಾರ್, ಮಾಜಿ ಶಾಸಕ ಎಂ.ಶ್ರೀನಿವಾಸ್, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಸಿ.ಡಿ.ಗಂಗಾಧರ್, ರಮೇಶ್ ಮಿತ್ರ, ಕೋಲಕಾರನದೊಡ್ಡಿ ನಾಗರಾಜು, ಶಿವನಂಜು, ರಾಜು ಇತರರು ಹಾಜರಿದ್ದರು.

ಏ.20ರಂದು ಇತಿಹಾಸ ಪ್ರಸಿದ್ಧ ಹೆಚ್.ಡಿ.ಕೋಟೆ ಶ್ರೀಲಕ್ಷ್ಮೀವರದಸ್ವಾಮಿ ಬ್ರಹ್ಮ ರಥೋತ್ಸವ

ಮೈಸೂರು, ಏ.17– ಮೈಸೂರು ಜಿಲ್ಲೆ ಹೆಗ್ಗಡದೇವನಕೋಟೆ ಮುಖ್ಯ ರಸ್ತೆಯಲ್ಲಿರುವ ಇತಿಹಾಸ ಪ್ರಸಿದ್ಧ ಶ್ರೀಲಕ್ಷ್ಮೀವರದರಾಜಸ್ವಾಮಿ 12ನೇ ವರ್ಷದ ಬ್ರಹ್ಮ ರಥೋತ್ಸವವು ಏ.20ರ ಶನಿವಾರದಂದು ಬೆಳಿಗ್ಗೆ ನೆರವೇರಲಿದೆ. ಅಂದು ಸ್ವಾಮಿಗೆ ರಥ ಸಂಪನ್ನ, ರಥಬಲಿ, ಯಾತ್ರಾದಾನ, ಶುಭ ವೃಷಭ ಲಗ್ನದಲ್ಲಿ ರಥಾರೋಹಣ, ಉತ್ಸವ ಮೂರ್ತಿಗೆ ಅಭಿಷೇಕ, ಶ್ರೀ ಸ್ವಾಮಿಯವರಿಗೆ ರಾಸಕ್ರೀಡೆ ಉತ್ಸವ, ಮಹಾಮಂಗಳಾರತಿ. ಪ್ರಸಾದ ವಿನಿಯೋಗ ಏರ್ಪಡಿಸಲಾಗಿದೆ ಎಂದು ದೇವಸ್ಥಾನದ ಪ್ರಧಾನ ಆಗಮಿಕರಾದ ವಿದ್ವಾನ್ ತಿರುಮಲಾಚಾರ್ ಮಾಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಕನಕಪುರ : ದೇಶದ ಮಾಜಿ ಪ್ರಧಾನಮಂತ್ರಿ ಹೆಚ್ ಡಿ ದೇವೇಗೌಡರ ಆಗಮನಕ್ಕಾಗಿ ರಾಜ್ಯ ಜೆಡಿಎಸ್ ಯುವ ಉಪಾಧ್ಯಕ್ಷ ಚಿನ್ನಸ್ವಾಮಿ ಜೊತೆ ಜೆಡಿಎಸ್ ಮತ್ತು ಬಿಜೆಪಿ ಕಾರ್ಯಕರ್ತರು.

ಹೊಸ ಇಜಿ ಸೂಪರ್ ಪ್ರೀಮಿಯಂ ಶ್ರೇಣಿಯ ಆಯಿಲ್-ಲೂಬ್ರಿಕೇಟೆಡ್ ಸ್ಕ್ರೂ ಏರ್ ಕಂಪ್ರೆಸರ್‌ಗಳನ್ನು ಪರಿಚಯಿಸಿದ ಎಲ್ಜಿ

ಇಜಿ ಸರಣಿಯ ಗ್ರಾಹಕರಿಗೆ ಉದ್ಯಮದಲ್ಲೇ ಅತಿ ಹೆಚ್ಚು ಇಂಧನ ದಕ್ಷತೆಯೊಳ್ಳ ಮತ್ತು ಕಡಿಮೆ ಲೈಫ್ ಸೈಕಲ್ ವೆಚ್ಚ ಹೊಂದಿರುವ ಉತ್ಪನ್ನವಾಗಿದೆ

ಮೈಸೂರು: ವಿಶ್ವದ ಪ್ರಮುಖ ಏರ್ ಕಂಪ್ರೆಸರ್ ತಯಾರಕರಲ್ಲಿ ಒಂದಾದ ಎಲ್ಜಿ ಈಕ್ವಿಪ್ ಮೆಂಟ್ (BSE: 522074 NSE: ELGIEQUIP) ತಮ್ಮ ಹೊಸ ಉತ್ಪನ್ನ ಇಜಿ ಎಸ್‌ಪಿ (ಸೂಪರ್ ಪ್ರೀಮಿಯಂ) ಅನ್ನು ಬಿಡುಗಡೆ ಮಾಡಿದ್ದು, ಇದು ಜನಪ್ರಿಯ ಇಜಿ ಸರಣಿಯ ಆಯಿಲ್-ಲೂಬ್ರಿಕೇಟೆಡ್ ಸ್ಕ್ರೂ ಏರ್ ಕಂಪ್ರೆಸರ್ ಗಳ ಪೋರ್ಟ್‌ಫೋಲಿಯೋದ ಅಪ್ ಗ್ರೇಡ್ ವರ್ಷನ್ ಆಗಿದೆ. ಈ ಯಂತ್ರಗಳು ಕಂಪ್ರೆಸ್ಡ್ ಏರ್ ತಂತ್ರಜ್ಞಾನದ ಗಮನಾರ್ಹ ಅಭಿವೃದ್ಧಿಗೆ ಸಾಕ್ಷಿಯಾಗಿದೆ. 90–110ಕೆಡಬ್ಲ್ಯೂ ಕಂಪ್ರೆಸರ್ ಶ್ರೇಣಿಯ ಉತ್ಪನ್ನಗಳು ಕಡಿಮೆ ಲೈಫ್ ಸೈಕಲ್ ವೆಚ್ಚ ಹೊಂದಿವೆ, ಗ್ರಾಹಕರಿಗೆ 15% ವರೆಗೆ ಇಂಧನ ದಕ್ಷತೆ ಹೊಂದಿವೆ ಮತ್ತು ಅತ್ಯುತ್ತಮ ವಾರಂಟಿ ಮತ್ತು ಕಾರ್ಯಕ್ಷಮತೆ ಒದಗಿಸುತ್ತದೆ.

ಈ ಅಪ್ ಗ್ರೇಡ್ ಆದ ಎಲ್ಜಿ ಇಜಿ ಎಸ್‌ಪಿ ಘಟಕಗಳು ಹೊಸದಾಗಿ ಕಾನ್ಫಿಗರ್ ಮಾಡಲಾದ ಎರಡು-ಹಂತದ ಏರ್ ಎಂಡ್ ಗಳನ್ನು ಒಳಗೊಂಡಿವೆ. ಜೊತೆಗೆ -V ಪ್ರೊಫೈಲ್ ಅನ್ನು ಕೂಡ ಹೊಂದಿವೆ. ಇವುಗಳು ಕಂಪ್ರೆಷನ್ ಪ್ರಕ್ರಿಯೆಯನ್ನು ಉತ್ತಮಗೊಳಿಸುತ್ತದೆ ಮತ್ತು ವಿದ್ಯುತ್ ಬಳಕೆಯಲ್ಲಿ 15%



ವರೆಗೆ ಉಳಿತಾಯ ಉಂಟು ಮಾಡುತ್ತವೆ. ಪ್ರತೀ ಹಂತದಲ್ಲಿಯೂ ಲೋ ಸ್ಪೀಡ್ ಏರ್ ಎಂಡ್ ಗಳು ಮತ್ತು ಹಗುರವಾದ ಹೊರ ಆವರಣಗಳಿವೆ. ಇವು ಉತ್ತಮ ಉಷ್ಣ ನಿರ್ವಹಣೆಯನ್ನು ಖಚಿತಪಡಿಸುತ್ತವೆ. ಹೆಚ್ಚಳವಾಗಲಿದೆ. ಐಇ4 ಸೂಪರ್ ಪ್ರೀಮಿಯಂ ಮೋಟಾರ್‌ಗಳು, ಸುಧಾರಿತ ವಿನ್ಯಾಸ ಮತ್ತು ಅತ್ಯಾಧುನಿಕ ತಂತ್ರಜ್ಞಾನದ ಮಿಶ್ರಣವಾಗಿದ್ದು, ಇದರಿಂದಾಗಿ ಶಕ್ತಿ ದಕ್ಷತೆ ಹೆಚ್ಚಾಗುತ್ತದೆ. ಎಲ್ಲಾ ಇಜಿ ಸೂಪರ್ ಪ್ರೀಮಿಯಂ ಯಂತ್ರಗಳು ನ್ಯೂರಾನ್ 4 ಇಂಡಸ್ಟ್ರಿಯಲ್ ಕಂಟ್ರೋಲರ್ ಗಳನ್ನು ಹೊಂದಿದ್ದು, ಅದರಿಂದ ಅತ್ಯುತ್ತಮ ಕಾರ್ಯಕ್ಷಮತೆ ದೊರೆಯಲಿದೆ. ಇಜಿ ಸೂಪರ್ ಪ್ರೀಮಿಯಂ ವಿಶಿಷ್ಟವಾದ ಆಯಿಲ್ ಫಿಲ್ಟರ್ ಹೊಂದಿದ್ದು, ಇದರಿಂದ ಉತ್ಪನ್ನವು ಹೆಚ್ಚುವರಿ 4000-ಗಂಟೆಗಳ ಹೆಚ್ಚಿನ ಜೀವಿತಾವಧಿ ಒದಗಿಸುತ್ತದೆ. ಈ ಫಿಲ್ಟರ್ ಕಂಪ್ರೆಸರ್ ನ ಲುಬ್ರಿಕೇಷನ್ ಸಿಸ್ಟಮ್ ನಿಂದ ಮಾಲಿನ್ಯಕಾರಕ ಕಂಟ್ರೋಲರ್ ಜೊತೆ ಸಂಯೋಜನೆಗೊಂಡು ಶಕ್ತಿ ದಕ್ಷತೆ ನೀಡುತ್ತವೆ ಮತ್ತು 24x7 ಗ್ಲೋಬಲ್ ರಿಮೋಟ್ ಮಾನಿಟರಿಂಗ್ ಮಾಡುವ ಅವಕಾಶ ಒದಗಿಸುವ ಮೂಲಕ ಕಂಪ್ರೆಸರ್ ನಿರ್ವಹಣೆಯನ್ನು ಸುಲಭಗೊಳಿಸುತ್ತದೆ.

ISAAME (ಭಾರತ, ದಕ್ಷಿಣ ಏಷ್ಯಾ, ಆಫ್ರಿಕಾ, ಮತ್ತು ಮಧ್ಯಪ್ರಾಚ್ಯ) ಮತ್ತು SEA (ಆಗ್ನೇಯ ಏಷ್ಯಾ), Elgi Equipment's Limited ನ ಅಧ್ಯಕ್ಷರಾದ ಭಾವೇಶ್ ಕಲಿಯಾ ಮಾತನಾಡಿ, "ಎಲ್ಜಿ ಕಂಪನಿಯು ಗ್ರಾಹಕರಿಗೆ ದಕ್ಷತೆಯ ಲಾಭ ಮತ್ತು ತಾಂತ್ರಿಕ ಪ್ರಗತಿ ದೊರಕಿಸುವ ಅಚಲ ಬದ್ಧತೆಯನ್ನು ಹೊಂದಿದೆ. ಇಜಿ ಸೂಪರ್ ಪ್ರೀಮಿಯಂ ಮೂಲಕ ಕಂಪ್ರೆಸ್ಡ್ ಏರ್ ತಂತ್ರಜ್ಞಾನದಲ್ಲಿ ದಕ್ಷತೆ ಮತ್ತು ವಿಶ್ವಾಸಾರ್ಹತೆಯಲ್ಲಿ ಹೊಸ ಮಾನದಂಡಗಳನ್ನು ಸ್ಥಾಪಿಸಿ ಹೆಚ್ಚು ಕಾರ್ಯಕ್ಷಮತೆ ಒದಗಿಸುವ ನಮ್ಮ ಅನ್ವೇಷಣೆಯಲ್ಲಿ ಒಂದು ಹೆಜ್ಜೆ ಮುಂದಿಟ್ಟಿದ್ದೇವೆ. ಕಂಪ್ರೆಸರ್‌ನ ಒಟ್ಟು ಲೈಫ್ ಸೈಕಲ್ ವೆಚ್ಚದ 80%ಕ್ಕಿಂತಲೂ ಹೆಚ್ಚು ವಿದ್ಯುತ್ ವೆಚ್ಚ ಉಂಟಾಗುತ್ತದೆ ಎಂಬುದನ್ನು ಗಮನಿಸಿ ಇಜಿ ಸೂಪರ್ ಪ್ರೀಮಿಯಂ ಕಂಪ್ರೆಸರ್‌ಗಳಲ್ಲಿ 15% ವಿದ್ಯುತ್ ಉಳಿತಾಯ ಪ್ರಯೋಜನ ಒದಗಿಸಿದ್ದೇವೆ. ಅವುಗಳನ್ನು ಇಂಧನ ದಕ್ಷತೆ ಮತ್ತು ಪರಿಸರ ನಿರ್ವಹಣೆಗೆ ಒತ್ತು ನೀಡುವ ಉತ್ಪಾದನಾ ಉದ್ಯಮಗಳಿಗೆ ಅನುಗುಣವಾಗಿ ವಿನ್ಯಾಸಗೊಳಿಸಲಾಗಿದೆ ಮತ್ತು ತಮ್ಮ ನವೀನ ವೈಶಿಷ್ಟ್ಯಗಳ ಮೂಲಕ ಗಣನೀಯ ವಿದ್ಯುತ್ ಉಳಿತಾಯದ ಭರವಸೆ ನೀಡುತ್ತವೆ. ಸ್ಪರ್ಧಾತ್ಮಕ ಒಟ್ಟು ದ